ಸಂಪುಟ: 22, ಸಂಚಿಕೆ: 60, ಪುಟಗಳು: 8, ಸೋಮವಾರ, 10 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

**ಸುಭಾಷಿತ**

ನೋವು ಕೊಟ್ಟವರೇ ನನಗೆ ಮಾರ್ಗದರ್ಶಕರು. ನಂಬಿಸಿ ಮೋಸ ಮಾಡಿದವರೇ ನನಗೆ ಗುರುಗಳು.

**ಪಂಚಾಂಗ**

(ಮಂಗಳವಾರ 10, ಡಿಸೆಂಬರ್-2024)
- ಶ್ರೀ ಕ್ರೋಧಿ ನಾಮ ಸಂವತ್ಸರ
- ದಕ್ಷಿಣಾಯನ, ಹಿಮಂತ ಋತು
- ಮಾರ್ಗಶಿರ ಮಾಸ, ಶುಕ್ಲ ಪಕ್ಷ
- ದಶಮಿ ತಿಥಿ, ಉತ್ತರಭಾದ್ರ ನಕ್ಷತ್ರ
- ರಾಹುಕಾಲ : 03:08 ರಿಂದ 04:34
- ಗುಳಿಕಕಾಲ : 12:16 ರಿಂದ 01:42
- ಯಮಗಂಡಕಾಲ : 09:24 ರಿಂದ 10:50





# ಮಾಜಿ ಸಿಎಂ ಎಸ್.ಎಂ.ಕೃಷ್ಣ ನಿಧನ

## ರಾಜ್ಯದಲ್ಲಿ 3 ದಿನ ಶೋಕಾಚರಣೆ | ಗಣ್ಯರಿಂದ ಸಂತಾಪ ಸೂಚನೆ

**ಬೆಂಗಳೂರು:** ಕರ್ನಾಟಕ ಕಂಡ ಧೀಮಂತ ನಾಯಕ, ಮಾಜಿ ಮುಖ್ಯಮಂತ್ರಿ, ಕೇಂದ್ರ ಸಚಿವ ಎಸ್.ಎಂ.ಕೃಷ್ಣ ಅವರು ನಿಧನರಾಗಿದ್ದಾರೆ. ಎಸ್ ಎಂ ಕೃಷ್ಣ ಅವರ ನಿಧನ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಇಂದಿನಿಂದ ಮೂರು ದಿನಗಳ ಕಾಲ ಶೋಕಾಚರಣೆ ಘೋಷಣೆ ಮಾಡಿದೆ. ಡಿಸೆಂಬರ್ 10 ರಿಂದ ಡಿಸೆಂಬರ್ 12ರವರೆಗೆ ಶೋಕಾಚರಣೆಗೆ ಘೋಷಣೆ ಮಾಡಲಾಗಿದೆ. ಮೂರು ದಿನಗಳ ಕಾಲ ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜ ಅರ್ಧಕ್ಕೆ ಹಾರಿಸಿ ಅಗಲಿದ ಹಿರಿಯ ಚೇತನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಗುವುದು ಎಂದು ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿದೆ. ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಲಾಗುವುದು.

**ಬಿಎಸ್ ಯಡಿಯೂರಪ್ಪ ಸಂತಾಪ:** ''ಧೀಮಂತ ಮುತ್ಸದ್ದಿ ರಾಜಕಾರಣಿ, ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳು, ಮಾಜಿ ಕೇಂದ್ರ ವಿದೇಶಾಂಗ ಸಚಿವರು, ಪಕ್ಷದ ಹಿರಿಯ ನಾಯಕ, ಪದ್ಮವಿಭೂಷಣ ಎಸ್.ಎಂ.ಕೃಷ್ಣ ಅವರು ನಮ್ಮನ್ನು ಬಿಟ್ಟು ಅಗಲಿದ ಸುದ್ದಿ ತಿಳಿದು ಅತೀವ ಆಘಾವಾಗಿದೆ. ರಾಷ್ಟ್ರ, ರಾಜ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ್ದ ಶ್ರೀ ಎಸ್. ಎಂ.ಕೃಷ್ಣ ಅವರ ನಿಧನದಿಂದ ನಾಡು ಒಬ್ಬ ಶ್ರೇಷ್ಠ ನಾಯಕನನ್ನು ಕಳೆದುಕೊಂಡಿದೆ. ಅವರ ಅಗಲಿಕೆಯಿಂದ ವೈಯಕ್ತಿಕವಾಗಿ ಒಬ್ಬ ಹಿರಿಯಣ್ಣನನ್ನು ಕಳೆದುಕೊಂಡ ನೋವು ನನಗಾಗಿದೆ'' ಎಂದು ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಕಂಬನಿ ಮಿಡಿದರು.



''ಎಸ್.ಎಂ.ಕೃಷ್ಣ ಅವರಿಗೆ ಅಶ್ರುಪೂರ್ಣ ಶ್ರದ್ಧಾಂಜಲಿ ಸಲ್ಲಿಸುತ್ತಾ, ಅಗಲಿದ ಆ ಹಿರಿಯ ಚೇತನಕ್ಕೆ ದೇವರು ಉತ್ತಮ ಸದ್ಗತಿಯನ್ನು ದಯಪಾಲಿಸಲಿ ಎಂದು ಪ್ರಾರ್ಥಿಸುತ್ತೇನೆ. ಅವರ ಕುಟುಂಬದ ಸದಸ್ಯರು, ಅಪಾರ ಅಭಿಮಾನಿಗಳಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಕೋರುತ್ತೇನೆ. ಓಂ ಶಾಂತಿ'' ಎಂದು ಸಂತಾಪ ಸೂಚಿಸಿದರು.

**ಬೊಮ್ಮಾಯಿ ಸಂತಾಪ:** ''ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರದ ಮಾಜಿ ಸಚಿವರಾದ ಎಸ್. ಎಂ. ಕೃಷ್ಣ ಅವರು ನಿಧನರಾಗಿರುವ ಸುದ್ದಿ ಕೇಳಿ ಅತ್ಯಂತ ದುಃಖವಾಗಿದೆ. ಮಿತ ಭಾಷಿ, ಸೌಮ್ಯ ಸ್ವಭಾವದ ಎಸ್. ಎಂ. ಕೃಷ್ಣ ಅವರು ಸುಮಾರು ಆರು ದಶಕಗಳ ಕಾಲ ರಾಜ್ಯ ಮತ್ತು ರಾಷ್ಟ್ರ ರಾಜ್ಯಕಾರಣದಲ್ಲಿ ತಮ್ಮದೇ ಆದ ಛಾಪು ಮೂಡಿಸಿ ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ'' ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸಂತಾಪ ಸೂಚಿಸಿದ್ದಾರೆ.



''ಬೆಂಗಳೂರಿಗೆ ಐಟಿ ಬಿಟಿ ಕಂಪನಿಗಳನ್ನು ತರುವ ಮೂಲಕ ಬೆಂಗಳೂರಿಗೆ ವಿಶ್ವ ಮಾನ್ಯತೆ ತಂದು ಕೊಟ್ಟಿದ್ದರು. ಅವರ ಅಗಲಿಕೆ ರಾಜ್ಯ, ರಾಷ್ಟ್ರ ರಾಜಕಾರಣದಲ್ಲಿ ಒಬ್ಬ ಮಾರ್ಗದರ್ಶಕರನ್ನು ಕಳೆದುಕೊಂಡಂತಾಗಿದೆ. ಅವರ ನಿಧನವು ನನಗೆ ವಯಕ್ತಿಕವಾಗಿ ಅತ್ಯಂತ ನೋವು ತಂದಿದ್ದು, ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ಹಾಗೂ ಅವರ ಅಪಾರ ಅಭಿಮಾನಿಗಳಿಗೆ ಆ ಭಗವಂತ ಕರುಣಿಸಲಿ, ಅವರ ಆತ್ಮಕ್ಕೆ ಶಾಂತಿ ನೀಡಲಿ ಎಂದು ಪ್ರಾರ್ಥಿಸುತ್ತೇನೆ'' ಎಂದು ಟ್ವೀಟ್ ಮಾಡಿದ್ದಾರೆ.

ಪುಟ 2



## ಸೋಮನಹಳ್ಳಿ ಕಾಫಿ ಡೇ ಆವರಣದಲ್ಲಿ ನಾಳೆ ಅಂತ್ಯಕ್ರಿಯೆ

**ಮಂಡ್ಯ:** ಬೆಂಗಳೂರಿನಲ್ಲಿ ನಿಧನರಾಗಿರುವ ಮಾಜಿ ಸಿಎಂ ಎಸ್ ಎಂ ಕೃಷ್ಣ ಅಂತ್ಯಕ್ರಿಯೆ ಅವರ ತವರು ಮದ್ದೂರಿನ ಸೋಮನಹಳ್ಳಿಯಲ್ಲಿ ಬುಧವಾರ ಸಂಜೆ ನಡೆಯಲಿದೆ. ಎಸ್ ಎಂ ಕೃಷ್ಣಗೆ ಇಷ್ಟವಾದ ಜಾಗದಲ್ಲಿಯೇ, ಅಂದರೆ ಕಾಫಿಡೇ ಆವರಣದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ವಿದೇಶದಿಂದ ಸಂಬಂಧಿಕರು ಬರಬೇಕಿರುವ ಹಿನ್ನೆಲೆ ನಾಳೆ ಅಂತ್ಯಕ್ರಿಯೆ ನಡೆಸಲು ನಿರ್ಧರಿಸಲಾಗಿದೆ.

ಸದ್ಯ ಮದ್ದೂರಿನ ಸೋಮನಹಳ್ಳಿಯಲ್ಲಿರುವ ಕಾಫಿ ಡೇ ಆವರಣದಲ್ಲಿ ಜೆಸಿಬಿ ಮೂಲಕ ಸ್ವಚ್ಛತಾ ಕಾರ್ಯ ನಡೆಸಲಾಗುತ್ತಿದೆ.

ಸೋಮನಹಳ್ಳಿಯಲ್ಲಿ ಎಸ್ ಎಂ ಕೃಷ್ಣ ಬೃಹತ್ ಮನೆ ನಿರ್ಮಿಸಿದ್ದರು. ಅದು ಅವರ ಇಷ್ಟದ ಸ್ಥಳ, ಮನೆಯೂ ಆಗಿತ್ತು. ಆದರೆ, ಬೆಂಗಳೂರು ಸೇರಿದ ಮೇಲೆ ಅವರ ಇಷ್ಟದ ಆ ಮನೆ ಖಾಲಿ ಇತ್ತು. ನಂತರದಲ್ಲಿ ಅವರು ಆ ಮನೆಯನ್ನು ಅಳಿಯ ಸಿದ್ದಾರ್ಥ್

ಪುಟ 2

## ಪ್ರಧಾನಿ ಹುದ್ದೆ ತಪ್ಪಿದ್ದು ಹೇಗೆ

ದೇವೇಗೌಡರು ಮೊದಲ ಕನ್ನಡಿಗ ಪ್ರಧಾನಿ ಎನಿಸಿಕೊಂಡವರು, ಇಂಥದ್ದೇ ಅವಕಾಶ ಎಸ್ ಎಂ ಕೃಷ್ಣರಿಗೂ ಕೂಡ ಬಂದಿತ್ತು, ಆದರೆ 2004ರಲ್ಲಿ ಅಟಲ್ ಬಿಹಾರಿ ವಾಜಪೇಯಿ ಅಧಿಕಾರ ಕಳೆದುಕೊಂಡು ಕೇಂದ್ರದಲ್ಲಿ ಅತಂತ್ರ ಪರಿಸ್ಥಿತಿ ನಿರ್ಮಾಣವಾದಾಗ ಕಾಂಗ್ರೆಸ್ ಮುಂದೆ ಎರಡು ಅವಕಾಶಗಳಿತ್ತು. ಸೋನಿಯಾಗಾಂಧಿ ಪ್ರಧಾನಿ ಹುದ್ದೆಗೆ ಒಪ್ಪಲು ತಯಾರಿರಲಿಲ್ಲ. ಪ್ರಧಾನಿ ಹುದ್ದೆಯ ರೇಸ್ ನಲ್ಲಿ ಮನಮೋಹನ್ ಸಿಂಗ್ ಜತೆಗೆ ಎಸ್ ಎಂ ಕೃಷ್ಣ ಹೆಸರೂ ಮುನ್ನೆಲೆಗೆ ಬಂದಿತ್ತು. ಈ ವಿಚಾರವನ್ನು ಖುದ್ದು ಮನಮೋಹನ್ ಸಿಂಗ್ ಅವರೇ ಎಸ್ ಎಂ ಕೃಷ್ಣ ಅವರಿಗೆ ತಿಳಿಸಿದ್ದರಂತೆ. ಇದನ್ನು ಅವ ಆತ್ಮಚರಿತ್ರೆಯಲ್ಲಿ ವಿವರಿಸಲಾಗಿದೆ.



ಈ ಬಗ್ಗೆ ಎಸ್ ಎಂ ಕೃಷ್ಣ ಅವರು ಅಷ್ಟು ಮಾತನಾಡದಿದ್ದರೂ ಹೀಗೊಂದು ಅವಕಾಶ ಬಂದಿತ್ತು ಎಂಬುದನ್ನು ಹೇಳಿಕೊಂಡಿದ್ದಾರೆ. ಈ ಮೂಲಕ ಕರ್ನಾಟಕಕ್ಕೆ ಅನಿವಾರ್ಯ ಕಾರಣದಿಂದ ಎರಡನೇ ಪ್ರಧಾನಿ ಹುದ್ದೆ ಕೈತಪ್ಪಿತು, ಎಸ್ ಎಂ ಕೃಷ್ಣ ಅವರಿಗೆ ದೇಶದ ಆಡಳಿತಾತ್ಮಕ ಹುದ್ದೆಯಲ್ಲಿ ಇರುವ ಅವಕಾಶ ಕೈತಪ್ಪಿತ್ತು. ಆದರೆ ಇದಕ್ಕೆ ಸ್ಪಷ್ಟ ಕಾರಣ ಏನೆಂಬುದು ಮಾತ್ರ ನಿಗೂಢವಾಗಿಯೇ ಉಳಿದಿದೆ ಇದಕ್ಕೆ ಸೋನಿಯಾ ಗಾಂಧಿ ಮಾತ್ರ ಉತ್ತರ ನೀಡಬಲ್ಲರು.

**ಕರ್ನಾಟಕದ ರಾಜಕೀಯ ಚಿತ್ರಣ ಬದಲಾಗಿತ್ತು:** ಪ್ರಧಾನಿ ಹುದ್ದೆ ಚರ್ಚೆಯಾದ ಬಳಿಕ ಕರ್ನಾಟಕದಲ್ಲಿ ರಾಜಕೀಯ ಚಿತ್ರಣ ಬದಲಾಗಿತ್ತು, ಜನರ ನಾಡಿ ಮಿಡಿತವನ್ನು ತಪ್ಪಾಗಿ ಅರ್ಥೈಸಿದ್ದ ಎಸ್ ಎಂ ಕೃಷ್ಣ ಲೋಕಸಭೆ ಚುನಾವಣೆ ಜತೆಗೆ ರಾಜ್ಯ ವಿಧಾನಸಭಾ ಚುನಾವಣೆಯನ್ನು ನಡೆಸಲು ವಿಧಾನಸಭೆಯನ್ನು ವಿಸರ್ಜನೆ ಮಾಡಿದ್ದರು.

ಆದರೆ ಕಾಂಗ್ರೆಸ್‌ಗೆ ನಿರೀಕ್ಷಿತ ಸೀಟುಗಳು ಸಿಗಲಿಲ್ಲ, ಹಾಗೆಯೇ ಕರ್ನಾಟಕದಲ್ಲಿ ಅತಂತ್ರ ವಿಧಾನಸಭೆ ರಚನೆಯಾಗಿತು. ಯಾವುದೇ ಪಕ್ಷಕ್ಕೂ ಬಹುಮತ ದೊರೆಯಲಿಲ್ಲ, ಈ ಹಂತದಲ್ಲಿ ಕರ್ನಾಟಕವು ಸಮ್ಮಿಶ್ರ ಸರ್ಕಾರದತ್ತ ಮೊದಲ ಬಾರಿಗೆ ತಿರುಗಿ ನೋಡುವಂತಾಯಿತು. ಆಗ ಕಾಂಗ್ರೆಸ್ ನೊಂದಿಗೆ ಜೆಡಿಎಸ್ ಕೈಜೋಡಿಸಿತು.

**ಮುಖ್ಯಮಂತ್ರಿಯಾಗಿ ಮುಂದುವರೆಸಲು ಜೆಡಿಎಸ್ ಸಿದ್ಧವಿರಲಿಲ್ಲ:** ಈ ಹಂತದಲ್ಲಿ ಎಸ್ ಎಂ ಕೃಷ್ಣ ಒಕ್ಕಲಿಗ ನಾಯಕರಾಗಿರುವುದರಿಂದ ಅವರನ್ನೇ ಮುಖ್ಯಮಂತ್ರಿಯನ್ನಾಗಿ ಮುಂದುವರೆಸಲು

ಪುಟ 2

## ಪ್ರಧಾನಿ ಮೋದಿ ಸಂತಾಪ



ಎಸ್.ಎಂ.ಕೃಷ್ಣ ಓರ್ವ ಅಸಾಧಾರಣ ನಾಯಕರಾಗಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬಿಜೆಪಿ ಹಿರಿಯ ನಾಯಕ ಎಸ್ ಎಂ ಕೃಷ್ಣ ನಿಧನರಾಗಿದ್ದಾರೆ, ಎಕ್ಸ್ ನಲ್ಲಿ ಪೋಸ್ಟ್ ಮಾಡಿ ಮೋದಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಎಸ್ ಎಂ ಕೃಷ್ಣ ಅವರು ಸಮಾಜದ ಎಲ್ಲ ವರ್ಗಗಳ ಜನರಿಂದ ಮೆಚ್ಚುಗೆಗೆ ಪಾತ್ರರಾಗಿದ್ದರು. ಅವರು ಯಾವಾಗಲೂ ಇತರರ ಜೀವನವನ್ನು ಸುಧಾರಿಸಲು ಶ್ರಮಿಸಿದ್ದರು. ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ತಮ್ಮ ಅಧಿಕಾರಾವಧಿಯಲ್ಲಿ ವಿಶೇಷವಾಗಿ ಮೂಲಸೌಕರ್ಯ ಅಭಿವೃದ್ಧಿ

ಪುಟ 2

## ರಾಜ್ ಕುಮಾರ್–ಎಸ್.ಎಂ ಕೃಷ್ಣ ಮಧ್ಯೆ ಆಗಿತ್ತು ಒಪ್ಪಂದ
## ಅದನ್ನು ಮೀರಿದಾಗ ನಡೆದಿತ್ತು ಅಪಹರಣ

ಹಿರಿಯ ರಾಜಕಾರಣಿ, ಮಾಜಿ ಸಿಎಂ ಎಸ್ ಎಂ ಕೃಷ್ಣ ಅವರ ಮುಖ್ಯಮಂತ್ರಿ ಅವಧಿ ಎಲ್ಲರಿಗೂ ನೆನಪಿನಲ್ಲಿ ಇರುವಂಥದ್ದು. ಅದಕ್ಕೆ ಕಾರಣ ಅವರು ಎದುರಿಸಿದ ಚಾಲೆಂಜ್ . ವರನಟ ಡಾ. ರಾಜ್ ಕುಮಾರ್ ಅವರು ಅಪಹರಣ ಆಗಿದ್ದು ಕೃಷ್ಣ ಅವರ ಅಧಿಕಾರ ಅವಧಿಯಲ್ಲೇ. ಸಿಎಂ ಆಗಿ ಅಧಿಕಾರ ಸ್ವೀಕರಿಸಿದ ಮರು ವರ್ಷವೇ ವೀರಪ್ಪನ್ ಕಡೆಯಿಂದ ಅಣ್ಣಾವ್ರು ಕಿಡ್ನ್ಯಾಪ್ ಆದರು. ವೀರಪ್ಪನ್ 108 ದಿನಗಳ ಕಾಲ ಅಣ್ಣಾವ್ರನ್ನು ತಮ್ಮ ವಶದಲ್ಲಿ ಇಟ್ಟುಕೊಂಡಿದ್ದ. ಆ ದಿನಗಳ ಬಗ್ಗೆ ಈಗಲೂ ಚರ್ಚೆಗಳು ಆಗುತ್ತವೆ. ರಾಜ್ ಕುಮಾರ್ ಅವರಿಗೂ ಕರ್ನಾಟಕ ಸರ್ಕಾರಕ್ಕೂ ಒಂದು ಒಪ್ಪಂದ ಆಗಿತ್ತು. ಆದರೆ, ಇದನ್ನು ಅಣ್ಣಾವ್ರು ಮೀರಿದಾಗ ಎಡವಟ್ಟು ಸಂಭವಿಸಿತ್ತು.



ಈ ಮೊದಲು ಕೃಷ್ಣ ಅವರು ರಾಜ್ ಕುಮಾರ್ ಅಪಹರಣದ ಬಗ್ಗೆ ಮಾತನಾಡಿದ್ದರು. ರಾಜ್ ಕುಮಾರ್ ಗೆ ಕೊಟ್ಟ ಎಚ್ಚರಿಕೆ ಬಗ್ಗೆಯೂ ಅವರು ಹೇಳಿಕೊಂಡಿದ್ದರು. ರಾಜ್ ಕುಮಾರ್ ಅವರಿಗೆ ವೀರಪ್ಪನ್ ಕಡೆಯಿಂದ ತೊಂದರೆ ಇದೆ ಎಂಬ ಸೂಚನೆ ರಾಜ್ಯ ಸರ್ಕಾರಕ್ಕೆ ಮೊದಲೇ ಇತ್ತು. ಈ ಕಾರಣದಿಂದಲೇ ರಾಜ್ ಕುಮಾರ್ ಜೊತೆ ರಾಜ್ಯ

ಪುಟ 2

## ಎಸ್.ಎಂ ಬರೆದ ಕೊನೆಯ ಪತ್ರ

**ಮಂಡ್ಯ:** ಮಂಡ್ಯದಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಹಾರೈಸಿ ಎಸ್ ಎಂ ಕೃಷ್ಣ ವಾರದ ಹಿಂದೆ ಮಂಡ್ಯ ಜಿಲ್ಲಾಡಳಿತಕ್ಕೆ ಪತ್ರ ಬರೆದಿದ್ದರು. ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲೆಂದು ಶುಭಸಂದೇಶ ಕಳುಹಿಸಿದ್ದರು.

**ಎಸ್ ಎಂ ಕೃಷ್ಣ ಕೊನೆಯ ಪತ್ರದಲ್ಲೇನಿದೆ :** ''ಮಂಡ್ಯ ಜಿಲ್ಲೆಯಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ನನ್ನ ಶುಭಾಶಯಗಳು. ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ದೂರದೃಷ್ಟಿಯ ಫಲವಾಗಿ ರೂಪುಗೊಂಡ ಮಂಡ್ಯ ಜಿಲ್ಲೆ ನಾಡಿನಲ್ಲಿ ಅತಿ ಹೆಚ್ಚು ಕನ್ನಡ ಮಾತನಾಡುವ ಭಾಷಿಕರು ಇರುವ ಜಿಲ್ಲೆ. ಇಂತಹ ಐತಿಹ್ಯವುಳ್ಳ ನಮ್ಮ ಮಂಡ್ಯ ಜಿಲ್ಲೆಯಲ್ಲಿ 3ನೇ ಬಾರಿಗೆ ಆಯೋಜನೆಗೊಂಡಿರುವ ಕನ್ನಡದ ಸಿರಿಹಬ್ಬವು ಯಶಸ್ವಿಯಾಗಿ ಜರುಗಲೆಂದು ಶುಭ ಹಾರೈಸುತ್ತೇನೆ'' ಎಂದು ಕೊನೆಯ ಪತ್ರದಲ್ಲಿ ಎಸ್ ಎಂ ಕೃಷ್ಣ ಉಲ್ಲೇಖಿಸಿದ್ದರು.

ಪುಟ 2


ಶುಭ ಸಂದೇಶ

ಎಸ್ ಎಂ ಕೃಷ್ಣ

## ಸಂಕ್ಷಿಪ್ತ ಸುದ್ದಿ

### ಅಂಗಾಂಗ, ದೇಹದಾನ ಮಾಡುವ ಮೂಲಕ ಸಾವಿನಲ್ಲೂ ಸಾರ್ಥಕ ಮೆರೆದ ವೈದ್ಯ ಕುಟುಂಬ

**ಕೋಲಾರ:** ಅಪಘಾತದಲ್ಲಿ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ವೈದ್ಯ, ಸಂಧ್ಯಾ (24) ನಿಧನರಾಗಿದ್ದಾರೆ. ಅವರ ದೇಹದ ಅಂಗಾಂಗಳನ್ನು ಹಾಗೂ ದೇಹವನ್ನು ಕುಟುಂಬದವರು ದಾನ ಮಾಡುವ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ. ಮೂಲತಃ ಬೆಂಗಳೂರಿನವರಾದ ವೈದ್ಯ, ಸಂಧ್ಯಾ, ಕುಟುಂಬಸ್ಥರು ಕೋಲಾರದ ಕೆಜಿಎಫ್ ನಲ್ಲಿ ವಾಸವಾಗಿದ್ದರು. ಸಂಧ್ಯಾ, ಅವರು ಬಂಗಾರಪೇಟೆ ತಾಲೂಕು ಬೂದಿಕೋಟೆ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯೆಯಾಗಿ ಕಾರ್ಯನಿರ್ವಹಿಸುತ್ತಿದ್ದರು. ವೈದ್ಯ, ಸಂಧ್ಯಾ, ಅವರು ಕೆಜಿಎಫ್ ನಿಂದ ಬೂದಿಕೋಟೆ ಮೆಡಿಕಲ್ ಕಾಲೇಜಿಗೆ ನಿತ್ಯ ಬಸ್ ನಲ್ಲಿ ಹೋಗುತ್ತಿದ್ದರು. ಆದರೆ, ಡಿಸೆಂಬರ್ 6 ರಂದು ಬಸ್ ಮಿಸ್ ಆಗಿದ್ದರಿಂದ ತಂದೆಯೊಂದಿಗೆ ಬೈಕ್ ನಲ್ಲಿ ಕಾಲೇಜಿಗೆ ಹೋಗುತ್ತಿದ್ದರು. ಮಾರ್ಗ ಮಧ್ಯೆ, ಗಾಜಗ ಗ್ರಾಮದ ಬಳಿ ಅವೈಜ್ಞಾನಿಕ ಸ್ಪೀಡ್ ಹಂಪ್ ದಾಟುವ ವೇಳೆ ಬೈಕ್ ನಿಂದ ಬಿದ್ದು ಸಂಧ್ಯಾ, ಅವರ ತಲೆಗೆ ಗಾಯವಾಗಿತ್ತು.



ಪುಟ 2

### ಬಾಳೆಹಣ್ಣಿಗಾಗಿ ನಡೆದ ಮಂಗಗಳ ಜಗಳದಿಂದ ರೈಲು ಸಂಚಾರಕ್ಕೆ ಅಡ್ಡಿ

**ಬರೌನಿ:** ಬಾಳೆಹಣ್ಣಿಗಾಗಿ ಎರಡು ಮಂಗಗಳ ನಡುವೆ ನಡೆದ ಜಗಳವು ರೈಲು ಸಂಚಾರಕ್ಕೆ ಅಡ್ಡಿಪಡಿಸಿರುವ ಘಟನೆ ಬಿಹಾರದ ಸಮಷ್ಟಿಪುರದಲ್ಲಿ ನಡೆದಿದೆ. ಮಂಗಗಳ ಕಾಳಗ ನೋಡಿ ರೈಲು ನಿಲ್ದಾಣದಲ್ಲಿದ್ದವರು ಅಚ್ಚರಿಪಟ್ಟರು. ಈ ಘಟನೆಯು ನಿಲ್ದಾಣದ ಬರೌನಿ ಲೈನ್‌ನ ಪೂರ್ವ ಕಾಲು ಮೇಲ್ಸೇತುವೆಯ ಬಳಿ ಸಂಭವಿಸಿದೆ. ಬಾಳೆಹಣ್ಣಿನ ಮೇಲೆ ಎರಡು ಕೋತಿಗಳ ನಡುವೆ ನಡೆದ ಜಗಳದಲ್ಲಿ ಒಂದು ಕೋತಿಯ ಹಿಡಿತದಿಂದ ಹಣ್ಣು ಕೆಳಗಿರುವ ಓವರ್‌ಹೆಡ್ ತಂತಿಗಳ ಮೇಲೆ ಬಿದ್ದಿತು. ಘರ್ಷಣೆಯಿಂದಾಗಿ ಶಾರ್ಟ್ ಸರ್ಕ್ಯೂಟ್ ಉಂಟಾಗಿತ್ತು.



ಪುಟ 2

## ಎಸ್‌ಎಂ ಕೃಷ್ಣ ಅಂತಿಮ ದರ್ಶನ ಪಡೆದ ರಮ್ಯಾ

**ಬೆಂಗಳೂರು:** ನಟಿ ರಮ್ಯಾ ಅವರು ಸದಾಶಿವನಗರ ಆಗಮಿಸಿ ಎಸ್ ಎಂ ಕೃಷ್ಣ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು. ಈ ವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು ಈಗ ನಾನು ಮಾತನಾಡುವ ಸ್ಥಿತಿಯಲ್ಲಿ ಇಲ್ಲ ಎಂದು ಹೇಳಿ ತೆರಳಿದರು.



ರಮ್ಯಾ ಅವರನ್ನು ರಾಜಕಾರಣಕ್ಕೆ ಕರೆತಂದಿದ್ದೆ ಎಸ್‌ಎಂಕೆ. ಈ ಕಾರಣದಿಂದ ಹಲವಾರು ಬಾರಿ ರಮ್ಯಾ ಅವರು ಎಸ್‌ಎಂಕೆ ನಿವಾಸಕ್ಕೆ ತೆರಳಿ ಮಾತನಾಡಿ ಸಲಹೆಗಳನ್ನು ಪಡೆಯುತ್ತಿದ್ದರು.

ಎಸ್.ಎಂ.ಕೃಷ್ಣ ಅವರ ನೇತೃತ್ವದಲ್ಲೇ ರಾಜಕಾರಣಕ್ಕೆ ಕಾಲಿಟ್ಟ ರಮ್ಯಾ ಅವರು ಕಾಂಗ್ರೆಸ್ ಪಕ್ಷದಲ್ಲಿ ಅತ್ಯಂತ ಶೀಘ್ರವಾಗಿ ಬೆಳೆದರು. ತಮ್ಮ ಸೆಲೆಬ್ರಿಟಿ ಇಮೇಜ್‌ನಿಂದಾಗಿ ಹೈಕಮಾಂಡ್‌ನಲ್ಲಿ ಶೀಘ್ರವಾಗಿ ಗುರುತಿಸಿಕೊಂಡಿದ್ದರು.

ಕಾಂಗ್ರೆಸ್ ವರಿಷ್ಠೆ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಸೇರಿ ಹೈಕಮಾಂಡ್‌ನ ಪ್ರಭಾವಶಾಲಿ ನಾಯಕರ ಜೊತೆ ನೇರವಾಗಿ ಸಂಪರ್ಕ ಸಾಧಿಸಬಲ್ಲ ರಾಜ್ಯದ ಕೆಲವೇ ಕಾಂಗ್ರೆಸ್ಸಿಗರಲ್ಲಿ ರಮ್ಯಾ ಕೂಡ ಒಬ್ಬರಾಗಿದ್ದರು.

ಪುಟ 2

## ಎಸ್‌ಎಂಕೆ ಐಟಿ ಬಿಟಿ ಕೊಡುಗೆಗೆ ಕರ್ನಾಟಕ ಸದಾ ಋಣಿ

**ಬೆಂಗಳೂರು:** ಮಾಜಿ ಸಿಎಂ ಎಸ್ ಎಂ ಕೃಷ್ಣ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂಬನಿ ಮಿಡಿದಿದ್ದಾರೆ. ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಕೃಷ್ಣ ಅವರು ಕರ್ನಾಟಕಕ್ಕೆ ನೀಡಿದ ಕೊಡುಗೆಗಳನ್ನು ನೆನಪಿಸಿಕೊಂಡಿದ್ದಾರೆ.



ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಸಾವಿನಿಂದ ಆಘಾತಕ್ಕೀಡಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಸಲ್ಲಿಸಿರುವ ಸೇವೆ ಅನುಪಮವಾದುದು. ವಿಶೇಷವಾಗಿ ಮುಖ್ಯಮಂತ್ರಿಯಾಗಿ ಐಟಿ-ಬಿಟಿ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ ಕರ್ನಾಟಕ ಸದಾ ಋಣಿಯಾಗಿರುತ್ತದೆ.

**ಸಿಎಂ ಶೋಕ ಸಂದೇಶದಲ್ಲೇನಿದೆ?:** ಎಸ್.ಎಂ.ಕೃಷ್ಣ ಅವರ ಸಾವಿನಿಂದ ನಾನು ಆಘಾತಕ್ಕೀಡಾಗಿದ್ದೇನೆ. ರಾಜ್ಯ ಮತ್ತು ಕೇಂದ್ರ ಸಚಿವರಾಗಿ ಹಾಗೂ ಮುಖ್ಯಮಂತ್ರಿಯಾಗಿ ಕೃಷ್ಣ ಅವರು ಸಲ್ಲಿಸಿರುವ ಸೇವೆ ಅನುಪಮವಾದುದು. ವಿಶೇಷವಾಗಿ ಮುಖ್ಯಮಂತ್ರಿಯಾಗಿ ಐಟಿ-ಬಿಟಿ ಕ್ಷೇತ್ರದ ಬೆಳವಣಿಗೆಗೆ ಅವರು ನೀಡಿರುವ ಕೊಡುಗೆಗಾಗಿ ಕರ್ನಾಟಕ ಸದಾ ಋಣಿಯಾಗಿರುತ್ತದೆ. ಮುತ್ಸದ್ದಿ ರಾಜಕಾರಣಿಯಾಗಿದ್ದ ಕೃಷ್ಣ ಅವರು ಅಜಾತಶತ್ರುಗಳಾಗಿದ್ದರು. ನಾನು ಕಾಂಗ್ರೆಸ್ ಪಕ್ಷಕ್ಕೆ ಸೇರಿದ ಪ್ರಾರಂಭದ ದಿನಗಳಲ್ಲಿ ನನಗೆ ಮಾರ್ಗದರ್ಶಕರಾಗಿದ್ದ ಕೃಷ್ಣ ಅವರು ಸದಾ ನನ್ನ ಹಿತೈಷಿಗಳಾಗಿದ್ದರು ಎಂದು ಅವರು ಹೇಳಿಕೊಂಡಿದ್ದಾರೆ.

ಪುಟ 2

## ಅಮೆರಿಕ ಮಾಜಿ ಅಧ್ಯಕ್ಷ ಜಾನ್ ಎಫ್ ಕೆನಡಿ ಪ್ರೇರಣೆಯಿಂದ ರಾಜಕೀಯ ಸೇರಿದ್ದ ಎಂಸ್‌ಎಂಕೆ

**ಬೆಂಗಳೂರು:** ಅಮೆರಿಕ ಮಾಜಿ ಅಧ್ಯಕ್ಷ ಜಾನ್ ಎಫ್ ಕೆನಡಿ ಪ್ರಭಾವದಿಂದಾಗಿ ಎಸ್‌ಎಂ ಕೃಷ್ಣ ರಾಜಕೀಯ ರಂಗ ಸೇರಿದ್ದರು.

ಹೌದು. 1950 ರಂದು ಮೈಸೂರು ಮಹಾರಾಜ ಕಾಲೇಜಿನಲ್ಲಿ ಬಿಎ ಪದವಿ ಪಡೆದ ನಂತರ 1955 ರಲ್ಲಿ ಬೆಂಗಳೂರಿನ ಲಾ ಕಾಲೇಜಿನಲ್ಲಿ ಕೃಷ್ಣ ಬಿ.ಎಲ್ ಪದವಿ ಪಡೆದರು.



ಆ ಕಾಲದ ಹೆಸರಾಂತ ವಕೀಲರಾದ ಗಣೇಶರಾಯರ ಬಳಿ ಜೂನಿಯರ್ ಆಗಿ ಸೇರಿದ್ದರು. 1958 ರಲ್ಲಿ ಉನ್ನತ ವ್ಯಾಸಂಗಕ್ಕೆ ಕೃಷ್ಣ ಅವರು ಅಮೆರಿಕಗೆ ತೆರಳುತ್ತಾರೆ. ಅಲ್ಲಿನ ಟೆಕ್ಸಾಸ್‌ನ ಡಲ್ಲಾಸ್ ನಗರದ ಸದರನ್ ಮೆಥಾಡಿಸ್ಟ್ ವಿವಿಯಲ್ಲಿ ಎಂ.ಸಿ.ಎಲ್ ಪದವಿ ಪಡೆಯುತ್ತಾರೆ. ನಂತರ ವಾಷಿಂಗ್ಟನ್ ವಿಶ್ವವಿದ್ಯಾಲಯದಲ್ಲಿ ಪಿಹೆಚ್‌ಡಿಗೆ ಸೇರಿದರೂ ಅವರು ಪೂರ್ಣಗೊಳಿಸುವುದಿಲ್ಲ.

ಪುಟ 2

## ರಾಜಕಾರಣದ ಮೊದಲು ಗುರು, ಮಗನ ರೀತಿ ನೋಡುತ್ತಿದ್ದರು ಡಿಕೆಶಿ ಕಣ್ಣೀರು

**ಬೆಳಗಾವಿ:** ಎಸ್‌ಎಂ ಕೃಷ್ಣ ಅವರು ನನ್ನನ್ನು ಮಗನ ರೀತಿ ನೋಡುತ್ತಿದ್ದರು. ರಾಜಕಾರಣದಲ್ಲಿ ಬೆಳೆಯಲು ಮಾರ್ಗದರ್ಶನ ನೀಡಿದವರು ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.



ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮ ಜೊತೆ ಮಾತನಾಡಿದ ಅವರು, ಬೇರೆಯವರಿಗೂ ನನಗೂ ಬಹಳ ವ್ಯತ್ಯಾಸವಿದೆ. ನಾನು ಅವರನ್ನು ಬಹಳ ಹತ್ತಿರದಿಂದ ನೋಡಿದ್ದೇನೆ ಎಂದು ಹೇಳಿ ಕಣ್ಣೀರು ಹಾಕಿದರು.

ಇವತ್ತು ಬೆಳಗ್ಗೆ 3 ಗಂಟೆಗೆ ಪುತ್ರಿ ಕರೆ ಮಾಡಿ ವಿಚಾರ ತಿಳಿಸಿದಳು. ನಮ್ಮ ಕುಟುಂಬಕ್ಕೆ ಇದು ದೊಡ್ಡ ಆಘಾತ. ನಾನು ಅವರ ಕುಟಂಬದ ಒಬ್ಬ ಸದಸ್ಯ. ರಾಜಕಾರಣದಲ್ಲಿ ನಾನು ಬೆಳೆದಿದ್ದು, ಅವರು ನನ್ನನ್ನು ಬೆಳೆಸಿದ್ದು ದೊಡ್ಡ ಇತಿಹಾಸವಿದೆ ಎಂದರು.

ನನ್ನ ರಾಜಕಾರಣದ ಮೊದಲ ಗುರು. ಅವರ ಮತ್ತು ನನ್ನ ಒಡನಾಟದ ಇತಿಹಾಸವನ್ನು ಈಗ ನಾನು ಹೇಳುವುದಿಲ್ಲ. ನಾನು ಏನಾದ್ರೂ ತಪ್ಪು ಮಾಡಿದರೆ ಬಹಳ ನೊಂದು ಮಾತನಾಡುತ್ತಿದ್ದರು ಎಂದು ತಿಳಿಸಿದರು.

ಪುಟ 2

## ಸರ್ಕಾರದ ಬೇಜವಾಬ್ದಾರಿತನದಿಂದ ಬಾಣಂತಿಯರು, ಹಸುಗೂಸುಗಳ ಸಾವು

**ಬೆಳಗಾವಿ:** ಬಾಣಂತಿಯರು ಮತ್ತು ಹಸುಗೂಸುಗಳ ಸಾವಿನಲ್ಲಿ ರಾಜ್ಯ ಸರ್ಕಾರದ ಬೇಜವಾಬ್ದಾರಿತನ ಮೇಲ್ನೋಟಕ್ಕೆ ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿವೈ.ವಿಜಯೇಂದ್ರ, ಆರೋಪಿಸಿದರು.

ಬೆಳಗಾವಿಯಲ್ಲಿ ಆಸ್ಪತ್ರೆಗೆ ಭೇಟಿ ಕೊಟ್ಟ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು. ಸತ್ಯಾಂಶ ತಿಳಿಯಲು ಇಲ್ಲಿಗೆ ಬಂದಿದ್ದೇವೆ. ಆಸ್ಪತ್ರೆ ಭೇಟಿಯಲ್ಲಿ ರಾಜಕಾರಣದ ಪ್ರಶ್ನೆ ಇಲ್ಲ. ಇವತ್ತು ಬಡವರಿಗೆ ಅನ್ಯಾಯ ಆಗುತ್ತಿದೆ. ಬಾಣಂತಿಯರು, ಹಸುಗೂಸುಗಳು ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇದನ್ನು ಸದನದಲ್ಲಿ ಚರ್ಚಿಸುತ್ತೇವೆ ಎಂದು ತಿಳಿಸಿದರು.ಉಸ್ತುವಾರಿ ಸಚಿವರು, ಆರೋಗ್ಯ ಸಚಿವರು, ವೈದ್ಯಕೀಯ ಶಿಕ್ಷಣ ಸಚಿವರು ಈ ಸಾವುಗಳ ಕುರಿತು ತಲೆ ಕೆಡಿಸಿಕೊಂಡಿಲ್ಲ. ಈ ಬೇಜವಾಬ್ದಾರಿತನ ಏನಿದೆಯೋ? ಅದನ್ನು ಸರ್ಕಾರ ಈಗಲಾದರೂ ಎಚ್ಚೆತ್ತು ಗಮನಿಸಬೇಕು ಎಂಬ ದೃಷ್ಟಿಯಿಂದ ಇದರ ಕುರಿತು ಗಮನ ಸೆಳೆಯುತ್ತೇವೆ ಎಂದು ಹೇಳಿದರು.



## ಆಸ್ಪತ್ರೆಗಳು ಶವಾಗಾರವಾಗುವ ಪರಿಸ್ಥಿತಿ, ಇದಕ್ಕೆ 'ಕೈ' ಸರ್ಕಾರವೇ ಕಾರಣ

**ಬೆಳಗಾವಿ:** ಬಾಣಂತಿಯರು, ಹಸುಗೂಸುಗಳ ಸಾವಿನಿಂದಾಗಿ ಆಸ್ಪತ್ರೆಗಳು ಶವಾಗಾರವಾಗುವ ಪರಿಸ್ಥಿತಿಯಿದೆ. ಇದಕ್ಕೆ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ಬೆಳಗಾವಿಯಲ್ಲಿ ಮಾತನಾಡಿದ ಅವರು, ಬಾಣಂತಿಯರು, ನವಜಾತ ಶಿಶುಗಳ ಸಾವಿನ ವಿಷಯದಲ್ಲಿ ರಾಜ್ಯಾದ್ಯಂತ ಗೊಂದಲದ ವಾತಾವರಣ ಇದೆ. ಆಸ್ಪತ್ರೆಗಳು ಶವಾಗಾರವಾಗುವ ಪರಿಸ್ಥಿತಿಯನ್ನು ನಾವು ನೋಡುತ್ತಿದ್ದೇವೆ. ಈ ಸ್ಥಿತಿಗೆ ಕಾಂಗ್ರೆಸ್ ಸರ್ಕಾರವೇ ಕಾರಣ ಎಂದು ಟೀಕಿಸಿದ್ದಾರೆ. ಕಾಂಗ್ರೆಸ್ಸಿಗರು ಭ್ರಷ್ಟಾಚಾರ ಮಾಡುವ ಕಡೆ ಗಮನ ಕೊಡುತ್ತಿದ್ದು, ಆಸ್ಪತ್ರೆಗಳ ಮೇಲೆ ನಿಯಂತ್ರಣ ಇಲ್ಲವಾಗಿದೆ. ಔಷಧಿ ಕೊಂಡುಕೊಳ್ಳುವಾಗ ಬ್ಲಾಕ್ ಮಾಡಿದ ಕಳಪೆ ಔಷಧಿಗಳನ್ನು ಖರೀದಿಸಿದ್ದಾರೆ. ಅವುಗಳನ್ನು ಬಳಸಿದ್ದರಿಂದ ಅನೇಕ ಕಡೆ ಈ ರೀತಿಯ ದಾರುಣ ಘಟನೆಗಳು ನಡೆದಿವೆ. ಇದೇ ಕಾರಣಕ್ಕೆ ರಾಜ್ಯಾಧ್ಯಕ್ಷ ವಿಜಯೇಂದ್ರ, ಡಾ.ಅಶ್ವತ್ಥನಾರಾಯಣ್, ಶಶಿಕಲಾ ಜೊಲ್ಲೆ, ಹೇಮಲತಾ ನಾಯಕ್ ಸೇರಿ ನಾವೆಲ್ಲ ಇಲ್ಲಿಗೆ ಭೇಟಿ ಕೊಟ್ಟಿದ್ದೇವೆ. ವಸ್ತುಸ್ಥಿತಿಯನ್ನು ವೈದ್ಯರಿಂದ ತಿಳಿದುಕೊಳ್ಳುತ್ತೇವೆ ಎಂದರು.



# ಸಿಎಂ ನಿದ್ದೆರಾಮಯ್ಯ ಆಗಿದ್ದಾರೆ, 17 ತಿಂಗಳಲ್ಲಿ 17 ಅವಾಂತರ ತೋರಿದ ಸರ್ಕಾರ

**ಬೆಳಗಾವಿ:** ಸಿಎಂ ನಿದ್ದೆರಾಮಯ್ಯ ಆಗಿದ್ದಾರೆ, 12 ತಿಂಗಳ ಅವಧಿಯಲ್ಲಿ 17 ಅವಾಂತರಗಳನ್ನು ಸರ್ಕಾರ ತೋರಿಸಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ.



ಬೆಳಗಾವಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದು 18 ತಿಂಗಳು ಕಳೆದಿವೆ. 17 ತಿಂಗಳಾದರೂ ಸರ್ಕಾರ ಏನೂ ಅಭಿವೃದ್ಧಿ ಮಾಡಿಲ್ಲ. ಆದರೆ 17 ತಿಂಗಳಲ್ಲಿ 17 ಅವಾಂತರಗಳನ್ನು ಸರ್ಕಾರ ತೋರಿಸಿದೆ. ಸಿದ್ದರಾಮಯ್ಯ ಕಳೆದ ಬಾರಿಯ ಆಡಳಿತವನ್ನು ಕೊಡುತ್ತಿಲ್ಲ. ಈ ಬಾರಿ ಸಿದ್ದರಾಮಯ್ಯ ಅವರೇ ಮುಡಾದಲ್ಲಿ ಸಿಲುಕಿ ನರಳುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಇದೀಗ ನಿದ್ದೆರಾಮಯ್ಯ ಆಗಿದ್ದಾರೆ. ಜೊತೆಗೆ ಸರ್ಕಾರವು ಕೂಡ ನಿದ್ದೆಯಲ್ಲಿದೆ. ಸಿಎಂಗೆ ಯಾವುದೇ ಇಲಾಖೆಗಳ ಮೇಲೆಯೂ ಹಿಡಿತ ಇಲ್ಲ ಎಂದು ವ್ಯಂಗ್ಯವಾಡಿದರು.

ಬೆಳಗಾವಿ ಜಿಲ್ಲೆಯೊಂದರಲ್ಲಿಯೇ ಮುನ್ನೂರಕ್ಕೂ ಹೆಚ್ಚು ನವಜಾತ ಶಿಶುಗಳ ಸಾವಾಗಿದೆ. ಸಿದ್ದರಾಮಯ್ಯ ಹೊಸದಾಗಿ ಬಂದಾಗ ಪ್ರತಿ ತಿಂಗಳು ಜನತಾದರ್ಶನ ಮಾಡುತ್ತೇನೆ ಎಂದಿದ್ದರು. ಆದರೆ ಮಂತ್ರಿಗಳು ದುಡ್ಡು ಮಾಡುವುದರಲ್ಲಿ ಮುಳುಗಿದ್ದಾರೆ. ಜಿಲ್ಲೆಗಳಿಗೆ ಮಂತ್ರಿಗಳು ಭೇಟಿ ಕೊಡುತ್ತಿಲ್ಲ. ದುಡ್ಡು ಮಾಡಲು ಮಾತ್ರ ಜಿಲ್ಲೆಗಳಿಗೆ ಹೋಗುತ್ತಾರೆ. ಯಾವ ಮಂತ್ರಿಗಳು ಆಯಾ ಜಿಲ್ಲೆಗೆ ಹೋಗುತ್ತಿಲ್ಲ. ಇದು ಗುರುವಾರದ ಸರ್ಕಾರ, ಗುರುವಾರ ಮಾತ್ರ ಸಚಿವರು ವಿಧಾನಸೌಧಕ್ಕೆ ಬರುತ್ತಾರೆ. ಉತ್ತರ ಕರ್ನಾಟಕದ ಬಗ್ಗೆ ಸರ್ಕಾರ ಹೇಳಿದ್ದೇನು, ಮಾಡಿದ್ದೇನು? ಅತ್ಯಂತ ಕಳಪೆ ಸರ್ಕಾರ ಇದು. ಅಧಿವೇಶನದಲ್ಲಿ ಚರ್ಚೆ ಮಾಡುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬೆಳಗಾವಿ ಅಧಿವೇಶನದ ವಿರುದ್ಧ ಪ್ರತಿಭಟನೆ: ಎಂಇಎಸ್ ಮುಖಂಡರು, ಕಾರ್ಯಕರ್ತರು ಪೊಲೀಸ್ ವಶಕ್ಕೆ

**ಬೆಳಗಾವಿ:** ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಆರಂಭವಾಗಿರುವ ಕರ್ನಾಟಕ ವಿಧಾನಮಂಡಲದ ಚಳಿಗಾಲದ ಅಧಿವೇಶನ ವಿರೋಧಿಸಿ ಸಂಭಾಜಿ ವೃತ್ತಕ್ಕೆ ಬಂದ ಮಹಾರಾಷ್ಟ್ರ ಏಕೀಕರಣ ಸಮಿತಿಯ (ಎಂಇಎಸ್) ಮುಖಂಡರು ಹಾಗೂ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಎಂಇಎಸ್ ಮಹಾಮೇಳ ಆಯೋಜಿಸದಂತೆ ಪೊಲೀಸರು ಭಾರಿ ಭದ್ರತೆ ಏರ್ಪಡಿಸಿದ್ದರು. ಮೊದಲಿಗೆ, ಎಂಇಎಸ್‌ನ ಕಾರ್ಯಾಧ್ಯಕ್ಷ ಮನೋಹರ್ ಕಿಣೇಕರ್ ಮತ್ತು ಖಜಾಂಚಿ ಪ್ರಕಾಶ ಮಾರ್ಗಲೆ ಸೇರಿದಂತೆ ಕಾರ್ಯಕರ್ತರನ್ನು ರಾಮಲಿಂಗಖಿಂಡ್ ಗಲ್ಲಿಯಲ್ಲಿರುವ ಕಚೇರಿಯಿಂದ ಬಂಧಿಸಲಾಯಿತು. ನಂತರ ಮಹಾರಾಷ್ಟ್ರ ಪರ ಘೋಷಣೆಗಳನ್ನು ಕೂಗುತ್ತಾ ಗುಂಪು ಗುಂಪಾಗಿ ಆಗಮಿಸಿದ ಕಾರ್ಯಕರ್ತರನ್ನು ಸಂಭಾಜಿ ವೃತ್ತದಲ್ಲಿ ಪೊಲೀಸರು ವಶಕ್ಕೆ ಪಡೆದರು. ಸಂಭಾಜಿ ವೃತ್ತದಲ್ಲಿ ಎಂಇಎಸ್ ಕಾರ್ಯಕರ್ತರು ಘೋಷಣೆಗಳನ್ನು ಕೂಗುತ್ತಾ ಬಂದಿದ್ದರಿಂದ ಉದ್ವಿಗ್ನ ಪರಿಸ್ಥಿತಿ ಉಂಟಾಗಿತ್ತು. ಕರ್ನಾಟಕ-ಮಹಾರಾಷ್ಟ್ರ ಗಡಿ ವಿವಾದಕ್ಕೆ ಸಂಬಂಧಿಸಿ ಮಹಾರಾಷ್ಟ್ರ ಸಲ್ಲಿಸಿರುವ ಮೊಕದ್ದಮೆ ವಿಚಾರವಾಗಿ ಸುಪ್ರೀಂ ಕೋರ್ಟ್ ಇನ್ನೂ ತೀರ್ಪು ನೀಡಿಲ್ಲ. ಹೀಗಾಗಿ ಚಳಿಗಾಲದ ಅಧಿವೇಶನವನ್ನು ವಿರೋಧಿಸಿ ಸಮಾವೇಶ ನಡೆಸುವುದಾಗಿ ಎಂಇಎಸ್ ಇತ್ತೀಚೆಗೆ ಘೋಷಿಸಿತ್ತು. ಆದರೆ, ಸಮಾವೇಶಕ್ಕೆ ಬೆಳಗಾವಿ ಜಿಲ್ಲಾಡಳಿತ ಅನುಮತಿ ನೀಡಿರಲಿಲ್ಲ.



ವಿಧಾನಮಂಡಲ ಅಧಿವೇಶನ ವಿರೋಧಿಸಿ ಸಮಾವೇಶ ನಡೆಸಲು ಎಂಇಎಸ್ ಮುಖಂಡರು ಹಾಗೂ ಕಾರ್ಯಕರ್ತರು ಯತ್ನಿಸಬಹುದು ಎಂಬ ನಿರೀಕ್ಷೆಯಿಂದ ಸಂಭಾಜಿ ವೃತ್ತ, ಸಂಭಾಜಿ ಗಾರ್ಡನ್, ವ್ಯಾಕ್ಸಿನ್ ಡಿಪೋ ಮೈದಾನ ಹಾಗೂ ಶಿವಾಜಿ ಗಾರ್ಡನ್‌ನಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಸ್ಥಳಕ್ಕೆ ಬಂದರೆ ಎಂಇಎಸ್ ಮುಖಂಡರು ಮತ್ತು ಕಾರ್ಯಕರ್ತರನ್ನು ವಶಕ್ಕೆ ಪಡೆಯಲು ಪೊಲೀಸರು ಸನ್ನದ್ಧರಾಗಿದ್ದರು. ಎಂಇಎಸ್ ಸಮಾವೇಶಕ್ಕೆ ಅನುಮತಿ ನೀಡಿಲ್ಲ. ನಗರದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಉಪ ಪೊಲೀಸ್ ಆಯುಕ್ತ ರೋಹನ್ ಜಗದೀಶ್ ಸುದ್ದಿಗಾರರಿಗೆ ಮಾಹಿತಿ ನೀಡಿದ್ದಾರೆ. ಮಹಾರಾಷ್ಟ್ರದ ಗಡಿಯ ಚೆಕ್‌ಪೋಸ್ಟ್‌ಗಳಲ್ಲಿ ಹೆಚ್ಚಿನ ಸಿಬ್ಬಂದಿ ನಿಯೋಜಿಸಲಾಗಿದ್ದು, ಎಂಇಎಸ್ ಮುಖಂಡರ ಮತ್ತು ಕಾರ್ಯಕರ್ತರ ಪ್ರವೇಶವನ್ನು ತಡೆಯಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಸದನದ ಒಳಗೆ ವಿಪಕ್ಷಗಳ ಸಮರ, ಹೊರಗೆ ಸಂಘಟನೆಗಳ ಸಾಲು ಸಾಲು ಪ್ರತಿಭಟನೆ

**ಬೆಳಗಾವಿ:** ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಆರಂಭವಾಗಿದ್ದು, ಮೊದಲ ದಿನವೇ ಸುವರ್ಣಸೌಧ ಸಾಲು ಸಾಲು ಪ್ರತಿಭಟನೆಗೆ ಸಾಕ್ಷಿಯಾಗುತ್ತಿದೆ. 11 ವಿವಿಧ ಸಂಘಟನೆಗಳು, ತಮ್ಮ ಬೇಡಿಕೆಗೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿವೆ. ಬೆಳಗಾವಿಯಲ್ಲಿ ಅಧಿವೇಶನದ ಹೊತ್ತಲ್ಲೇ ಮತ್ತೆ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿಗಾಗಿ ರಣಕಹಳೆ ಮೊಳಗಿಸಲಾಗಿದೆ. ಕೂಡಲಸಂಗಮ ಪೀಠದ ಬಸವ ಜಯಮೃತ್ಯುಂಜಯ ಶ್ರೀಗಳ ನೇತೃತ್ವದಲ್ಲಿ ಸುವರ್ಣಸೌಧಕ್ಕೆ ಮುತ್ತಿಗೆ ಹಾಕಲು ನಿರ್ಧರಿಸಲಾಗಿತ್ತು. ಅಷ್ಟೇ ಅಲ್ಲ ಟ್ರ್ಯಾಕ್ಟರ್ ಚಲೋಗೆ ಕರೆ ನೀಡಲಾಗಿತ್ತು.



ಆದರೆ, ಸರ್ಕಾರ ಪಂಚಮಸಾಲಿ ಮೀಸಲಾತಿ ಹೋರಾಟಗಾರರಿಗೆ ಶಾಕ್ ಕೊಟ್ಟಿದೆ. ಇಂದು ಮತ್ತು ನಾಳೆ ಹೋರಾಟದ ವಾಹನಗಳಿಗೆ ಬೆಳಗಾವಿ ಪ್ರವೇಶಕ್ಕೆ ನಿಷೇಧ ಹೇರಿದೆ. ನಿಷೇಧಾಜ್ಞೆ ಜಾರಿಗೊಳಿಸಿ ಡಿಸಿ ಮೊಹಮ್ಮದ್ ರೋಷನ್ ಆದೇಶ ಮಾಡಿದ್ದಾರೆ. ಹೀಗಾಗಿ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ನಡೆಸಿದ್ದಾರೆ. ಅದರಲ್ಲೂ, ಸಿದ್ದರಾಮಯ್ಯ ಸರ್ಕಾರ ಪ್ರಜಾಪ್ರಭುತ್ವವನ್ನೇ ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದ್ದಾರೆ.

ಏತನ್ಮಧ್ಯೆ ಮಾಧ್ಯಮದ ಜೊತೆ ಮಾತನಾಡಿರುವ ಯತ್ನಾಳ್, ಪಂಚಮಸಾಲಿ ಸಮುದಾಯಕ್ಕೆ ನೂರಕ್ಕೆ ನೂರರಷ್ಟು ಮೀಸಲಾತಿ ಸಿಗುತ್ತದೆ ಎಂದಿದ್ದಾರೆ. ನಮ್ಮ ಸಮುದಾಯದ ಮೇಲೆ ಗುಂಡು ಹಾಕುವ ತಾಕತ್ತು ಈ ಸರ್ಕಾರಕ್ಕೆ ಇದೆಯಾ ಎಂದು ಯತ್ನಾಳ್ ಗುಡುಗಿದ್ದಾರೆ.

ಈ ಮಧ್ಯೆ ಮಹದಾಯಿ ಯೋಜನೆ ಅನುಷ್ಠಾನ ಮಾಡಬೇಕು, ಕಬ್ಬಿನ ಬಿಲ್ ನಿಗದಿ ಮಾಡಬೇಕು, ವಕ್ಫ್‌ನಿಂದ ರೈತರ ಜಮೀನು ರಕ್ಷಣೆಗೆ ಒತ್ತಾಯಿಸಿ, ವಿವಿಧ ರೈತ ಸಂಘಟನೆಗಳು ಪ್ರತಿಭಟನೆ ನಡೆಸುತ್ತಿವೆ. ಪ್ರತಿ ನಾಲ್ಕು ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆಗೆ ಒತ್ತಾಯಿಸಿ ಕೆಎಸ್‌ಆರ್‌ಟಿಸಿ ಲೇಬರ್ ನಿಗಮ ಸಂಘ, ಎಸ್‌ಟಿ ಮೀಸಲಾತಿಗೆ ಆಗ್ರಹಿಸಿ ಅಖಿಲ ಕರ್ನಾಟಕ ಹೂಗಾರ ಮಹಾಸಭಾ ಸಂಘ ಪ್ರತಿಭಟನೆಗೆ ಮುಂದಾಗಿದೆ. ಗದಗ ಹರಪನಹಳ್ಳಿ ರೈಲು ಮಾರ್ಗ ನಿರ್ಮಾಣಕ್ಕೆ ಒತ್ತಾಯಿಸಿ ಪ್ರತಿಭಟನೆ ಸೇರಿದಂತೆ ಹೀಗೆ ಸಾಲು ಸಾಲು ಪ್ರತಿಭಟನೆಗಳು ನಡೆಯುತ್ತಿವೆ.

# 5 ಲಕ್ಷ ಹೆಕ್ಟರ್ ತೊಗರಿ ಹೂ ಬಿಡದೇ ಸರ್ವನಾಶ ಬೆಳೆ ಹಾನಿ ಸಮೀಕ್ಷೆಗೆ ರೈತರ ಒತ್ತಾಯ

**ವಿಜಯಪುರ:** ಗುಮ್ಮಟ ನಗರಿ ವಿಜಯಪುರ ತೊಗರಿಯ ಕಣಜ ಎಂದು ಖ್ಯಾತಿ ಪಡೆದಿದೆ. ಆದರೆ ಖ್ಯಾತಿಯಾಗಿರುವ ಜಿಲ್ಲೆಯಲ್ಲಿ ತೊಗರಿಗೆ ಈಗ ಬರ ಬಂದಿದೆ. ಚಿತ್ರದುರ್ಗದ ಕೃಷಿ ಇಲಾಖೆಯಲ್ಲಿ ತೊಗರಿ ಬೀಜ ಖರೀದಿಸಿ ಸಾವಿರಾರು ಎಕರೆಯಲ್ಲಿ ಬೆಳೆದಿದ್ದ ರೈತರಿಗೆ ತೊಗರಿ ಬೆಳೆ ಕೈಕೊಟ್ಟಿದೆ.



ಜಿಲ್ಲೆಯನ್ನು ಜೋಳದ ನಾಡು ಎಂದು ಕರೆಯುತ್ತಿದ್ದರು. ಆದರೆ ದಶಕದ ಈಚೆಗೆ ತೊಗರಿಯ ಕಣಜ ಎಂದು ಕರೆಸಿಕೊಳ್ಳುತ್ತಿದೆ. ಇದಕ್ಕೆ ಪ್ರಮುಖ ಕಾರಣ ಜಿಲ್ಲೆಯಲ್ಲಿ ಅತೀ ಹೆಚ್ಚು ತೊಗರಿ ಬೆಳಯಲಾಗುತ್ತಿತ್ತು. ಆದರೆ ಇದೀಗ ಈ ಹೆಸರು ಅಳಿಸುವಂತೆ ಗೋಚರಿಸುತ್ತಿದೆ. ಅದಕ್ಕೆ ಕಾರಣ ಈ ಬಾರಿ ಜಿಲ್ಲೆಯಲ್ಲಿ ತೊಗರಿ ಬೆಳೆ ಹೂ ಬಿಡದೇ ಸಂಪೂರ್ಣ ಹಾಳಾಗಿ ಹೋಗಿದೆ.

ಜಿಲ್ಲೆಯಲ್ಲಿ 5 ಲಕ್ಷ 34 ಹೆಕ್ಟರ್‌ನಲ್ಲಿ ತೊಗರಿ ಬೆಳೆಯಲಾಗಿದ್ದು, 80% ರಷ್ಟು ಬೆಳೆ ಹಾನಿಯಾಗಿದೆ. ಇದರಿಂದ ರೈತರು ಕಂಗಾಲಾಗಿದ್ದಾರೆ. ಇಷ್ಟೊಂದು ಬೆಳೆ ಹಾಳಾಗಲು ರಾಜ್ಯ ಸರ್ಕಾರದಿಂದ ವಿತರಿಸಿದ ಬೀಜ ಒಂದು ಕಡೆಯಾದರೆ, ಇನ್ನೊಂದೆಡೆ ಅಕಾಲಿಕ ಮಳೆ, ಮೋಡಕವಿದ ವಾತಾವರಣದಿಂದ ಇಬ್ಬನಿ ಬಿದ್ದು, ಬೆಳೆ ಹಾಳಾಗಿದೆ. ಇದರಿಂದ ಜಿಲ್ಲೆಯ ಸಾವಿರಾರು ರೈತರು ಕಂಗಾಲಾಗಿ ಸಮೀಕ್ಷೆ ನಡೆಸಲು ಜಿಲ್ಲಾಧಿಕಾರಿಗಳಿಗೆ ಹಾಗೂ ರಾಜ್ಯ ಸರ್ಕಾರಕ್ಕೆ ಮನವಿ ಕೊಟಿದ್ದಾರೆ. ಆದರೆ ಈವರೆಗೂ ಯಾವುದೇ ಕ್ರಮಗೊಳ್ಳದ ಅಧಿಕಾರಿಗಳು, ಸರ್ಕಾರದ ವಿರುದ್ಧ ಅನ್ನದಾತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇದೇ ಡಿ.10ರಂದು ಜಿಲ್ಲಾಧಿಕಾರಿ ಹಾಗೂ ಜಂಟಿ ಕೃಷಿ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಕೇಸ್ ದಾಖಲಿಸುವ ಎಚ್ಚರಿಕೆ ನೀಡಿದ್ದಾರೆ.

ಚಿತ್ರದುರ್ಗ ಜಿಲ್ಲೆಯಾದ್ಯಂತ ಕೃಷಿ ಇಲಾಖೆ ಸರಬರಾಜು ಮಾಡಿರುವ ತೊಗರಿಯ ಬಿತ್ತನೆ ಬೀಜಗಳು ಕಳಪೆಯಾಗಿವೆ. ಹೀಗಾಗಿ ತೊಗರಿ ಬೆಳೆ ಸಂಪಾಗಿ ಬೆಳೆದಿವೆ. ಆದರೆ ಕಾಯಿ ಮಾತ್ರ ಹಿಡಿದಿಲ್ಲ. ಕೆಲವೆಡೆ ಕಾಯಿಹಿಡಿದರೂ ಗಟ್ಟಿಯಾಗದೇ ಉದುರುತ್ತಿವೆ. ಹೂವು ಕಾಯಾಗುವ ಮುನ್ನವೇ ನೆಲಕ್ಕೆ ಬೀಳುತ್ತಿವೆ. ಹೀಗಾಗಿ ಒಂದು ಎಕರೆಗೆ 10 ರಿಂದ 15 ಸಾವಿರ ಖರ್ಚು ಮಾಡಿ, ತೊಗರಿ ಬೆಳೆದ ರೈತರು ಸಾಲದ ಸುಳಿಗೆ ಸಿಲುಕಿದ್ದಾರೆ.

ಇನ್ನೂ ಬಿತ್ತನೆ ಬೀಜದ ಬೆಲೆಯನ್ನು ಸಹ ದಿಢೀರ್ ಎಂದು 2 ಪಟ್ಟು ಹೆಚ್ಚಿಸಿರುವ ಸರ್ಕಾರ ರೈತರಿಗೆ ಕಳಪೆ ಬೀಜ ಕೊಟ್ಟು ವಂಚಿಸಿದೆ. ಹೀಗಾಗಿ ರೈತರು ಭಾರೀ ನಷ್ಟ ಅನುಭವಿಸುವಂತಾಗಿದೆ. ಆದ್ದರಿಂದ ಸರ್ಕಾರ ಕೂಡ ಬೆಳೆನಷ್ಟ ಪರಿಹಾರ ಒದಗಿಸುವಂತೆ ರೈತ ಮುಖಂಡರು ಆಗ್ರಹಿಸಿದ್ದಾರೆ.

ಒಟ್ಟಾರೆ ಕಳಪೆ ತೊಗರಿ ಬೀಜದ ದೆಸೆಯಿಂದ ವಿಜಯಪುರ ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ಹೇಳಿಕೊಂಡಂತೆ ಬೆಳೆ ಬಂದಿಲ್ಲ. ಈ ಎರಡೂ ಜಿಲ್ಲೆಗಳಲ್ಲಿ ತೊಗರಿಬೆಳೆ ಕೈಕೊಡಲು ಕಳಪೆ ಬೀಜ, ಅಕಾಲಿಕ ಮಳೆ ಕಾರಣವಾಗಿದೆ. ನಷ್ಟದಲ್ಲಿರುವ ರೈತರಿಗೆ ಸರ್ಕಾರ ಪರಿಹಾರ ನೀಡಲು ಮುಂದಾದರೆ, ಬೆಳೆ ಸಿಗದೆ ಕುಗ್ಗಿಹೋಗಿರುವ ರೈತರು ಕೊಂಚ ಸುಧಾರಿಸಿಕೊಳ್ಳಲಿದ್ದಾರೆ. ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ಎನ್ನುವುದು ಕುತೂಹಲವಾಗಿದೆ.

## ಎಸ್.ಎಂ.ಕೃಷ್ಣ ನಿಧನ

**ಸಭಾಪತಿ ಯುಟಿ ಖಾದರ್ ಸಂತಾಪ:** ''ಎಸ್ .ಎಂ.ಕೃಷ್ಣ ನಿಧನದ ವಿಚಾರ ತಿಳಿದು ತುಂಬಾ ದುಃಖವಾಗಿದೆ. ಎಸ್ .ಎಂ.ಕೃಷ್ಣ ನಿಧನದಿಂದ ರಾಜ್ಯ ರಾಜಕಾರಣಕ್ಕೆ ತುಂಬಲಾರದ ನಷ್ಟವಾಗಿದೆ. ಎಸ್ .ಎಂ.ಕೃಷ್ಣ ಅಜಾತಶತ್ರು, ಉತ್ತಮ ರಾಜಕಾರಣಿ ಆಗಿದ್ದರು. ಸಿಎಂ ಆಗಿ, ಕೇಂದ್ರ ಸಚಿವರಾಗಿ ಸಾಕಷ್ಟು ಉತ್ತಮ ಕೆಲಸ ಮಾಡಿದ್ದರು. ಬೆಂಗಳೂರು ಅಭಿವೃದ್ಧಿಗೆ ಶ್ರಮಿಸಿದ್ದರು, ಹಲವು ಯೋಜನೆ ಜಾರಿಗೆ ತಂದಿದ್ದಾರೆ. ಎಸ್ .ಎಂ.ಕೃಷ್ಣ ಅವರು ರಾಜಕಾರಣದಲ್ಲಿ ಸುಧೀರ್ಘ ಸೇವೆ ಸಲ್ಲಿಸಿದ್ದರು. ನಾನು ವಿದ್ಯಾರ್ಥಿಯಾಗಿದ್ದಾಗಲೇ ಎಸ್ .ಎಂ.ಕೃಷ್ಣ ಜೊತೆ ಸಂಪರ್ಕ ಇತ್ತು'' ಎಂದು ಸಂತಾಪ ಸೂಚಿಸಿದ್ದಾರೆ. ''ಎಸ್ .ಎಂ.ಕೃಷ್ಣ ಅವರ ಮನೆಗೆ ಭೇಟಿ ನೀಡಿ ಆಶೀರ್ವಾದ ಪಡೆದಿದ್ದೆ. ಎಸ್ .ಎಂ.ಕೃಷ್ಣ ಅವರ ಸಾಧನೆ ಯುವ ರಾಜಕಾರಣಿಗಳಿಗೆ ಸ್ಪೂರ್ತಿದಾಯಕವಾಗಿದೆ. ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿ ದೇವರು ನೀಡಲಿ ಎಂದು ಪ್ರಾರ್ಥಿಸುತ್ತೇನೆ'' ಎಂದು ಹೇಳಿದ್ದಾರೆ.

**ಸಚಿವ ಡಾ.ಜಿ.ಪರಮೇಶ್ವರ್ ಸಂತಾಪ:** ''ಎಸ್ .ಎಂ. ಕೃಷ್ಣ ನಿಧನ ವಿಚಾರ ಕೇಳಿ ತುಂಬಾ ನೋವಾಗಿದೆ. ಉತ್ತಮ ರಾಜಕಾರಣಿಯನ್ನು ನಾವು ಕಳೆದುಕೊಂಡಿದ್ದೇವೆ. ಸಿಎಂ ಆಗಿ, ಕೇಂದ್ರ ಸಚಿವರಾಗಿ ಉತ್ತಮ ಕೆಲಸ ಮಾಡಿದ್ದರು. ಬೆಂಗಳೂರು ನಗರದಲ್ಲಿ ಐಟಿ-ಬಿಟಿ ಸ್ಥಾಪನೆಗೆ ಕಾರಣರಾಗಿದ್ದರು. ಅವರಿಂದ ಬೆಂಗಳೂರು ಸಿಲಿಕಾನ್ ಸಿಟಿಯಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ. ಹಲವು ಯೋಜನೆಗಳ ಜೊತೆ ಹಲವು ಸವಾಲುಗಳನ್ನು ಎದುರಿಸಿದ್ದರು. ರಾಜ್ ಕುಮಾರ್ ಅಪಹರಣ ಸಮಯದಲ್ಲಿ ಸಮರ್ಥವಾಗಿ ನಿಭಾಯಿಸಿದ್ದರು. ಕಾವೇರಿ ನದಿ ನೀರು ವಿಚಾರದಲ್ಲೂ ಸಮರ್ಥವಾಗಿ ಕೆಲಸ ಮಾಡಿದ್ದರು. ಎಸ್ ಎಂಕೆ ಅವರ ಸಾಧನೆ ಯುವ ರಾಜಕಾರಣಿಗಳಿಗೆ ಮಾದರಿಯಾಗಿದೆ. ಎಸ್ .ಎಂ.ಕೃಷ್ಣ ಅವರ ಜೊತೆ ಉತ್ತಮ ಒಡನಾಡ ಇತ್ತು ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿ ದೇವರು ನೀಡಲಿ. ಎಸ್ .ಎಂ.ಕೃಷ್ಣ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ದೇವರಲ್ಲಿ ಎಂದು ಪ್ರಾರ್ಥಿಸುತ್ತೇನೆ'' ಎಂದು ಗೃಹ ಸಚಿವ ಜಿ ಪರಮೇಶ್ವರ್ ಸಂತಾಪ ಸೂಚಿಸಿದ್ದಾರೆ.

''ಎಸ್‌ಎಂ ಕೃಷ್ಣ ಅವರು ನಮ್ಮನ್ನು ಅಗಲಿದ್ದಾರೆ, ಇದು ಬಹಳ ನೋವಿನ ಸಂಗತಿ. ರಾಜ್ಯಕ್ಕೆ ಎಸ್ .ಎಂ.ಕೃಷ್ಣ ಅವರ ಕೊಡುಗೆ ಅಪಾರವಾಗಿದೆ. ಸಿಎಂ, ವಿತ್ತ ಸಚಿವರಾಗಿ ಉತ್ತರ ಕರ್ನಾಟಕಕ್ಕೆ ಅವರ ಕೊಡುಗೆ ಅಪಾರವಾಗಿದೆ. ಹಲವು ಬಾರಿ ಎಸ್ .ಎಂ.ಕೃಷ್ಣ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದಿದ್ದೆ'' ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಕಂಬನಿ ಮಿಡಿದಿದ್ದಾರೆ.

**ಮಾಜಿ ಸಭಾಪತಿ ಬಿ.ಎಲ್ .ಶಂಕರ್ ಸಂತಾಪ:** ''ಎಸ್ .ಎಂ. ಕೃಷ್ಣ ನಿಧನದ ವಿಚಾರ ತಿಳಿದು ತುಂಬಾ ನೋವುಂಟಾಗಿದೆ. ಎಸ್ .ಎಂ.ಕೃಷ್ಣ ಅವರು ಸುಧೀರ್ಘ ಕಾಲ ರಾಜಕಾರಣದಲ್ಲಿ ಇದ್ದರು. ಉತ್ತಮ ಸುಸಂಸ್ಕೃತ ರಾಜಕಾರಣಿಯೊಬ್ಬರನ್ನು ಕಳೆದುಕೊಂಡಿದ್ದೇವೆ. ಎಸ್ .ಎಂ.ಕೃಷ್ಣ ಅವರು ಬೆಂಗಳೂರು ನಗರ ಅಭಿವೃದ್ಧಿಗೆ ಶ್ರಮಿಸಿದ್ದರು. ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸುವಂತೆ ಮಾಡಿದ್ದರು'' ಎಂದು ಮಾಜಿ ಸಭಾಪತಿ ಬಿಎಲ್ ಶಂಕರ್ ಸಂತಾಪ ಸೂಚಿಸಿದ್ದಾರೆ.

**ಎಂಎಲ್ ಸಿ ಹೆಚ್ .ವಿಶ್ವನಾಥ್ ಸಂತಾಪ:** ''ಎಸ್ .ಎಂ.ಕೃಷ್ಣ ನಿಧನ ವಿಚಾರ ತಿಳಿದು ತುಂಬಾ ನೋವುಂಟಾಗಿದೆ. ಎಸ್ .ಎಂ. ಕೃಷ್ಣ ಸಿಎಂ ಆಗಿ ಹಲವು ಮಹತ್ವದ ಯೋಜನೆಗಳು ಜಾರಿ ತಂದಿದ್ದರು. ರಾಜ್ ಕುಮಾರ್ ಅಪಹರಣ ಸಂದರ್ಭದಲ್ಲಿ ಸಮರ್ಥವಾಗಿ ನಿಭಾಯಿಸಿದ್ದರು. ಐಟಿ-ಬಿಟಿ, ಮೆಟ್ರೋ ರೈಲು, ಕೆಂಪೇಗೌಡ ಏರ್ ಪೋರ್ಟ್ ಸ್ಥಾಪನೆ ಮಾಡಿದ್ದಾರೆ. ಬಿಸಿಯೂಟ ಯೋಜನೆ, ಮಹಿಳಾ ಸ್ವಸಹಾಯ ಸಂಘಟನೆಗೆ ನೆರವು ನೀಡಿದ್ದರು. ಕೇಂದ್ರದಲ್ಲೂ ಹಲವು ಜವಾಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದರು. ಎಸ್ .ಎಂ.ಕೃಷ್ಣ ಅವರು ನನಗೂ ಸೇರಿ ಎಲ್ಲರಿಗೂ ಸ್ಪೂರ್ತಿಯಾಗಿದ್ದಾರೆ. ಎಸ್ ಎಂ ಕೃಷ್ಣ ಅವರ ಕೆಲಸಗಳು ಯುವ ರಾಜಕಾರಣಿಗಳಿಗೆ ಸ್ಪೂರ್ತಿಯಾಗಿದೆ. ಎಸ್ .ಎಂ.ಕೃಷ್ಣ ಅವರ ಆತ್ಮಕ್ಕೆ ಶಾಂತಿ ಸಿಗಲಿ, ಕುಟುಂಬಕ್ಕೆ ದುಃಖ ಸಹಿಸುವ ಶಕ್ತಿ ದೇವರು ನೀಡಲಿ'' ಎಂದು ಪ್ರಾರ್ಥನೆ ಸಲ್ಲಿಸುತ್ತೇನೆ'' ಎಂದು ಕಂಬಿನಿ ಮಿಡಿದಿದ್ದಾರೆ.

## ನಾಳೆ ಅಂತ್ಯಕ್ರಿಯೆ

ಅವರ ಕಾಫಿ ಡೇಗೆ ನೀಡಿದ್ದರು. ಮಂಡ್ಯಕ್ಕೆ ಬಂದಾಗಲೆಲ್ಲ ಕಾಫೀ ಡೇಯಲ್ಲಿ ಕಾಲ ಕಳೆಯುತ್ತಿದ್ದರು. ಅವರಿಗೆ ಇಷ್ಟವಾಗಿದ್ದ ಕಾಫಿ ಡೇ ಆವರಣದಲ್ಲಿಯೇ ಅಂತ್ಯಕ್ರಿಯೆ ನಡೆಯಲಿದೆ. ಅಂತ್ಯಸಂಸ್ಕಾರಕ್ಕೆ ಸುಮಾರು ಎರಡೂವರೆ ಎಕರೆ ಪ್ರದೇಶದಲ್ಲಿ ಸಿದ್ಧತೆ ನಡೆಯುತ್ತಿದೆ. ಏತನ್ಮಧ್ಯೆ, ಎಸ್ ಎಂ ಕೃಷ್ಣ ಬಗ್ಗೆ ಸೋಮನಹಳ್ಳಿ ಕೆಫೆ ಕಾಫಿ ಡೇ ಮ್ಯಾನೇಜರ್ ಅವಿನಾಶ್ ಜತೆ ಮಾತನಾಡಿದ್ದು, ಕೃಷ್ಣ ಅವರು ಎರಡು ತಿಂಗಳ ಹಿಂದೆ ಇಲ್ಲಿಗೆ ಬಂದಿದ್ದರು. ಸಿಬ್ಬಂದಿ ಜೊತೆ ಬಹಳ ಪ್ರೀತಿಯಿಂದ ಮಾತನಾಡುತ್ತಿದ್ದರು. ಇದು ಅವರ ಗೆಸ್ಟ್ ಹೌಸ್ ಆಗಿತ್ತು. ಆನಂತರ ಇದನ್ನು ಕಾಫಿ ಡೇಗೆ ಕೊಟ್ಟರು. ಇಲ್ಲಿ ಅವರದ್ದೂ ಒಂದು ಕೊಠಡಿ ಇದೆ. ಅವರ ಸಾವಿನ ವಿಚಾರ ಕೇಳಿ ಬೇಸರ ಆಗಿದೆ ಎಂದರು.

## ಪ್ರಧಾನಿ ಮೋದಿ ಸಂತಾಪ

ಬಗ್ಗೆ ಗಮನಹರಿಸಿದ್ದಾರೆ. ಅವರು ಉತ್ತಮ ಓದುಗ ಮತ್ತು ಚಿಂತಕರೂ ಆಗಿದ್ದರು ಎಂದು ಬರೆದಿದ್ದಾರೆ.

ಕರ್ನಾಟಕದ ಮಂಡ್ಯದ ಸೋಮನಹಳ್ಳಿ ಗ್ರಾಮದಲ್ಲಿ 1 ಮೇ 1932 ರಂದು ಜನಿಸಿದ ಎಸ್.ಎಂ.ಕೃಷ್ಣ ಅವರ ಪೂರ್ಣ ಹೆಸರು ಸೋಮನಹಳ್ಳಿ ಮಲ್ಲಯ್ಯ ಕೃಷ್ಣ. ಅವರು ಮೈಸೂರಿನಲ್ಲಿ ತಮ್ಮ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದರು, ನಂತರ ಅವರು ಕಾನೂನು ಅಧ್ಯಯನಕ್ಕಾಗಿ ಬೆಂಗಳೂರಿಗೆ ಹೋದರು. ವಿದ್ಯಾಭ್ಯಾಸ ಮುಗಿಸಿ ರಾಜಕೀಯಕ್ಕೆ ಕಾಲಿಟ್ಟರು. 1962ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಮಂಡ್ಯದಿಂದ ಶಾಸಕರಾಗಿ ಗೆದ್ದರು. ಅವರು 1964 ರಲ್ಲಿ ವಿವಾಹವಾದರು.

ಎಸ್ ಎಂ ಕೃಷ್ಣ ಅವರ ರಾಜಕೀಯ ಪಯಣ ಸಾಕಷ್ಟು ದೀರ್ಘವಾಗಿತ್ತು. ಕರ್ನಾಟಕದ ಶಾಸಕರಾದ ನಂತರ ಅವರು ಕರ್ನಾಟಕ ವಿಧಾನಸಭೆಯ ಸ್ಪೀಕರ್ ಆಗಿ ಆಯ್ಕೆಯಾದರು, ನಂತರ ಅವರು ಕರ್ನಾಟಕದ ಉಪಮುಖ್ಯಮಂತ್ರಿಯಾದರು ಮತ್ತು ನಂತರ ಅವರು ಕರ್ನಾಟಕದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದರು. ಎಸ್ ಎಂ ಕೃಷ್ಣ ಅವರು ಲೋಕಸಭೆ ಮತ್ತು ರಾಜ್ಯಸಭಾ ಸದಸ್ಯರೂ ಆಗಿದ್ದರು.

2017ರ ಮಾರ್ಚ್‌ನಲ್ಲಿ ಎಸ್‌ಎಂ ಕೃಷ್ಣ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದರು. 2023ರಲ್ಲಿ ಸರ್ಕಾರ ಎಸ್ ಎಂ ಕೃಷ್ಣ ಅವರಿಗೆ ಪದ್ಮವಿಭೂಷಣ ನೀಡಿ ಗೌರವಿಸಿತ್ತು. ಎಸ್ ಎಂ ಕೃಷ್ಣ ಅವರು 1960 ರ ಸುಮಾರಿಗೆ ತಮ್ಮ ರಾಜಕೀಯ ಇನ್ನಿಂಗ್ಸ್ ಆರಂಭಿಸಿದರು. 1962 ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರಕ್ಕೆ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಸೋಲಿಸಿ ಗೆಲುವು ಸಾಧಿಸಿದರು. ಇದಾದ ನಂತರ ಅವರು ಪ್ರಜಾ ಸೋಷಿಯಲಿಸ್ಟ್ ಪಕ್ಷವನ್ನು ಸೇರಿದರು ಮತ್ತು 1968 ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಗೆದ್ದರು.

ನಂತರ ಎಸ್‌ಎಂ ಕೃಷ್ಣ ಅವರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು ಮತ್ತು 1971 ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮರು ಚುನಾವಣೆಯಲ್ಲಿ ಗೆದ್ದರು. 1985ರಲ್ಲಿ ಎಸ್. ಎಂ.ಕೃಷ್ಣ ಮತ್ತೆ ರಾಜ್ಯ ರಾಜಕಾರಣಕ್ಕೆ ಮರಳಿ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿದರು. ಅವರು 1999 ರಿಂದ 2004 ರವರೆಗೆ ಕರ್ನಾಟಕದ ಮುಖ್ಯಮಂತ್ರಿಯಾಗಿದ್ದರು.

ಅವರು ಡಿಸೆಂಬರ್ 2004 ರಿಂದ ಮಾರ್ಚ್ 2008 ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿದ್ದರು. ಎಸ್ ಎಂ ಕೃಷ್ಣ ಅವರು ಪ್ರಧಾನಿ ಮನಮೋಹನ್ ಸಿಂಗ್ ಸರ್ಕಾರದಲ್ಲಿ ವಿದೇಶಾಂಗ ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದರು. 2023ರ ಜನವರಿಯಲ್ಲಿ ಎಸ್ ಎಂ ಕೃಷ್ಣ ಅವರು ಇನ್ನು ಮುಂದೆ ಸಕ್ರಿಯ ರಾಜಕಾರಣದಲ್ಲಿ ಇರುವುದಿಲ್ಲ ಎಂದು ಘೋಷಿಸಿದರು.

## ಪ್ರಧಾನಿ ಹುದ್ದೆ ತಪ್ಪಿದ್ದು ಹೇಗೆ

ಜೆಡಿಎಸ್ ಸಿದ್ಧವಿರಲಿಲ್ಲ, ಹೀಗಾಗಿ ಧರಂ ಸಿಂಗ್ ಅವರನ್ನು ಮುಖ್ಯಮಂತ್ರಿಯಾಗಿ ಮಾಡಲು ಜೆಡಿಎಸ್ ಒತ್ತಾಯಿಸಿತ್ತು. ಆಗ ರಾಜ್ಯ ರಾಜಕಾರಣದಲ್ಲಿ ಸಾಕಷ್ಟು ಪ್ರಭಾವ ಹೊಂದಿದ್ದ ಎಸ್ ಎಂ ಕೃಷ್ಣ ಅವರನ್ನು ಸುಮ್ಮನಾಗಿಸಲು ಮಹಾರಾಷ್ಟ್ರದ ರಾಜ್ಯಪಾಲರನ್ನಾಗಿ ನೇಮಿಸಲಾಯಿತು. ಸುಮಾರು 4 ವರ್ಷಗಳ ಕಾಲ 2008ರವರೆಗೂ ರಾಜ್ಯಪಾಲರಾಗಿ ಕಾರ್ಯನಿರ್ವಹಿಸಿದರು.

**ರಾಜ್ಯಪಾಲರ ಹುದ್ದೆಗೆ ರಾಜೀನಾಮೆ:** ಆದರೆ ಆಶ್ಚರ್ಯವೆನ್ನುವಂತೆ ರಾಜ್ಯಪಾಲರ ಹುದ್ದೆಗೆ ಏಕಾಏಕಿ ರಾಜೀನಾಮೆ ನೀಡಿದ ಎಸ್ ಎಂ ಕೃಷ್ಣ ಮತ್ತೆ ಸಕ್ರಿಯ ರಾಜಕಾರಣಕ್ಕೆ ಮರಳುವ ಸೂಚನೆ ನೀಡಿದರು. ಆದರೆ ಅಷ್ಟರೊಳಗೆ ಕರ್ನಾಟಕದಲ್ಲಿ ಕಾಂಗ್ರೆಸ್ ನಲ್ಲಿ ಸಾಕಷ್ಟು ಬದಲಾವಣೆಯಾಗಿತ್ತು. ಸಿದ್ದರಾಮಯ್ಯ ಕಾಂಗ್ರೆಸ್ ಸೇರಿದ್ದರಿಂದ ರಾಜ್ಯ ರಾಜಕೀಯ ಚಿತ್ರಣಗಳು ಬದಲಾಗಿತ್ತು.

### ಮೊದಲನೇ ಪುಟದಿಂದ...

ಹೀಗಾಗಿ ರಾಜ್ಯದಲ್ಲಿ ಇನ್ನಷ್ಟು ಸಮಸ್ಯೆಗಳನ್ನು ತೆಗೆದುಕೊಳ್ಳಲು ಮುಂದಾಗದ ಕಾಂಗ್ರೆಸ್ ಎಸ್ ಎಂ ಕೃಷ್ಣ ಅವರನ್ನು ರಾಷ್ಟ್ರ ರಾಜಕಾರಣಕ್ಕೆ ಕರೆದೊಯ್ದಿತು. ಕೇಂದ್ರ ವಿದೇಶಾಂಗ ಸಚಿವರಾಗಿ 3 ವರ್ಷಗಳ ಕಾಲ ಕಾರ್ಯನಿರ್ವಹಿಸಿದರು. ಆದರೆ ಅನಾರೋಗ್ಯ ಕಾರಣದಿಂದ ಅವರು ಆ ಹುದ್ದೆಯಲ್ಲಿ ಮುಂದುವರೆಯಲು ಸಾಧ್ಯವಾಗಲಿಲ್ಲ, ಅವರ ಕೆಲವು ಭಾಷಣಗಳು ಸಾಕಷ್ಟು ವಿವಾದಕ್ಕೆ ಕಾರಣವಾಗಿದ್ದರಿಂದ, ಸಚಿವ ಸ್ಥಾನವನ್ನು ಕಳೆದುಕೊಳ್ಳಬೇಕಾಯಿತು.

**ರಾಜಕೀಯ ಜೀವನ ಅಂತ್ಯದತ್ತ:** ಇದಾದ ಬಳಿಕ ಎಸ್ ಎಂ ಕೃಷ್ಣ ಅವರ ರಾಜಕೀಯ ಜೀವನ ಬಹುತೇಕ ಅಂತ್ಯದತ್ತ ಹೋಯಿತು ಅತ್ತ ರಾಷ್ಟ್ರ ರಾಜಕಾರಣದಲ್ಲೂ ಪ್ರಭಾವ ಉಳಿಯಲಿಲ್ಲ, ಇತ್ತ ಸಿದ್ದರಾಮಯ್ಯ ಹಾಗೂ ಇತರರ ಕಾರಣದಿಂದ ರಾಜ್ಯದಲ್ಲೂ ಅವರ ಪ್ರಭಾವ ಕುಗ್ಗುತ್ತಲೇ ಹೋಯಿತು.

ಇದು ಎಸ್ ಎಂಕೃಷ್ಣ ಅವರ ಮುನಿಸಿಗೆ ಕಾರಣವಾಗಿತ್ತು, ಬಹಿರಂಗವಾಗಿ ತಮ್ಮ ಅಸಮಾಧಾನವನ್ನು ಹೇಳಿಕೊಂಡಿದ್ದರೂ ಅದಕ್ಕೆ ಕಾಂಗ್ರೆಸ್ ನಲ್ಲಿ ಯಾವುದೇ ಮನ್ನಣೆ ದೊರೆಯಲಿಲ್ಲ. ಇದರಿಂದ ಸಾಕಷ್ಟು ಬೇಸರಗೊಂಡಿದ್ದ ಅವರು ನರೇಂದ್ರ ಮೋದಿ ಪ್ರಧಾನಿಯಾದ ಕೆಲವು ವರ್ಷಗಳ ಬಳಿಕ ಬಿಜೆಪಿಯತ್ತ ಮುಖ ಮಾಡಿದರು. ಎಸ್ ಎಂ ಕೃಷ್ಣ ಬಿಜೆಪಿ ಸೇರಿದ್ದು ರಾಜಕೀಯ ವಲಯದಲ್ಲೂ ಸಾಕಷ್ಟು ಟೀಕೆಗೆ ಕಾರಣವಾಯಿತು. ಆದರೆ ಅವರು ರಾಜಕೀಯದ ಕೊನೆಯ ಘಟ್ಟದಲ್ಲಿ ಬಿಜೆಪಿಯೊಂದಿಗೆ ಕೈಜೋಡಿಸಿದರು.

ರಾಜಕೀಯ ಜೀವನ ಎಸ್ ಎಂ ಕೃಷ್ಣ ಅವರು 1960 ರ ಸುಮಾರಿಗೆ ತಮ್ಮ ರಾಜಕೀಯ ಪಯಣ ಆರಂಭಿಸಿದರು. 1962 ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರಕ್ಕೆ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಸೋಲಿಸಿ ಗೆಲುವು ಸಾಧಿಸಿದರು. ಇದಾದ ನಂತರ ಅವರು ಪ್ರಜಾ ಸೋಷಿಯಲಿಸ್ಟ್ ಪಕ್ಷವನ್ನು ಸೇರಿದರು ಮತ್ತು 1968 ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಗೆದ್ದರು. ನಂತರ ಎಸ್‌ಎಂ ಕೃಷ್ಣ ಅವರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡರು ಮತ್ತು 1971 ರಲ್ಲಿ ಮಂಡ್ಯ ಲೋಕಸಭಾ ಕ್ಷೇತ್ರದಿಂದ ಮರು ಚುನಾವಣೆಯಲ್ಲಿ ಗೆದ್ದರು.

1985ರಲ್ಲಿ ಎಸ್.ಎಂ.ಕೃಷ್ಣ ಮತ್ತೆ ರಾಜ್ಯ ರಾಜಕಾರಣಕ್ಕೆ ಮರಳಿ ವಿಧಾನಸಭೆ ಚುನಾವಣೆಗೆ ಸ್ಪರ್ಧಿಸಿದರು. ಅವರು 1999 ರಿಂದ 2004 ರವರೆಗೆ ಕರ್ನಾಟಕದ ಮುಖ್ಯಮಂತ್ರಿಯಾಗಿದ್ದರು. ಅವರು ಡಿಸೆಂಬರ್ 2004 ರಿಂದ ಮಾರ್ಚ್ 2008 ರವರೆಗೆ ಮಹಾರಾಷ್ಟ್ರದ ರಾಜ್ಯಪಾಲರಾಗಿದ್ದರು. ಎಸ್ ಎಂ ಕೃಷ್ಣ ಅವರು ಪ್ರಧಾನಿ ಮನಮೋಹನ್ ಸಿಂಗ್ ಸರ್ಕಾರದಲ್ಲಿ ವಿದೇಶಾಂಗ ಸಚಿವರಾಗಿಯೂ ಕಾರ್ಯನಿರ್ವಹಿಸಿದ್ದರು. ಜನವರಿ 2023 ರಲ್ಲಿ, ಎಸ್‌ಎಂ ಕೃಷ್ಣ ಅವರು ಇನ್ನು ಮುಂದೆ ಸಕ್ರಿಯ ರಾಜಕೀಯದಲ್ಲಿ ಇರುವುದಿಲ್ಲ ಎಂದು ಘೋಷಿಸಿದರು.

ಕರ್ನಾಟಕದ ಮಂಡ್ಯದಿಂದ ಹಲವಾರು ಬಾರಿ ಸಂಸದರಾಗಿ ಆಯ್ಕೆಯಾಗಿದ್ದರು. ಅವರು ಇಂದಿರಾಗಾಂಧಿ ಮತ್ತು ರಾಜೀವ್ ಗಾಂಧಿಯವರ ಆಡಳಿತದಲ್ಲಿ ಸಚಿವರಾಗಿ ಸೇವೆ ಸಲ್ಲಿಸಿದರು. ಅವರು 1983-84 ರ ನಡುವೆ ಇಂದಿರಾ ಗಾಂಧಿ ಮತ್ತು 1984-85 ರ ನಡುವೆ ರಾಜೀವ್ ಗಾಂಧಿಯವರ ಅವಧಿಯಲ್ಲಿ ಕೈಗಾರಿಕೆ ಮತ್ತು ಹಣಕಾಸು ರಾಜ್ಯ ಸಚಿವರಾದರು.

## ನಡೆದಿತ್ತು ಅಪಹರಣ

ಸರ್ಕಾರ ಒಪ್ಪಂದ ಮಾಡಿಕೊಂಡಿತ್ತು. ಗಾಜನೂರಿನ ಭಾಗಕ್ಕೆ ತೆರಳೋದಾದರೆ ರಾಜ್ಯ ಸರ್ಕಾರಕ್ಕೆ ಮೊದಲೇ ತಿಳಿಸಬೇಕು ಎಂದು ಹೇಳಿತ್ತು. ಇದಕ್ಕೆ ರಾಜ್ ಕುಮಾರ್ ಕೂಡ ಒಪ್ಪಿದ್ದರು.

ಪ್ರತಿ ಬಾರಿಯೂ ಗಾಜನೂರಿಗೆ ತೆರಳುವಾಗ ರಾಜ್ ಕುಮಾರ್ ಅವರು ಸರ್ಕಾರಕ್ಕೆ ತಿಳಿಸುತ್ತಿದ್ದರು. ಆಗ ಅಣ್ಣಾವ್ರಿಗೆ ಸೂಕ್ತ ಪೊಲೀಸ್ ಬಧ್ರತೆಯನ್ನು ಸರ್ಕಾರ ಒದಗಿಸುತ್ತಿತ್ತು. ಆದರೆ, ಅಂದು ಮಾತ್ರ ಅವರು ರಾಜ್ಯ ಸರ್ಕಾರಕ್ಕೆ ಯಾವುದೇ ಮಾಹಿತಿ ನೀಡಿರಲಿಲ್ಲ, ನೇರವಾಗಿ ಗಾಜನೂರಿಗೆ ತೆರಳಿದರು. ಈ ವೇಳೆ ವೀರಪ್ಪನ್ ಕಡೆಯವರು ಬಂದು ರಾಜ್ ಕುಮಾರ್ ನ ಕರೆದುಕೊಂಡು ಹೋದರು. ಇದು ಸರ್ಕಾರಕ್ಕೆ ಹಾಗೂ ಅಣ್ಣಾವ್ರ ಕುಟುಂಬಕ್ಕೆ ದೊಡ್ಡ ಆಘಾತ ನೀಡಿತ್ತು. ಆ ಸಂದರ್ಭದಲ್ಲಿ ರಾಜ್ಯದಲ್ಲಿ ಥಿಯೇಟರ್ ಗಳು ಮುಚ್ಚಿದ್ದವು. 108 ದಿನಗಳ ಬಳಿಕ ಅವರನ್ನು ಮರಳಿ ಕರೆ ತರಲಾಯಿತು. ಈ ವೇಳೆ ಕೃಷ್ಣ ಅವರು ಸಾಕಷ್ಟು ಶ್ರಮ ಹಾಕಿದ್ದರು.

## ಕೊನೆಯ ಪತ್ರ

ಮುಂದುವರಿದು, ''ಮೈಸೂರಿನ ಮಹಾರಾಜರಾಗಿದ್ದ ಜನಾನುರಾಗಿ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರು ಕನ್ನಡದ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಲು ಕನ್ನಡ ಸಾಹಿತ್ಯ ಪರಿಷತ್ತನ್ನು ಪ್ರತಿಷ್ಠಾಪಿಸಿದರು. ಅಂದಿನಿಂದ ಕನ್ನಡದ ನುಡಿಹಬ್ಬ ಆಳುವ ಸರ್ಕಾರಗಳ ನೇತೃತ್ವದಲ್ಲಿ ವಿಜೃಂಭಣೆಯಿಂದ ಜರುಗುತ್ತಾ ಬಂದಿದೆ. ಕನ್ನಡ ಸಾರಸ್ವತ ಲೋಕದ ಹಲವು ಹಿರಿಯ ಸಾಹಿತಿಗಳು ಸಮ್ಮೇಳನದ ಅಧ್ಯಕ್ಷರಾಗಿ ಕನ್ನಡದ ತೇರನ್ನು ಎಳೆಯುವುದರ ಜೊತೆಗೆ ಕನ್ನಡ ಭಾಷೆಯನ್ನು ಪ್ರಚುರ ಪಡಿಸುತ್ತಾ ಕನ್ನಡದ ಉಳಿವಿಗಾಗಿ ಹಲವು ಸಲಹೆ ಒತ್ತಾಸೆಗಳನ್ನು ಸರ್ಕಾರಗಳಿಗೆ ನೀಡುತ್ತಾ ಬಂದಿದ್ದಾರೆ. ಸಾಹಿತ್ಯ ಸಮ್ಮೇಳನಗಳು ಕೇವಲ ಜನಜಾತ್ರೆಗಳಾಗದೆ ಕನ್ನಡದ ಅಸ್ಮಿತೆಯನ್ನು ಸಾರುವ ಹಬ್ಬವಾಗಿದ್ದು ಇದರಲ್ಲಿ ಕನ್ನಡದ ಹಲವು ವಿದ್ವಾಂಸರ ಲೇಖನಗಳು, ಪುಸ್ತಕಗಳು ಹಾಗೂ ಬರವಣಿಗೆಗಳು ಹೊರಬಂದು ಹಲವು ಓದುಗರಿಗೆ ಸವಿಯೂಟವನ್ನು ಉಣಬಡಿಸಿದೆ. ತಂತ್ರಜ್ಞಾನ ಬೆಳೆದಂತೆ ಕನ್ನಡದ ಆವಿಷ್ಕಾರಗಳು ಪರಿಷ್ಕೃತಗೊಂಡು ರಾಜ್ಯದ ಎಲ್ಲೆಯನ್ನು ಮೀರಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕನ್ನಡದ ಬಳಕೆ ಎದ್ದು ಕಾಣುತ್ತಿದೆ. ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರಕಿಸುವಲ್ಲಿ ಹಲವು ಮಹನೀಯರು ಶ್ರಮಿಸಿದ್ದು ಅದರ ಫಲವಾಗಿ ಅಂದಿನ ಪ್ರಧಾನ ಮಂತ್ರಿಗಳಾಗಿದ್ದ ಡಾ। ಮನಮೋಹನ್ ಸಿಂಗ್‌ರವರ ಅಧಿಕಾರಾವಧಿಯಲ್ಲಿ ಅದಕ್ಕೆ ಅಧಿಕೃತ ಮುದ್ರೆಯನ್ನು ಒತ್ತುವುದರ ಮೂಲಕ ಕನ್ನಡಕ್ಕೆ ಅಧಿಕೃತ ಶಾಸ್ತ್ರೀಯ ಸ್ಥಾನಮಾನ ಕಲ್ಪಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ'' ಎಂದು ಅವರು ಉಲ್ಲೇಖಿಸಿದ್ದರು.

''ಮಂಡ್ಯ ಆತಿಥ್ಯಕ್ಕೆ ಹೆಸರಾದ ಜಿಲ್ಲೆ, ಕನ್ನಡ ಭಾಷೆಯನ್ನು ಗೌರವಿಸುವಲ್ಲಿ ಜಿಲ್ಲೆಯ ಜನ ಸಿದ್ಧಹಸ್ತರು. ಈ ಹಿಂದೆ ನಡೆದ ಸಾಹಿತ್ಯ ಸಮ್ಮೇಳನಗಳಲ್ಲಿ ಸಕ್ರೀಯವಾಗಿ ಭಾಗವಹಿಸಿ ಕನ್ನಡದ ಹಬ್ಬವನ್ನು ತಮ್ಮ ಮನೆಯ ಹಬ್ಬವಾಗಿ ಆಚರಿಸಿದ ಕೀರ್ತಿ ಮಂಡ್ಯ ಜಿಲ್ಲೆಯ ಜನರಿಗೆ ಸಲ್ಲುತ್ತದೆ. ಈ ಹಿಂದಿನ ಎರಡು ಸಮ್ಮೇಳನಗಳಲ್ಲಿ ಭಾಗವಹಿಸಿದ್ದ ನಾನು ಸದರಿ ಸಮ್ಮೇಳನಗಳಲ್ಲಿ ಭಾಗವಹಿಸಿದ್ದ ಜನರ ಉತ್ಸುಕತೆ ಕಂಡು ಅತ್ಯಂತ ಪುಳಕಿತನಾಗಿದ್ದೆ. ಪ್ರಥಮ ಬಾರಿಗೆ ಮಂಡ್ಯದಲ್ಲಿ ನಡೆದ ಸಾಹಿತ್ಯ ಸಮ್ಮೇಳನಕ್ಕೆ ಹಿರಿಯ ಮಹಿಳಾ ಸಾಹಿತಿಗಳಾಗಿದ್ದ ಶ್ರೀಮತಿ ಜಯದೇವಿ ತಾಯಿ ಲಿಗಾಡೆಯವರು ಪ್ರಥಮ ಮಹಿಳಾ ಸಮ್ಮೇಳನಾಧ್ಯಕ್ಷರಾಗಿದ್ದು ಅಂದಿನ ಸಾಹಿತ್ಯ ಸಮ್ಮೇಳನ ಐತಿಹಾಸಿಕ ದಾಖಲೆಯಾಗಿದೆ. ಅದೇ ರೀತಿ 1994 ರಲ್ಲಿ ನಾನು ರಾಜ್ಯದ ಉಪ ಮುಖ್ಯಮಂತ್ರಿಯಾಗಿದ್ದಾಗ ಮಾನ್ಯ ಶ್ರೀ ಜಿ. ಮಾದೇಗೌಡರವರ ನೇತೃತ್ವದಲ್ಲಿ ನಡೆದ ಸಮ್ಮೇಳನ ಅವಿಸ್ಮರಣೀಯ, ಮಾದೇಗೌಡರು ಎಲ್ಲರನ್ನೂ ಒಗ್ಗೂಡಿಸಿ ಎಲ್ಲರ ಸಹಕಾರದಿಂದ ಸಮ್ಮೇಳನ ಆಯೋಜಿಸಿದ್ದು ನನ್ನ ಸ್ಮೃತಿಪಟಲದಲ್ಲಿದೆ'' ಎಂದು ಕೃಷ್ಣ ಹೇಳಿದ್ದರು.

''ಜಗದ್ಗುರು ಶ್ರೀ ಶ್ರೀ ಬಾಲಗಂಗಾಧರನಾಥ ಮಹಾಸ್ವಾಮಿಗಳ ಶ್ರೀರಕ್ಷೆಯಲ್ಲಿ ಅಂದು ನಡೆದ ಸಮ್ಮೇಳನದ ರೀತಿಯಲ್ಲೇ ಪ್ರಸ್ತುತ ಆಯೋಜನೆಗೊಂಡಿರುವ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿ. 1994ರ ಸಾಹಿತ್ಯ ಸಮ್ಮೇಳನದ ಅವಧಿಯಲ್ಲಿ ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿದ್ದ ನನ್ನ ಸನ್ಮಿತ್ರರೂ, ಹಿರಿಯ ಸಾಹಿತಿಗಳೂ, ಶರಣರಾದ ಗೋ. ರು. ಚನ್ನಬಸಪ್ಪನವರು ಪ್ರಸ್ತುತ ಸಮ್ಮೇಳನಾಧ್ಯಕ್ಷರಾಗಿ ನೇಮಕಗೊಂಡಿರುವುದು ಸಂತಸ ತಂದಿದ್ದು ಅವರಿಗೆ ನನ್ನ ಶುಭ ಹಾರೈಕೆ. ನಾಡಿನ ಶ್ರೀಮಂತ ಸಾಹಿತ್ಯ ಪರಂಪರೆಗೆ ಮಂಡ್ಯ ಜಿಲ್ಲೆ ಕೊಡುಗೆ ಅಪಾರ, ಪ್ರಾತಃಸ್ಮರಣೀಯರಾದ ಶ್ರೀ ಪಿಟೀಲು ಚೌಡಯ್ಯ, ಶ್ರೀ ಬಿ.ಎಂ. ಶ್ರೀಕಂಠಯ್ಯ, ಶ್ರೀ ಪು.ತಿ.ನರಸಿಂಹಾಚಾರ್, ಶ್ರೀ ಕೆ.ಎಸ್. ನರಸಿಂಹಸ್ವಾಮಿ, ಜಾನಪದ ತಜ್ಞ ಡಾ। ಎಚ್. ಎಲ್. ನಾಗೇಗೌಡ, ಖ್ಯಾತ ನಟ ಶ್ರೀ ಅಂಬರೀಶ್ ಇವರೆಲ್ಲರೂ ಮಂಡ್ಯ ಜಿಲ್ಲೆಯ ಕೀರ್ತಿ ಬೆಳಗಿಸಿ ಅಜರಾಮರರಾದ ಮಹನೀಯರು ಇವರುಗಳನ್ನು ಪ್ರಸ್ತುತ ಸಮ್ಮೇಳನದಲ್ಲಿ ನೆನೆಯುವುದು ಅವಶ್ಯವಾಗಿದೆ'' ಎಂದು ಅವರು ಪತ್ರದಲ್ಲಿ ಪ್ರಸ್ತಾಪಿಸಿದ್ದರು.

''ಸರ್ವರಿಗೂ ಆದರ್ಶನೀಯರಾದ ಜಗದ ಕವಿ ಶ್ರೀ ಕುವೆಂಪುರವರ ಸರ್ವಜನಾಂಗದ ಶಾಂತಿಯ ತೋಟದ ಸ್ತುತಿಯನ್ನು ನೆನೆಯುತ್ತಾ ಸಾಹಿತ್ಯ ಸಮ್ಮೇಳನಕ್ಕೆ ಶುಭವಾಗಲಿ, ಈ ಸಂದರ್ಭದಲ್ಲಿ ಹೊರತರುತ್ತಿರುವ ನೆನಪಿನ ಸಂಪುಟಕ್ಕೆ ನನ್ನ ಶುಭಕಾಮನೆಗಳು'' ಎಂದು ಕೊನೆಯ ಸಂದೇಶದಲ್ಲಿ ಎಸ್ ಎಂ ಕೃಷ್ಣ ತಿಳಿಸಿದ್ದರು.

## ದರ್ಶನ ಪಡೆದ ರಮ್ಯಾ

ಕೃಷ್ಣ ಅವರನ್ನು ಅಂಕಲ್ ಎಂದೇ ಕರೆಯುತ್ತಿದ್ದ ರಮ್ಯಾ, ಕೃಷ್ಣ ಅವರ ಮಾರ್ಗದರ್ಶನದಲ್ಲೇ ರಾಜಕೀಯ ನಡೆಗಳನ್ನು ಇಟ್ಟವರು. ಮಂಡ್ಯ ಜಿಲ್ಲೆಯ ಕಾಂಗ್ರೆಸ್‌ನ ಒಳ ರಾಜಕಾರಣವನ್ನು ಭೇದಿಸಿ ಸಂಸದರಾಗಲು ಈ ಮಾರ್ಗದರ್ಶನವೇ ಅವರಿಗೆ ರಕ್ಷೆಯಾಗಿತ್ತು.

## ಕರ್ನಾಟಕ ಸದಾ ಋಣಿ

**ಹೊಸ ರಾಜಕಾರಣಿಗಳಿಗೆ ಮಾದರಿ:** ಕೃಷ್ಣ ಅವರ ದೂರದರ್ಶಿತ್ವ, ಶಿಸ್ತುಬದ್ಧ ಜೀವನ, ಸಜ್ಜನಿಕೆಯ ನಡವಳಿಕೆ ಮತ್ತು ಅಧ್ಯಯನಶೀಲ ಪ್ರವೃತ್ತಿ ಉದಯೋನ್ಮುಖ ರಾಜಕಾರಣಿಗಳಿಗೆ ಮಾದರಿಯಾಗಿದೆ.

ಅವರ ಅಗಲಿಕೆಯಿಂದ ನೊಂದಿರುವ ಅವರ ಕುಟುಂಬವರ್ಗ ಮತ್ತು ಅಭಿಮಾನಿಗಳ ದು:ಖದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಭಗವಂತನಲ್ಲಿ ಕೋರುತ್ತೇನೆ ಎಂದು ಎಸ್ ಎಂ ಕೃಷ್ಣ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

## ರಾಜಕೀಯ ಸೇರಿದ್ದ ಎಂಎಸ್‌ಎಂಕೆ

ಈ ಸಂದರ್ಭದಲ್ಲಿ ಜಾನ್.ಎಫ್.ಕೆನಡಿ ಅವರ ಪ್ರಭಾವಕ್ಕೆ ಸಹ ಕೃಷ್ಣ ಒಳಗಾಗುತ್ತಾರೆ. 1960 ಅಮೆರಿಕ ಅಧ್ಯಕ್ಷೀಯ ಚುನಾವಣೆಗೆ ಯುವ ರಾಜಕಾರಣಿ ಕೆನಡಿ ಸ್ಪರ್ಧಿಸಿದ್ದ ವೇಳೆ ಅವರ ಪರ ಕೃಷ್ಣ ಅವರು ಪ್ರಚಾರ ನಡೆಸಿದ್ದರು. ಚುನಾವಣೆಯಲ್ಲಿ ಜಯಗಳಿಸಿದ ನಂತರ ಕನಡಿ ಅವರು ಎಸ್‌ಎಂ ಕೃಷ್ಣ ಅವರಿಗೆ ಧನ್ಯವಾದ ಪತ್ರ ಸಹ ಬರೆದಿದ್ದರು.

1961 ರಂದು ಕೃಷ್ಣ ಅವರು ಅಮೆರಿಕದಿಂದ ಉನ್ನತ ವ್ಯಾಸಂಗ ಮುಗಿಸಿ ಭಾರತಕ್ಕೆ ಮರಳಿದರು. ಬಂದವರೇ 1962ರಲ್ಲಿ ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ ಪ್ರಜಾ ಸೋಷಿಯಲಿಸ್ಟ್ ಪಾರ್ಟಿಯಿಂದ ಸ್ಪರ್ಧಿಸಿ ಮೊದಲ ಚುನಾವಣೆಯಲ್ಲೇ ಗೆಲುವು ಸಾಧಿಸಿದ್ದರು. ಹಲವಾರು ಬಾರಿ ಎಂಎಸ್‌ಎಂಕೆ ಕೆನಡಿ ತನ್ನ ರಾಜಕೀಯ ಗುರು ಎಂದು ಹೇಳಿಕೊಂಡಿದ್ದರು.

## ಡಿಕೆಶಿ ಕಣ್ಣೀರು

ಇಂದು ಸಂಜೆ ಕೆಪಿಸಿಸಿ ಕಚೇರಿಯಲ್ಲಿರುವ ಭಾರತ್ ಜೋಡೋ ಸಭಾಂಗಣದಲ್ಲಿ ಪಕ್ಷದ ವತಿಯಿಂದ ಕೃಷ್ಣ ಅವರಿಗೆ ನಮನ ಸಲ್ಲಿಸಲಾಗುವುದು. ಮೆಟ್ರೋ, ವಿಮಾನ ನಿಲ್ದಾಣವನ್ನು ತಂದವರು ಅವರು. ಅವರ ಬಗ್ಗೆ ಅಟಲ್ ಬಿಹಾರಿ ವಾಜಪೇಯಿ ಹೇಳಿದ ಮೆಚ್ಚುಗೆ ಮಾತೇ ಸಾಕು ಎಂದು ಕಂಬನಿ ಮಿಡಿದರು.

## ಕುಟುಂಬ

ಕೂಡಲೆ ಅವರನ್ನು ಕೋಲಾರದ ಜಾಲಪ್ಪ ಹಾಗೂ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ (ಡಿ.09) ರಾತ್ರಿ ಮಣಿಪಾಲ್ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ಮಣಿಪಾಲ್ ಆಸ್ಪತ್ರೆಗೆ ಅಂಗಾಂಗ ದಾನ ಮಾಡಲಾಗಿದ್ದು, ಕೋಲಾರದ ಜಾಲಪ್ಪಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳಿಗೆ ಅನುಕೂಲವಾಗಲೆಂದು ದೇಹದಾನ ಮಾಡಲಾಗಿದೆ. ಈ ಮೂಲಕ ಸಂಧ್ಯಾ ಕುಟುಂಬದವರು ಸಾವಿನಲ್ಲೂ ಸಾರ್ಥಕತೆ ಮೆರೆದ್ದಾರೆ.

ಸಂಧ್ಯಾ ಅವರು ಕಳೆದ 11 ತಿಂಗಳಿಂದ ಬೂದಿಕೋಟೆ ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು. ತಮ್ಮ ಸೇವೆಯಿಂದಲೇ ಸಂಧ್ಯಾ ಅವರು ಜನರ ಪ್ರೀತಿ ಗಳಿಸಿದ್ದರು. ಸಂಧ್ಯಾ ಅವರ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದರು.

## ಅಡ್ಡಿ

ಮಾಹಿತಿ ಪಡೆದ ರೈಲ್ವೇ ರಕ್ಷಣಾ ಪಡೆ (ಆರ್‌ಪಿಎಫ್) ಕೂಡಲೇ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡಿದೆ. ಹೆಚ್ಚಿನ ಹಾನಿ ಅಥವಾ ಅಪಾಯವನ್ನು ತಪ್ಪಿಸಲು ಓವರ್‌ಹೆಡ್ ತಂತಿಗಳಿಗೆ ವಿದ್ಯುತ್ ಪೂರೈಕೆಯನ್ನು ಸ್ಥಗಿತಗೊಳಿಸಲಾಯಿತು, ಇದು ರೈಲು ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಅಡ್ಡಿಪಡಿಸಿತು.

ವೈರ್‌ಗಳನ್ನು ಸರಿಪಡಿಸಲು ಓವರ್‌ಹೆಡ್ ಸಲಕರಣೆ ವಿಭಾಗವು ತ್ವರಿತವಾಗಿ ಘಟನಾ ಸ್ಥಳಕ್ಕೆ ಆಗಮಿಸಿತು ಮತ್ತು ವಿದ್ಯುತ್ ಹರಿವನ್ನು ಪುನಃಸ್ಥಾಪಿಸಿದ ನಂತರ ಬೆಳಗ್ಗೆ 9.30 ರ ಸುಮಾರಿಗೆ ರೈಲು ಸೇವೆಗಳು ಪುನರಾರಂಭಗೊಂಡವು. ಸುಮಾರು 30 ನಿಮಿಷಗಳ ಕಾಲ 4 ರಿಂದ 14 ನೇ ಸಾಲಿನವರೆಗೆ ವಿದ್ಯುತ್ ಪೂರೈಕೆಯ ಮೇಲೆ ಪರಿಣಾಮ ಬೀರಿತು.

# 11 ರಂದು ಗುಂಡ್ಲುಪೇಟೆ ತಾಲೂಕಿಗೆ ಲೋಕಾಯುಕ್ತ ಅಧಿಕಾರಿಗಳ ಭೇಟಿ : ಸಾರ್ವಜನಿಕರಿಂದ ದೂರು ಸ್ವೀಕಾರ

**ಚಾಮರಾಜನಗರ:** ಜಿಲ್ಲಾ ಲೋಕಾಯುಕ್ತ ಅಧಿಕಾರಿಗಳು ಗುಂಡ್ಲುಪೇಟೆ ತಾಲೂಕಿಗೆ ಡಿಸೆಂಬರ್ 11 ರಂದು ಭೇಟಿ ನೀಡಿ ಸಾರ್ವಜನಿಕರಿಂದ ದೂರು ಅರ್ಜಿ ಸ್ವೀಕರಿಸಿ ವಿಚಾರಣೆ ನಡೆಸಲ್ಲಿದ್ದಾರೆ. ಜಿಲ್ಲಾ ಲೋಕಾಯುಕ್ತ ಅಧಿಕಾರಿಗಳು ಗುಂಡ್ಲುಪೇಟೆ ಪಟ್ಟಣದ ಪ್ರವಾಸಿಮಂದಿರ (ಐ.ಬಿ) ದಲ್ಲಿ ಡಿಸೆಂಬರ್ 11 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಸಾರ್ವಜನಿಕರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಭರ್ತಿಮಾಡಿದ ದೂರು ಅರ್ಜಿಗಳನ್ನು ಸ್ವೀಕರಿಸಿ ವಿಚಾರಣೆ ಮಾಡುವರು. ಸರ್ಕಾರಿ ಕಚೇರಿಗಳಲ್ಲಿ ಕೆಲಸದಲ್ಲಿ ಅನಗತ್ಯ ವಿಳಂಬ, ಇನ್ನಿತರ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ, ನೌಕರರ ವಿರುದ್ಧ ಸಾರ್ವಜನಿಕರು ಮಾಹಿತಿ, ದೂರುಗಳನ್ನು ನಿಗದಿತ ನಮೂನೆ-1 ಮತ್ತು 2ರಲ್ಲಿ ನೀಡಬಹುದು. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ವಿಭಾಗದ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮಾಡುವರು.

# ತಿಪಟೂರಿನ ಪ್ರಸಿದ್ದಿ ಗಣೇಶೋತ್ಸವ

**ತಿಪಟೂರು:** ತಾಲೂಕಿನ ಶ್ರೀ ಸತ್ಯಗಣಪತಿ ಸ್ವಾಮಿ ರವರ 95ನೇ ವರ್ಷದ ವಿಸರ್ಜನಾ ಮಹೋತ್ಸವಕ್ಕೆ ಹಗಲಿರುಳು ಶ್ರಮಿಸಿದ ನಗರಸಭೆಯ ಸಿಬ್ಬಂದಿ,ಪೌರಕಾರ್ಮಿಕರಿಗೆ, ಪೊಲೀಸ್ ಇಲಾಖೆಯವರಿಗೆ, ಬೆಸ್ಕಾಂ ಇಲಾಖೆಯವರಿಗೆ, ಪತ್ರಿಕಾ ಮಾಧ್ಯಮದ ಬಂಧುಗಳಿಗೆ,ತಾಲೂಕು ಆಡಳಿತಕ್ಕೆ, ಶ್ರೀ ಸತ್ಯ ಗಣಪತಿ ಸ್ವಾಮಿ ಸೇವಾ ಸಂಘಕ್ಕೆ ಹಾಗೂ ಸ್ವಯಂ ಸೇವಕರಿಗೆ, ಅನ್ನ ದಾಸೋಹಕ್ಕೆ ಸಹಕಾರ ನೀಡಿದ ಎಲ್ಲಾ ಭಕ್ತಾದಿಗಳಿಗೆ ಹಾಗೂ ಶ್ರೀ ಸತ್ಯ ಗಣಪತಿ ವಿಸರ್ಜನಾ ಮಹೋತ್ಸವಕ್ಕೆ ಪ್ರತ್ಯೇಕವಾಗಿ, ಪರೋಕ್ಷವಾಗಿ ಸಹಕರಿಸಿದ ತಾಲೂಕಿನ ಅಂಗಡಿ ಮಾಲೀಕರು, ವಾಣಿಜ್ಯೋದ್ಯಮಿಗಳು ಮತ್ತು ನಗರದ ಜನತೆಗೆ ತಿಪಟೂರು ನಗರಸಭಾ ಸದಸ್ಯ ಲೋಕನಾಥ್ ಸಿಂಗ್ ಧನ್ಯವಾದಗಳು ಅರ್ಪಿಸುತ್ತೇನೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುವರ್ಣಸೌಧದಲ್ಲಿ ಅನುಭವಮಂಟಪ; ಲಿಂಗಾಯತೆ ಮಹಾಸಭಾ ಶ್ಲಾಘನೆ

ಮಂಡ್ಯ : ಬೆಳಗಾವಿಯ ಸುವರ್ಣಸೌಧದಲ್ಲಿ ಬಸವಣ್ಣನವರ ಅನುಭವ ಮಂಟಪದ ದೈತ್ಯ ತೈಲಚಿತ್ರ ಅನಾವರಣಗೊಳಿಸಿರುವ ಸರ್ಕಾರದ ನಿರ್ಧಾರವನ್ನು ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಬೆಟ್ಟಹಳ್ಳಿ ಮಂಜುನಾಥ್ ಶ್ಲಾಘಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಬಸವಾನು ಯಾಯಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವಿಧಾನಮಂಡಲದ ಅಧ್ಯಕ್ಷರಾದ ಯು.ಟಿ.ಖಾದರ್, ಬಸವರಾಜ್ ಹೊರಟ್ಟಿಯವರ ಬಸವಪ್ರಜ್ಞೆ ಇತರೆ ರಾಜಕಾರಣಿಗಳಿಗೆ ಮಾದರಿಯಾಗಬೇಕಿದೆ ಎಂದು ತಿಳಿಸಿದ್ದಾರೆ.

ಬಸವಣ್ಣನವರ ಅನುಭವ ಮಂಟಪವನ್ನು ವಿಶ್ವದ ಮೊದಲ ಸಂಸತ್ತು ಎಂದೇ ಪರಿಗಣಿಸಲಾಗಿದೆ. ಜನಮಾನಸದಲ್ಲಿ ಸದಾ ಸ್ಮರಣೀಯವಾಗಿ ಉಳಿಯುವ ಮತ್ತೊಂದು ಐತಿಹಾಸಿಕ ನಿರ್ಧಾರ ಕೈಗೊಂಡಿರುವ ಸರ್ಕಾರ ಕನ್ನಡರಾಜ್ಯೋತ್ಸವದ ಸಂದರ್ಭಧಲ್ಲಿ ಬಸವಣ್ಣನವರ ಭಾವಚಿತ್ರವನ್ನು ಧ್ವಜಾರೋಹಣದ ಸಂದರ್ಭದಲ್ಲಿಟ್ಟು ಗೌರವಿಸುವ ಆದೇಶ ಹೊರಡಿಸಬೇಕೆಂದು ಮನವಿ ಮಾಡಿದ್ದಾರೆ. ವಿಶ್ವಗುರು ಶ್ರೀ ಬಸವಣ್ಣನವರು ಸ್ಥಾಪಿಸಿದ, ವಿಶ್ವದ ಮೊದಲ ಸಂಸತ್ತು ಎಂಬ ಖ್ಯಾತಿಯ, ಅನುಭವ ಮಂಟಪದ ಬೃಹತ್ ತೈಲವರ್ಣ ಚಿತ್ರ ಅನಾವರಣವು ನಮ್ಮ ಪ್ರಜಾಪ್ರಭುತ್ವದ ಮೂಲ ಆಶಯಗಳು, ಸಮಾನತೆ, ಮಾನವೀಯ ಸಂದೇಶಗಳನ್ನು ಜಗತ್ತಿಗೆ ಮತ್ತೊಮ್ಮೆ ಪರಿಚಯಿಸಲಿದೆ ಎಂದು ಎಂ.ಎಸ್.ಮಂಜುನಾಥ್ ತಿಳಿಸಿದ್ದಾರೆ.

ಅನುಭವಮಂಟಪ ಸಮಾನತೆಯ ಸಂಕೇತವಾಗಿದ್ದು ಪ್ರಜಾಪ್ರಭುತ್ವದ ಆಶಯಗಳನ್ನು ಬಿಂಬಿಸುವ ಸುವರ್ಣಸೌಧದ ತೈಲಚಿತ್ರ ಮಾದರಿಯನ್ನು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾಪಂಚಯತ್ ಕಚೇರಿಯ ಸಭಾಂಗಣದಲ್ಲಿ ಅಳವಡಿಸಲು ಸರ್ಕಾರ ಆದೇಶ ಹೊರಡಿಸಬೇಕೆಂದು ಲಿಂಗಾಯತ ಮಹಾಸಭಾ ಕೋರಿದೆ.



# ಹಿರಿಯ ಅರ್ಚಕ ಶೇಷಾದ್ರಿ ಭಟ್ ನಿಧನ



**ಮಂಡ್ಯ :** ನಗರದ ಪ್ರಸಿದ್ಧ ಶ್ರೀ ಲಕ್ಷ್ಮಿ ಜನಾರ್ಧನ ಸ್ವಾಮಿ ದೇವಸ್ಥಾನದ ಅರ್ಚಕರಾದ ಶೇಷಾದ್ರಿ ಭಟ್ (80) ರವರು ಸೋಮವಾರ ಬೆಳಗಿನ ಜಾವ 2.30 ರಲ್ಲಿ ನಿಧನರಾದರು. ಅಂತಿಮ ದರ್ಶನದ ವ್ಯವಸ್ಥೆಯನ್ನು ಮಂಡ್ಯ ನಗರದ ಓಲ್ಡ್ ಟೌನ್ನಲ್ಲಿರುವ ಅವರ ಸ್ವಗೃಹದಲ್ಲಿ ವ್ಯವಸ್ಥೆ ಮಾಡಲಾಗಿತ್ತು. ಮುಂದಿನ ವಿಧಿ ವಿಧಾನಗಳು ಮಧ್ಯಾಹ್ನ 1:00 ನಂತರ ಮಂಡ್ಯ ನಗರದ ಹಾಲಹಳ್ಳಿಯಲ್ಲಿರುವ ಬ್ರಾಹ್ಮಣರ ಮೋಕ್ಷಧಾಮದಲ್ಲಿ ನೆರವೇರಿಸಲಾಯಿತು.

# ರೈತರ ಸಮಸ್ಯೆ ಬಗೆಹರಿಸುವಂತೆ ಒತ್ತಾಯ; ಸರ್ಕಾರಗಳ ವಿರುದ್ಧ ಆಕ್ರೋಶ

**ಚಾಮರಾಜನಗರ:** ರೈತರ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಜಿಲ್ಲಾಡಳಿತ ಭವನದ ಮುಖ್ಯ ಗೇಟ್ ಬಳಿ ಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆಯಲ್ಲಿ ಜಿಲ್ಲಾಡಳಿತ ಭವನಕ್ಕೆ ತೆರಳಿ ಪ್ರತಿಭಟನೆ ನಡೆಸಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ದೆಹಲಿಯಲ್ಲಿ ರೈತರ ಪರ ಹೋರಾಟ ನಡೆಸುತ್ತಿರುವ ಜಗಜಿನ ಸಿಂಗ್ ದಲ್ಲೈವಾಲ ಉಪವಾಸ ಸತ್ಯಾಗ್ರಹ 14ನೇ ದಿನಕ್ಕೆ ಮುಂದುವರೆದಿದ್ದು ಅವರ ಆರೋಗ್ಯ ಸ್ಥಿತಿ ಹದಗೆಟ್ಟಿದೆ. ಪಂಜಾಬ್, ಹರಿಯಾಣ ಭಾಗದಲ್ಲಿ ನಿರಂತರವಾಗಿ ಚಳವಳಿ ನಡೆಸುತ್ತಿರುವ ರೈತರು ಎರಡು ದಿನಗಳ ಹಿಂದೆ ದೆಹಲಿಗೆ ಕಾಲ್ನಡಿಗೆ ಮೂಲಕ ಹೋಗಲು ಬರುತ್ತಿದ್ದಾಗ ಪೊಲೀಸರು ತಡೆದು ಆಶ್ರುವಾಯು ಸಿಡಿಸಿ ಜಲ ಪಿರಂಗಿ ಪ್ರಯೋಗ ಮಾಡಿದ್ದಾರೆ. ಇದರಿಂದಾಗಿ ಹಲವು ರೈತರು ಆಸ್ಪತ್ರೆ ಸೇರಿದ್ದಾರೆ. ಇಂತಹ ದಬ್ಬಾಳಿಕೆಯ ಪೊಲೀಸ್ ದೌರ್ಜನ್ಯ ಖಂಡನೀಯ ಎಂದರು.



ರೈತ ಮುಖಂಡ ದಲ್ಲೈವಾಲ ಆರೋಗ್ಯ ಸ್ಥಿತಿ ಹದಗೆಟ್ಟಿದ್ದು ಈ ಸಂಬಂಧ ಅಧಿವೇಶನದಲ್ಲಿ ಯಾವುದೇ ಸಂಸದರು ಧ್ವನಿ ಎತ್ತದಿರುವುದು ವಿಪರ್ಯಾಸ, ಕೇಂದ್ರ ಸರ್ಕಾರವು ಪ್ರತಿಭಟನಾನಿರತರನ್ನು ಮಾತುಕತೆಗೆ ಆಹ್ವಾನಿಸದೆ ನಿರ್ಲಕ್ಷತನ ತೋರುತ್ತಿದೆ. ಕೂಡಲೇ ಸಂಸದರು ಸರ್ಕಾರದ ಗಮನ ಸೆಳೆದು ರೈತರ ಹಿತ ಕಾಪಾಡಬೇಕು ಎಂದು ಆಗ್ರಹಿಸಿದರು.

ಎಲ್ಲ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು ಜಾರಿಗೆ ತರಬೇಕು. ಡಾ ಸ್ವಾಮಿನಾಥನ್ ವರದಿಯಂತೆ ಕನಿಷ್ಠ ಬೆಂಬಲ ಬೆಲೆ ನಿಗದಿಯಾಗಬೇಕು. ರೈತರ ಸಾಲ ಸಂಪೂರ್ಣ ಮನ್ನಾ ಆಗಬೇಕು. 60 ವರ್ಷ ತುಂಬಿದ ರೈತರಿಗೆ ಪಿಂಚಣಿ ಯೋಜನೆ ಜಾರಿಗೆ ಬರಬೇಕು. ರೈತರಿಗಾಗಿ ಹೋರಾಟ ಮಾಡಿದ ರೈತರ ಮೇಲೆ ಇರುವ ಎಲ್ಲ ಕೇಸುಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಾಪಸ್ ಪಡೆಯಬೇಕು. ಫಸಲ್ ಭೀಮಾ ಬೆಳೆ ವಿಮೆ ಯೋಜನೆ ತಿದ್ದುಪಡಿಯಾಗಬೇಕು ಎಂದು ಒತ್ತಾಯಿಸಿದರು. ಪ್ರತಿಭಟನಾ ಸ್ಥಳಕ್ಕಾಗಮಿಸಿದ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಮೂಲಕ ರೈತರ ಸಮಸ್ಯೆಗಳ ಕುರಿತು ಅಧಿವೇ ಶನದಲ್ಲಿ ಚರ್ಚಿಸುವಂತೆ ಸಂಸದ ಸುನೀಲ್ ಬೋಸ್ ಅವರಿಗೆ ಮನವಿ ಸಲ್ಲಿಸಿ ಪ್ರತಿಭಟನೆಯನ್ನು ಅಂತ್ಯಗೊಳಿಸಲಾಯಿತು. ಪ್ರತಿಭಟನೆಯಲ್ಲಿ ಒಕ್ಕೂಟದ ಹೊನ್ನೂರು ಪ್ರಕಾಶ್, ಉಡಿಗಾಲ ರೇವಣ್ಣ, ಪಟೇಲ್ ಶಿವಮೂರ್ತಿ, ಮೂಕಹಳ್ಳಿ ಮಹದೇವಸ್ವಾಮಿ, ಸತೀಶ್, ಶಿವಸ್ವಾಮಿ, ನಾಗೇಂದ್ರ, ಮಹೇಶ್, ಮಾದೇಶ್, ರಘು, ಸುಂದ್ರಪ್ಪ, ರಾಜು ಸೇರಿದಂತೆ ಇತರರು ಭಾಗವಹಿಸಿದ್ದರು.

## ಅರೋಗ್ಯ ಸಮಸ್ಯೆಗಳ ಪರಿಹಾರಕ್ಕಾಗಿ

# ಫೆಲೊಶಿಪ್ ಕಾರ್ಯಕ್ರಮಕ್ಕೆ ಚಾಲನೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯಲ್ಲಿ ಸ್ಥಳೀಯ ಆರೋಗ್ಯ ಸವಾಲುಗಳನ್ನು ಎದುರಿಸಲು ಸಾರ್ವಜನಿಕ ಆರೋಗ್ಯ ವ್ಯವಸ್ಥೆ ಆಧಾರಿತ ಅರೋಗ್ಯ ಸಮಸ್ಯೆಗಳ ಪರಿಹಾರಕ್ಕಾಗಿ ಫೆಲೊಶಿಪ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ.



ಇತ್ತೀಚೆಗೆ ನಗರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಸಚಿವರಾದ ಡಾ. ಎಚ್.ಸಿ. ಮಹದೇವಪ್ಪ, ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್, ಜಿಲ್ಲೆಯ ಶಾಸಕರು ಹಾಗೂ ಇನ್ನಿತರೆ ಗಣ್ಯರು, ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ದೊರತಿದೆ. ಸ್ಥಳೀಯ ಆರೋಗ್ಯ ಸವಾಲುಗಳನ್ನು ಗುರುತಿಸಲು ಮತ್ತು ಪರಿಹಾರಗಳನ್ನು ಸೂಚಿಸಲು 3 ವರ್ಷಗಳ ಕಾಲ, ಸಾರ್ವಜನಿಕ ಆರೋಗ್ಯ ಮತ್ತು ಸಾಮಾಜಿಕ ಕಾರ್ಯದ ಹಿನ್ನೆಲೆ ಹೊಂದಿರುವ ಇಬ್ಬರು ಫೆಲೋಗಳನ್ನು ಚಾಮರಾಜನಗರ ಜಿಲ್ಲಾ ಆಡಳಿತದ ಅಡಿಯಲ್ಲಿ ನಿಯೋಜಿಸಲಾಗುತ್ತದೆ.

ಬ್ಲಾಕ್‌ಚೈನ್ ಫಾರ್ ಇಂಪ್ಯಾಕ್ಟ್ (ಬಿ.ಎಫ್.ಐ) ನಿಂದ ಧನಸಹಾಯ ಪಡೆದ ಪರ್ಟ್ನೆರಿಂಗ್ ಹೋಪ್ ಇಂಟು ಆಕ್ಷನ್ (ಪಿ.ಎಚ್.ಐ.ಎ) ಫೌಂಡೇಶನ್‌ನಿಂದ ಕಾರ್ಯಗತಗೊಳಿಸಲ್ಪಡುವ ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ (ಐ.ಎಚ್ .ಸಿ.ಆರ್.ಎಫ್) ಕಾರ್ಯಕ್ರಮ ಕ್ಕಾಗಿ ಚಾಮರಾಜನಗರ ಜಿಲ್ಲಾಡಳಿತ ಮತ್ತು ಪರ್ಟ್ನೆರಿಂಗ್ ಹೋಪ್ ಇಂಟು ಆಕ್ಷನ್ (ಪಿ.ಎಚ್.ಐ.ಎ) ಫೌಂಡೇಶನ್‌ನಿಂದ ತಿಳಿವಳಿಕೆ ಕರಾರು ಒಪ್ಪಂದವನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಚಾಮರಾಜನಗರ ಜಿಲ್ಲಾಡಳಿತವು ಪರ್ಟ್ನೆರಿಂಗ್ ಹೋಪ್ ಇಂಟು ಆಕ್ಷನ್ (ಪಿ.ಎಚ್.ಐ.ಎ) ಅನುಷ್ಠಾನಗೊಳಿಸುವ ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ (ಐ.ಎಚ್ .ಸಿ.ಆರ್.ಎಫ್) ನಡುವೆ ತಿಳಿವಳಿಕೆ ಕರಾರು ಒಪ್ಪಂದವನ್ನು ವಿನಿಮಯ ಮಾಡಿಕೊಂಡು ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಇದು ಸ್ಥಳೀಯ ಆರೋಗ್ಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ಅರೋಗ್ಯ ಕಾರ್ಯಕರ್ತರು, ಹಾಗೂ ಸಮುದಾಯದ ಮುಖಂಡರೊಂದಿಗೆ ನಿಕಟವಾದ ಸಹಯೋಗದೊಂದಿಗೆ ಜಿಲ್ಲೆ ಆರೋಗ್ಯದ ಸಮಗ್ರ ವಿಶ್ಲೇಷಣೆಯನ್ನು ನಡೆಸಲಾಗುವುದು. ಈ ಸಹಯೋಗದ ಪ್ರಕ್ರಿಯೆಯ ಮೂಲಕ ಆರೋಗ್ಯ ಸಮಸ್ಯೆಗಳನ್ನು ಗುರುತಿಸಿ ನಂತರ ಜಿಲ್ಲೆಯ ಅಗತ್ಯತೆ ಮತ್ತು ಸಾಮರ್ಥ್ಯಗಳೊಂದಿಗೆ ಅನುಕೂಲವಾಗುಂತಹ ಸಾಂದರ್ಭಿಕ ನಾವೀನ್ಯತೆ ಪರಿಹಾರಗಳನ್ನು ಗುರುತಿಸಿ ಮೂರು ವರ್ಷಗಳ ಅವಧಿಯಲ್ಲಿ ಸರಿಸುಮಾರು 1.5 ಕೋಟಿ ರೂ.ಗಳ ಮೀಸಲಾದ ನಿಧಿಯೊಂದಿಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

ಕರ್ನಾಟಕ, ಜಾರ್ಖಂಡ್, ಮೇಘಾಲಯ ಮತ್ತು ಅಸ್ಸಾಂ ಈ ನಾಲ್ಕು ರಾಜ್ಯಗಳ ಐದು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ವಿಶಿಷ್ಟ ಪಾಲುದಾರಿಕೆಯ ಕಾರ್ಯಕ್ರಮವು ತಾಯಿಯ ಆರೋಗ್ಯ, ಮಕ್ಕಳ ಅಪೌಷ್ಟಿಕತೆ, ಇತರರ ನಡುವೆ ಸಾಂಕ್ರಾಮಿಕ ರೋಗಗಳು ಹಾಗೂ ಅಸಾಂಕ್ರಾಮಿಕ ರೋಗಗಳಂತಹ (ಎನ್‌ಸಿಡಿಗಳು) ಪ್ರಮುಖ ಕ್ಷೇತ್ರಗಳಲ್ಲಿ ಪ್ರಾಯೋಗಿಕ ಪರಿಹಾರಗಳನ್ನು ಅಭಿವೃದ್ಧಿಪಡಿಸಲು ಸ್ಥಳೀಯ ಸಂದರ್ಭ ಮತ್ತು ಮಾನವ-ಕೇಂದ್ರಿತ ವಿನ್ಯಾಸ ವಿಧಾನವನ್ನು ಬಳಸಿಕೊಳ್ಳುತ್ತದೆ. ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ (ಐ.ಎಚ್.ಸಿ.ಆರ್.ಎಫ್) ಕಾರ್ಯಕ್ರಮದ ಅಡಿಯಲ್ಲಿ ಮೇ 2024 ರಿಂದ 10 ಫೆಲೋಗಳನ್ನು ನಿಯೋಜಿಸಲು ಬ್ಲಾಕ್‌ಚೈನ್ ಫಾರ್ ಇಂಪ್ಯಾಕ್ಟ್ (ಬಿ.ಎಫ್.ಐ) ನಿಂದ 1 ಮಿಲಿಯನ್ ಯು.ಎಸ್.ಡಿ ಅನ್ನು ನಿಗದಿಪಡಿಸಿದೆ. ಮುಂಬರುವ ಹಂತಗಳಲ್ಲಿ ಈ ಕಾರ್ಯಕ್ರಮವನ್ನು ರಾಜಸ್ಥಾನ ಮತ್ತು ಮಧ್ಯಪ್ರದೇಶ ರಾಜ್ಯಗಳಿಗೆ ವಿಸ್ತರಿಸಲಾಗುತ್ತದೆ.

ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ. ಹೆಚ್. ಸಿ. ಮಹದೇವಪ್ಪ ಅವರು ಮಾತನಾಡಿ ಸಾರ್ವಜನಿಕ ಆರೋಗ್ಯ ಸವಾಲುಗಳನ್ನು ಎದುರಿಸಲು ಚಾಮರಾಜನಗರ ಜಿಲ್ಲೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ಸೇವಾ ಸಂಸ್ಥೆಯು ತಮ್ಮ ವಿನೂತನ ಕಾರ್ಯಕ್ರಮವಾದ ಇಂಡಿಯಾ ಹೆಲ್ತ್ ಅಂಡ್ ಕ್ಲೈಮೇಟ್ ರೆಸಿಲಿಯನ್ಸ್ ಫೆಲೋಶಿಪ್ (ಐ.ಎಚ್.ಸಿ.ಆರ್.ಎಫ್) ನ್ನು ಅನುಷ್ಠಾನಗೊಳಿಸುತ್ತಿರುವುದು ಹೆಮ್ಮೆಯ ಸಂಗತಿ. ಜಿಲ್ಲೆಯ ಸಾರ್ವಜನಿಕರು ಈ ಅವಕಾಶವನ್ನು ಬಳಸಿಕೊಳ್ಳಬೇಕು. ಆರೋಗ್ಯವನ್ನು ಉತ್ತಮವಾಗಿ ಸುಧಾರಿಸಿಕೊಳ್ಳಬೇಕೆಂದು ಕರೆ ನೀಡಿದರು.

ಜಿಲ್ಲಾಧಿಕಾರಿಗಳಾದ ಶಿಲ್ಪಾ ನಾಗ್ ಅವರು ಜಿಲ್ಲಾಡಳಿತವು ಐ.ಎಚ್.ಸಿ.ಆರ್.ಎಫ್ ಜೊತೆ ಪಾಲುದಾರಿಕೆಯನ್ನು ವಿನಿಮಯ ಮಾಡಿಕೊಂಡಿದೆ. ಈ ಸಹಯೋಗವು ಚಾಮರಾಜನಗರದ ಎಲ್ಲಾ ನಿವಾಸಿಗಳಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಯನ್ನು ಒದಗಿಸುವ ಬದ್ಧತೆಗೆ ಸಾಕ್ಷಿಯಾಗಿದೆ. ಈ ಉಪಕ್ರಮವು ಪ್ರಸ್ತುತ ಭವಿಷ್ಯದ ಸವಾಲುಗಳಿಗೆ ಸ್ಪಂದಿಸುವ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯನ್ನು ಸಹ ರಚಿಸಲು ಸಮುದಾಯಕ್ಕೆ ಸಹಕಾರ ನೀಡುತ್ತದೆ ಎಂದರು.

ಕಾರ್ಯಕ್ರಮ ನಿರ್ದೇಶಕರಾದ ಡಾ. ವರ್ಣ ಶ್ರೀ ರಾಮನ್ ಐ.ಎಚ್.ಸಿ.ಆರ್.ಎಫ್ ಪಾಲುದಾರಿಕೆ ಪ್ರಕಟಿಸಿ ಜಿಲ್ಲಾಡಳಿತ ಸಹಯೋಗದೊಂದಿಗೆ ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸಲು ನಾವು ತುಂಬ ಉತ್ಸುಕರಾಗಿದ್ದೇವೆ. ಮಾನವ-ಕೇಂದ್ರಿತ ವಿನ್ಯಾಸ ವಿಧಾನದ ಮೂಲಕ ನಮ್ಮ ಫೆಲೋಗಳ ಪರಿಣತಿ ಮತ್ತು ಸ್ಥಳೀಯ ಬದ್ಧತೆಯೊಂದಿಗೆ ಸೇರಿ ನಾವು ಜಿಲ್ಲೆಯ ವಿಶಿಷ್ಟ ಅಗತ್ಯಗಳಿಗೆ ಅನುಗುಣವಾಗಿ ಸಮರ್ಥನೀಯ ಮತ್ತು ಪರಿಣಾಮಕಾರಿ ಪರಿಹಾರಗಳನ್ನು ಅಭಿವೃದ್ಧಿಪಡಿಸುತ್ತೇವೆ ಎಂದರು.

ಈ ಫೆಲೋಶಿಪ್ ಕಾರ್ಯಕ್ರಮವು ಅಂತಿಮವಾಗಿ ಭಾರತದಾದ್ಯಂತ ಸಮಸ್ಯೆ-ಪರಿಹರಿಸುವ ಸಾರ್ವಜನಿಕ ಆರೋಗ್ಯ ನಾಯಕರ ಸಮೂಹವನ್ನು ರಚಿಸುವ ಗುರಿಯನ್ನು ಹೊಂದಿದೆ. ಅವರು ಸ್ಥಳೀಯ ಲಾಭೋದ್ದೇಶವಿಲ್ಲದ ಪಾಲುದಾರರಿಗೆ ಮಾರ್ಗದರ್ಶನ ನೀಡುತ್ತಾರೆ ಮತ್ತು ಸ್ಥಳೀಯ ಸರ್ಕಾರದ ಸಾರ್ವಜನಿಕ ಆರೋಗ್ಯ ವ್ಯವಸ್ಥೆಗಳನ್ನು ಸಹ ಬೆಂಬಲಿಸುತ್ತಾರೆ. ಹೊಣೆಗಾರಿಕೆ ಮತ್ತು ನಿರಂತರ ಸುಧಾರಣೆಯನ್ನು ಖಚಿತಪಡಿಸಿಕೊಳ್ಳಲು ಕಾರ್ಯಕ್ರಮವು ದೃಢವಾದ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚೌಕಟ್ಟನ್ನು ಒಳಗೊಂಡಿರುತ್ತದೆ. ಇದು ಮಧ್ಯಸ್ಥಿಕೆಗಳ ಪ್ರಭಾವವನ್ನು ಮೇಲ್ವಿಚಾರಣೆ ಮಾಡುತ್ತದೆ ಮತ್ತು ಸ್ಥಳೀಯ ಆದ್ಯತೆಗಳೊಂದಿಗೆ ಹೊಂದಾಣಿಕೆ ಮಾಡಲು ಹೊಂದಾಣಿಕೆಗಳನ್ನು ಸಕ್ರಿಯಗೊಳಿಸುತ್ತದೆ.

# ಅಕ್ರಮ ಪಡಿತರ ವಿರುದ್ಧ ವಿಶೇಷ ಕಾರ್ಯಾಚರಣೆ: ಸಚಿವ ಕೆ.ಎಚ್.ಮುನಿಯಪ್ಪ

**ಬೆಳಗಾವಿ ಸುವರ್ಣ ವಿಧಾನಸೌಧ:** ಅಕ್ರಮ ಪಡಿತರ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಸಾಬೀತಾದ ವ್ಯಕ್ತಿಗಳ ವಿರುದ್ಧ ಆರೋಪ ಸಾಬೀತಾದಲ್ಲಿ ನ್ಯಾಯಾಲಯದ ಆದೇಶದಂತೆ ಕಾನೂನು ರೀತಿ ಕ್ರಮ ವಹಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಸಚಿವರಾದ ಕೆ.ಎಚ್.ಮುನಿಯಪ್ಪ ಹೇಳಿದರು.

ಅಕ್ರಮ ಪಡಿತರ ವಿರುದ್ಧ ಸರ್ಕಾರದಿಂದ ವಿಶೇಷ ಕಾರ್ಯಾಚರಣೆ ಪ್ರಕ್ರಿಯೆಯು ಚಾಲ್ತಿಯಲ್ಲಿದೆ ಎಂದು ಇದೇ ಸಂದರ್ಭದಲ್ಲಿ ಸದನಕ್ಕೆ ಅವರು ತಿಳಿಸಿದರು.ವಿಧಾನ ಪರಿಷತನಲ್ಲಿ ಡಿಸೆಂಬರ್ 9ರಂದು ಸದಸ್ಯರಾದ ಟಿ.ಎನ್. ಜವರಾಯಿಗೌಡ, ಐವನ್ ಡಿ ಸೋಜಾ, ಸಿ.ಟಿ.ರವಿ, ಶರವಣ.ಟಿ.ಎ, ನಿರಾಣಿ ರುದ್ರಪ್ರ ಹನುಮಂತಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ರಾಜ್ಯಾದ್ಯಂತ ಜನವರಿ-2021 ರಿಂದ ಮೇ 2023ರ ಅವಧಿಯಲ್ಲಿ 3,35,463 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು, ಇವರಿಂದ ರೂ. 13,51,30,858 ಗಳ ದಂಡ ವಿಧಿಸಿ, ಅನರ್ಹರಿಗೆ ನೀಡಿದ ಸವಲತ್ತುಗಳಿಂದ ಉಂಟಾದ ನಷ್ಟವನ್ನು ಭರಿಸಲು ಸರ್ಕಾರ ಕ್ರಮವಹಿಸಿದೆ.

ಆಹಾರ ಇಲಾಖೆಯ ಉಗ್ರಾಣಗಳಿಂದ ಅಕ್ರಮವಾಗಿ ಕಾಳ ಸಂತೆಯಲ್ಲಿ ಅಕ್ಕಿ ಮಾರಾಟವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಕ್ರಮ ವಹಿಸಿದೆ. ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುವ ಪಡಿತರ ಅಕ್ರಮ ಸಾಗಣೆ ಕಂಡು ಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ, ಅಕ್ರಮ ಪಡಿತರ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು, ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನನ್ನು ವಿಲೇ ಮಾಡಿ, ವಿಲೇ ಪಡಿಸಿದ ಪಡಿತರ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಲಾಗುತ್ತಿದೆ ಎಂದರು. ರಾಜ್ಯಾದ್ಯಂತ 2024-25ನೇ ಸಾಲಿನಲ್ಲಿ 213 ಎಫ್.ಐ.ಆರ್ ದಾಖಲಿಸಿ ಒಟ್ಟು ರೂ. 2,68,07,872 ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡು, 238 ಆರೋಪಿಗಳನ್ನು ಬಂಧಿಸಲಾಗಿರುತ್ತದೆ. ಈ ಕುರಿತು ಪರಿಶೀಲಿಸಲು ಮೇಲ್ವಿಚಾರಣೆ ಮಾಡಲು ಇಲಾಖಾ ವತಿಯಿಂದ ನೋಡಲ್ ಅಧಿಕಾರಿಗಳನ್ನು ವಿಭಾಗವಾರು ನೇಮಕ ಮಾಡಲಾಗಿದೆ ಎಂದರು.

ಈ ಹಿಂದೆ ಕೆಲವು ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹರಿದ್ದ ಫಲಾನುಭವಿಗಳು ಹಾಲಿ ಬಡತನ ರೇಖೆಗಿಂತ ಮೇಲೆ ಬಂದಿದ್ದು, ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗುತ್ತಿದೆ ಎಂದರು. ಸರ್ಕಾರಿ ನೌಕರರು, ಆದಾಯ ತೆರಿಗೆ ಪಾವತಿದಾರರು, ಜಿಎಸ್ ಟಿ ಅಥವಾ ಸಿಎಸ್ ಟಿ ಪಾವತಿದಾರರ ವಿವರಗಳನ್ನು ಕುಟುಂಬ ತಂತ್ರಾಂಶದಿಂದ ಪಡೆದು ದಂಡ ವಸೂಲಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸುವ ಸರ್ವರ್ ಹಳೆಯದಾಗಿದೆ. ಈ ಕಾರಣದಿಂದಾಗಿ ಎನ್ ಐಸಿಯಿಂದ ಕೆಎಸ್ ಡಿಸಿ ಗೆ ಆಹಾರ ತಂತ್ರಾಂಶದ ಮೈಗ್ರೇಶನ್ ಕಾರ್ಯ ಅಂತಿಮ ಹಂತದಲ್ಲಿದ್ದು, ಈ ಕಾರ್ಯಪೂರ್ಣವಾದ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ ಹಾಗೂ ಪಡಿತರ ತಿದ್ದುಪಡಿ ಕಾರ್ಯ ನಿರಂತರವಾಗಿ ನಡೆಯಲಿದೆ ಎಂದು ಬಾಕಿ ಅರ್ಜಿಗಳ ಕಾಲಮಿತಿ ವಿಲೇಯ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

# ಯಕ್ಷಾಲಾಪ-ಮಿನುಗುತಾರೆ ಎರಡು ಏಕವ್ಯಕ್ತಿ ಪ್ರದರ್ಶನ

**ಮಂಡ್ಯ:** ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ದಪ್ಪ ಸ್ಮಾರಕ ಟ್ರಸ್ಟ್ ಸಾರ್ವಜನಿಕ ಗ್ರಂಥಾಲಯ ಇಲಾಖೆ ಸಹಯೋಗದಲ್ಲಿ ನಗರದ ಹಂಪಿನಗರ ಕೇಂದ್ರ ಗ್ರಂಥಾಲಯದದಲ್ಲಿ ಕಳೆದ ಇಪ್ಪತ್ತು ವರ್ಷಗಳಿಂದ ಓದಿನರಮನೆಯಲ್ಲಿ ತಿಂಗಳ ಒನಪು ಎಂಬ ವಿಶಿಷ್ಟ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದೆ. ಇದುವರೆಗೆ 194 ತಿಂಗಳುಗಳಾಗಿದ್ದು, ಈ ಬಾರಿ 11ನೇ ಡಿಸೆಂಬರ್ 2024ರಂದು ಸಂಜೆ 6.30ಕ್ಕೆ ಸರಣಿಯ 195ನೇ ಕಾರ್ಯಕ್ರಮವು ಬೆಂಗಳೂರಿನ ಹಂಪಿನಗರ ಪಶ್ಚಿಮ ವಲಯದ ನಗರ ಕೇಂದ್ರ ಗ್ರಂಥಾಲಯದ ಗ್ರಂಥಾಂಗಣದಲ್ಲಿ ನಡೆಯುವುದು. ಜಾನಪದ ವಿದ್ವಾಂಸ, ನಾಟಕಕಾರ ಡಾ, ಎಂ. ಬೈರೇಗೌಡ ಅಭಿನಯದ ವಿಶ್ವಕವಿ ಕಾಳಿದಾಸನ ಮೇಘದೂತ ಕಾವ್ಯಾಧಾರಿತ ಯಕ್ಷಾಲಾಪ ಏಕವ್ಯಕ್ತಿ ನಾಟಕವಿದೆ. ರಚನೆ ಪ್ರೊ. ನಾರಾಯಣಘಟ್ಟ, ಸಂಗೀತ ಪ್ರಸನ್ನಕುಮಾರ್, ಸಂಗೀತ ನಿರ್ವಹಣೆ ಗಜಾನನ ಟಿ. ನಾಯಕ್, ಬೆಳಕು ಮತ್ತು ಪ್ರಸಾದನ ರವಿಶಂಕರ್ ಎಸ್., ನಿರ್ದೇಶನ ಎಂ.ಸಿ. ನಾಗರಾಜ್ ಕನಕಪುರ. ಇದೇ ಸಭಾಂಗಣದಲ್ಲಿ ಬೆಂಗಳೂರಿನ ರೂಪಾಂತರ ರಂಗತಂಡದ ರಂಜಿತಾ ಸೂರ್ಯವಂಶಿ ಅಭಿನಯಿಸುವ ಕನ್ನಡದ ಜನಪ್ರಿಯ ಅಭಿನೇತ್ರಿ ಮಿನುಗುತಾರೆ ಕಲ್ಪನಾ ಜೀವನಾಧಾರಿತ ಏಕವ್ಯಕ್ತಿ ಪ್ರದರ್ಶನವಿದೆ. ರಚನೆ ಜಯಲಕ್ಷ್ಮೀ ಪಾಟೀಲ್. ನಿರ್ದೇಶನ ಕೆ.ಎಸ್.ಡಿ.ಎಲ್. ಚಂದ್ರು ನಿರ್ವಹಿಸಿದ್ದಾರೆ ಎಂದು ಕೆ.ಎಸ್.ಎಂ. ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.



# ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ ವಿಸ್ತರಣೆ

**ಬೆಂಗಳೂರು ಗ್ರಾಮಾಂತರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳಿಗೆ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ''ಶುಲ್ಕ ಮರುಪಾವತಿ'' ಕಾರ್ಯಕ್ರಮ ಹಾಗೂ ''ಪ್ರವರ್ಗ-1ರ ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ''ಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ನವೆಂಬರ್ 30 ರ ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಿಸಲು ಮನವಿ ಮಾಡಿಕೊಂಡ ಹಿನ್ನಲೆ ಡಿಸೆಂಬರ್ 20ರ ವರೆಗೆ ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕವನ್ನು ವಿಸ್ತರಿಸಲಾಗಿದ್ದು, ರಾಜ್ಯ ವಿದ್ಯಾರ್ಥಿವೇತನ ವೆಬ್ ಸೈಟ್ https://ssp.postmatric.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ: 8050770005 ಅಥವಾ ಇ-ಮೇಲ್ ವಿಳಾಸ: bcwdhelpline@gmail.com ಅನ್ನು ಸಂಪರ್ಕಿಸಬಹುದಾಗಿದೆ ಎಂದು ಗ್ರಾಮಾಂತರ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

## ಕನ್ನಡ ಸೇನೆ ವತಿಯಿಂದ ಕನ್ನಡ ರಾಜ್ಯೋತ್ಸವ | ಕನ್ನಡಮಿತ್ರ ವೆಂಕಟಪ್ಪ ಸಲಹೆ

# ಕನ್ನಡ ಭಾಷೆ ಬಳಸೋಣ, ಕನ್ನಡ ಭಾಷೆಯನ್ನು ಬೆಳೆಸೋಣ

**ಕೋಲಾರ :** ಕನ್ನಡ ಭಾಷೆ ಕೇವಲ ಒಂದು ಭಾಷೆಯಲ್ಲ ಅದು ತನ್ನದೇ ಆದ ಭವ್ಯ ಇತಿಹಾಸ ಪರಂಪರೆಯನ್ನು ಹೊಂದಿದೆ. ಕನ್ನಡಿಗರಾದ ನಾವು ಕನ್ನಡ ಭಾಷೆಯನ್ನು ಬಳಸೋಣ, ಕನ್ನಡ ಭಾಷೆಯನ್ನು ಬೆಳೆಸೋಣ, ಕನ್ನಡಿಗರಾದ ನಾವು ಪ್ರತಿ ಹೆಜ್ಜೆಯಲ್ಲೂ ಕನ್ನಡತನವನ್ನು ಬೆಳೆಸಿಕೊಳ್ಳಬೇಕು ಎಂದು ಕನ್ನಡ ಸೇನೆಯ ಜಿಲ್ಲಾಧ್ಯಕ್ಷ ಕನ್ನಡಮಿತ್ರ ವೆಂಕಟಪ್ಪ ರವರು ತಿಳಿಸಿದರು.

ಕನ್ನಡ ಸೇನೆ ವತಿಯಿಂದ ನರಸಾಪುರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ 69ನೇ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನರಸಾಪುರ ಹಾಗೂ ವೇಮಗಲ್ ಕೈಗಾರಿಕಾ ಪ್ರದೇಶವಾಗಿದ್ದು ಇಲ್ಲಿ ಪರಭಾಷಿಕರೇ ಹೆಚ್ಚಾಗಿದ್ದಾರೆ ಇಂತಹ ಜನರ ನಡುವೆ ನಾವು ನಮ್ಮ ಕನ್ನಡ ಭಾಷೆಯನ್ನು ಉಳಿಸಿ ಬೆಳೆಸುವ ಕೆಲಸ ಮಾಡಬೇಕಿದೆ. ಇಲ್ಲವಾದರೆ ಮುಂದೊಂದು ದಿನ ಕೆಜಿಎಫ್ ಗೆ ಆದ ಗತಿ ಬರುತ್ತದೆ. ಆ ರೀತಿ ಇಲ್ಲಿ ಆಗುವುದು ಬೇಡ, ನಾವು ಕನ್ನಡಿಗರು ಎಚ್ಚೆತ್ತುಕೊಳ್ಳದಿದ್ದರೆ ಪರಭಾಷಿಕರ ದಬ್ಬಾಳಿಕೆ ಹೆಚ್ಚಾಗುವುದು ಕಂಡು ಬರುತ್ತಿದೆ ಆದ್ದರಿಂದ ಕನ್ನಡಿಗರಾದ ನಾವು ಎಚ್ಚೆತ್ತುಕೊಳ್ಳಬೇಕು. ಈ ಭಾಗದಲ್ಲಿ ಕನ್ನಡ ಸೇನೆಯ ತಾಲ್ಲೂಕು ಅಧ್ಯಕ್ಷರಾದ ಶ್ರೀಯುತ ಎನ್ .ಸಿ. ಶಿವಚಂದ್ರಯ್ಯ ಹಾಗೂ ತಂಡದವರು ಅದ್ಭುತವಾಗಿ ಕನ್ನಡದ ಸೇವೆ ಮಾಡುತ್ತಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಕೋಲಾರ ಜಿಲ್ಲಾಧ್ಯಕ್ಷ ಕನ್ನಡಮಿತ್ರ ವೆಂಕಟಪ್ಪ ಮತ್ತು ಡಾಕ್ಟರ್ ಪರಿಣಿಕ ಸ್ವಾಮಿ ರವರು ಧ್ವಜಾರೋಹಣ ಕಾರ್ಯಕ್ರಮವನ್ನು ನೆರವೇರಿಸಿ ಕನ್ನಡತಾಯಿ ಭುವನೇಶ್ವರಿಗೆ ಪೂಜೆಯನ್ನು ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಕನ್ನಡತಾಯಿ ಭುವನೇಶ್ವರಿ, ಬಾಬಾ ಸಾಹೇಬ್ ಅಂಬೇಡ್ಕರ್ ಸ್ತಬ್ಧ ಚಿತ್ರಗಳಿದ್ದ ಕನ್ನಡದ ರಥಗಳಿಗೆ



ಮತ್ತು ಮೆರವಣಿಗೆಗೆ ಚಾಲನೆ ನೀಡಿದರು. ನರಸಾಪುರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ಸಾಗಿತು ತಮಟೆವಾದನ, ಗಾರಡಿಗೊಂಬೆ, ಹುಲಿವೇಷ, ಕೀಲುಕುದುರೆ, ಕರಡಿ ಕುಣಿತ ಮುಂತಾದವು ನೋಡುಗರ ಕಣ್ಮನ ಸೆಳೆಯಿತು.

ನಮ್ಮ ಪ್ರಾಣ ಇರುವ ತನಕ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನಡೆಸಿಕೊಂಡು ಬರುತ್ತೇವೆ ಎಂದು ಕನ್ನಡ ಸೇನೆ ತಾಲ್ಲೂಕು ಅಧ್ಯಕ್ಷ ಎನ್.ಸಿ.ಶಿವಚಂದ್ರಯ್ಯ ರವರು ತಿಳಿಸಿದರು.

ಕರ್ನಾಟಕಕ್ಕೆ ಆಗಮಿಸುವ ಅನ್ಯಭಾಷಿಗರಿಗೆ ಕನ್ನಡವನ್ನು ಕಲಿಸಿ, ನಾವು ಹೆಚ್ಚು ಬಳಕೆ ಮಾಡುವ ಮೂಲಕ ಕನ್ನಡ ಭಾಷೆಯ ಶ್ರೀಮಂತಿಕೆಯನ್ನು ಎತ್ತಿಹಿಡಿಯಬೇಕು. ನಾವು ಕೇವಲ ನವೆಂಬರ್ ಕನ್ನಡಿಗರಾಗದೇ, 'ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಮಾತನಾಡುತ್ತೇನೆ, ಬರೆಯುತ್ತೇನೆ ಎಂದರು. ಅಷ್ಟೇ ಅಲ್ಲದೆ ನಮ್ಮ ಈ ಕನ್ನಡದ ಸೇವೆಗೆ ಪೊಲೀಸ್ ಇಲಾಖೆಯವರು ಒಳ್ಳೆಯ ಸಹಕಾರ ನೀಡಿದ್ದಾರೆ. ಅಷ್ಟೇ ಅಲ್ಲದೆ ಭಾನುವಾರ ರಾತ್ರಿ ರಸಮಂಜರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಷ್ಟೇ ಅಲ್ಲದೆ ಸಿ.ಎಸ್.ವೆಂಕಟೇಶ್ ರವರು ನಿರ್ಮಿಸುತ್ತಿರುವ ಬಡವರ ಮಕ್ಕಳ ಬೆಳಿಬೇಕು ಕಣ್ರಯ್ಯ ಸಿನಿಮಾದ ಹಾಡು ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಕನ್ನಡ ಸೇನೆ ನರಸಾಪುರ ಹೋಬಳಿ ಘಟಕದ ಕಾರ್ಯದರ್ಶಿ ಚಳ್ಳಿ ನಾಗರಾಜ್ ರವರು ಮಾತನಾಡಿ ನಮ್ಮ ಕನ್ನಡ ಸೇನೆಯ ರಾಜ್ಯಾಧ್ಯಕ್ಷರಾದ ಕೆ.ಆರ್.ಕುಮಾರ್ ರವರ ನೇತೃತ್ವದಲ್ಲಿ ನಮ್ಮ ಕನ್ನಡ ಸೇನೆ ಅನೇಕ ಜನಮೆಚ್ಚಿದ ಕೆಲಸವನ್ನು ಮಾಡುತ್ತಿದೆ. ಅವರ ಹಾದಿಯಲ್ಲಿಯೇ ನರಸಾಪುರದಲ್ಲಿ ಸತತವಾಗಿ 20ನೇ ವರ್ಷದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಿಕೊಂಡು ಬರ್ತಾ ಇದ್ದೇವೆ. ಅದೇರೀತಿ ಮುಂದಿನ ದಿನಗಳಲ್ಲಿ ಇನ್ನೂ ಅದ್ದೂರಿಯಾಗಿ ಕನ್ನಡ ಪರ ಕೆಲಸಗಳನ್ನು ಮಾಡುತ್ತೇವೆ. ಹೆಚ್ಚು ಪರಭಾಷಿಕರಿರುವ ನಮ್ಮ ನರಸಾಪುರ ಹೋಬಳಿಯಲ್ಲಿ ಎಲ್ಲರೂ ಒಟ್ಟಾಗಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಹೆಮ್ಮೆಯಿಂದ ಆಚರಿಸುತ್ತಿದ್ದೇವೆ ಎಂದರು.

ರಾಜ್ಯೋತ್ಸವದ ಅಂಗವಾಗಿ ನೆರೆದಿದ್ದ ಸಾರ್ವಜನಿಕರಿಗೆ ಆರ್ ವಿ ಸೂಪರ್ ಮಾರ್ಕೆಟ್ ಮಾಲೀಕರಾದ ವಿಜಯಕುಮಾರ್ ಮತ್ತು ಖಾಜಿಕಲ್ಲಹಳ್ಳಿ ವೆಂಕಟೇಶ್ ರವರು ಊಟದ ವ್ಯವಸ್ಥೆ ಮಾಡಿದ್ದರು. ಕನ್ನಡಸೇನೆ ವತಿಯಿಂದ ನರಸಾಪುರ ಠಾಣೆಯ ಎ ಎಸ್ ಐ ನರೇಂದ್ರ, ಮಲ್ಲೇಶ್ ಮತ್ತು ಇತರೆ ಗಣ್ಯರಿಗೆ ಸನ್ಮಾನ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಕನ್ನಡ ಸೇನೆಯ ಜಿಲ್ಲಾ ಅಧ್ಯಕ್ಷ ಕನ್ನಡ ಮಿತ್ರ ವೆಂಕಟಪ್ಪ, ಕೋಲಾರ ತಾಲ್ಲೂಕು ಅಧ್ಯಕ್ಷ ಎನ್.ಸಿ.ಶಿವಚಂದ್ರಯ್ಯ, ನರಸಾಪುರ ಹೋಬಳಿ ಘಟಕದ ಅಧ್ಯಕ್ಷ ಚಳ್ಳಿ ನಾಗರಾಜ್, ನಾಗೇಶ್.ಎನ್.ಎಂ, ತಾಲ್ಲೂಕು ಸಂಚಾಲಕರು, ಎ.ನಾರಾಯಣ ಸ್ವಾಮಿ ಗ್ರಾ.ಪಂ.ಮಾಜಿ ಅಧ್ಯಕ್ಷರು, ಸಿಎಂಆರ್ ರವೀಂದ್ರ ಶಿಕ್ಷಕರು, ಡಾಕ್ಟರ್ ಪರಿಣಿಕ ಸ್ವಾಮಿ, ತಿಮ್ಮರಾಯಪ್ಪ ನರಸಾಪುರ ಹೋಬಳಿ ಉಪಾಧ್ಯಕ್ಷರು, ಕನ್ನಡ ಸೇನೆ ತಾಲ್ಲೂಕು ಸಂಘಟನಾ ಕಾರ್ಯದರ್ಶಿ ಜಾಲಿ ಶ್ರೀನಿವಾಸ್, ಎಂ. ಲಕ್ಷ್ಮಣ್ ಪದಾಧಿಕಾರಿಗಳು, ವಿಜಯೇಂದ್ರ ಸಂಘಟನಾ ಕಾರ್ಯದರ್ಶಿ, ಮುನಿಯಪ್ಪ, ಆರ್ ವಿ ಸೂಪರ್ ಮಾರ್ಕೆಟ್ ಮಾಲೀಕರಾದ ವಿಜಯ್ ಕುಮಾರ್, ಹೋಮ್ ಲೋನ್ ಮ್ಯಾನೇಜರ್ ವೆಂಕಟೇಶ್ ಖಾಜಿಕಲ್ಲಹಳ್ಳಿ, ಗಂಗಾಧರ್, ಅನೀಲ್, ಸುನೀಲ್, ತಿರುಮಲೇಶ್, ಪೊಲೀಸ್ ಎ ಎಸ್ ಐ ನಾಗೇಂದ್ರ, ಮಲ್ಲೇಶ್ ಸೇರಿದಂತೆ ಇತರರು ಇದ್ದರು.

# ಗ್ರಾಪಂ ಮಟ್ಟದಲ್ಲಿ ಪರಿಪಕ್ವವಾದ ದತ್ತಾಂಶಗಳ ಸಂಗ್ರಹಿಸಿ ಅರ್ಹರಿಗೆ ಬಿಪಿಎಲ್ ಪಡಿತರ ಕಾರ್ಡ್

**ಬೆಳಗಾವಿ ಸುವರ್ಣ ವಿಧಾನ ಸೌಧ:** ವಿಧಾನ ಪರಿಷತ್ ನಲ್ಲಿ ವಿರೋದ ಪಕ್ಷದ ಸದಸ್ಯರು ರಾಜ್ಯದಲ್ಲಿನ ಬಿಪಿಎಲ್ ಪಡಿತರ ಕಾರ್ಡ್ ರದ್ದು ಕುರಿತು ಕೇಳಿದ ಪ್ರಶ್ನೆಗೆ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್ ಮುನಿಯಪ್ಪ ನವರು ಉತ್ತರಿಸಿದರು.

ಪಡಿತರ ಕಾರ್ಡ್ ಗಳನ್ನು ಪರಿಷ್ಕರಣೆ ಮಾಡಲು ನಾವು ಮುಂದಾದಾಗ ಕೇಂದ್ರ ಸರ್ಕಾರದ ಮಾನದಂಡಗಳ ಅಡಿಯಲ್ಲಿಯೇ ನಾವು ಪರಿಷ್ಕರಣೆ ಮಾಡಲು ಹೋಗಿದ್ದು ಕೆಲವು ಗೊಂದಲಗಳಿಂದ ನಾವು ಅದನ್ನು ತಡೆಹಿಡಿದಿದ್ದೀವಿ.

ಅರ್ಹರ ಬಿಪಿಎಲ್ ಪಡಿತರ ಕಾರ್ಡ್ ದಾರರ ಯಾವುದೇ ಕಾರ್ಡ್ ಗಳು ರದ್ದಾಗದಂತೆ ಅಧಿಕಾರಿಗಳಿಗೆ ಸೂಚಿಸಿ ರದ್ದಾದ ಬಿಪಿಎಲ್ ಕಾರ್ಡ್ ಗಳನ್ನು ಪುನರ್ ಸ್ಥಾಪಿಸಲಾಯಿತು.

ಆದರೂ ಪ್ರಸ್ತುತ ಬಿಪಿಎಲ್ ಪಡಿತರ ಕಾರ್ಡ್ ಗಳಲ್ಲಿ ಅನರ್ಹ ಫಲಾನುಭವಿಗಳ ಪತ್ತೆಹಚ್ಚಲು ಗ್ರಾಮ ಪಂಚಾಯತಿ ಮಟ್ಟದಲ್ಲಿ ನಮ್ಮ ಅಧಿಕಾರಿಗಳು ಪರಿಪಕ್ವವಾದ ಅಂಕಿ ಅಂಶಗಳನ್ನು ಗುರುತಿಸಿ ನಂತರ ಅರ್ಹರಿಗೆ ಬಿಪಿಎಲ್ ಪಡಿತರ ಕಾರ್ಡ್ ವಿತರಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದರು.

ಪ್ರಸ್ತುತ ಈಗಿರುವ ಬಿಪಿಎಲ್ ಕಾರ್ಡ್ ಗಳಲ್ಲಿ ಶೇಕಡಾ 20 ರಷ್ಟು ಕಾರ್ಡ್ ಗಳು ಎಪಿಎಲ್ ನವರು ಸೇರಿದ್ದಾರೆ ಎಂದು ಅಂದಾಜಿಸಲಾಗಿದ್ದು ಇದನ್ನು ಅತಿ ಶೀಘ್ರದಲ್ಲಿ ಪರಿಷ್ಕರಿಸಿ ನಿಯಮಾನುಸಾರ ಕ್ರಮ ಕೈಗೊಳ್ಳುತ್ತೇವೆ ಎಂದರು.

ರಾಜ್ಯದಲ್ಲಿ ಸುಮಾರು ಶೇಕಡ 65%. ರಿಂದ 75% ರಷ್ಟು ಜನಸಂಖ್ಯೆಗೆ ಬಡತನ ರೇಖೆಗಿಂತ ಕೆಳಗಿರುವಂತೆ ಕಾರ್ಡ್ ಗಳನ್ನು ನೀಡಲಾಗಿದ್ದು ಅದನ್ನು ಪರಿಷ್ಕರಿಸಿಲಾಗುತ್ತಿದ್ದು ಈ ಪ್ರಕ್ರಿಯೆ ಪೂರ್ಣ ಗೊಂಡ ನಂತರ ನಿಜವಾದ ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬಕ್ಕೆ ತೊಂದರೆಯಾಗದಂತೆ ಜಾಗ್ರತೆ ವಹಿಸಿ ನೀಡಲಾಗುವುದು ಎಂದು ಸದನದಲ್ಲಿ ಉತ್ತರಿಸಿದರು.

### ಕಲ್ಯಾಣ ಬಸವೇಶ್ವರ ಮಠದ ಪೀಠಾಧ್ಯಕ್ಷ ಓಂಕಾರ ಸ್ವಾಮೀಜಿ ಆಕ್ರೋಶ

# ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಬಸವಣ್ಣನವರ ಕಡೆಗಣನೆ

**ಮಂಡ್ಯ :** ಹನ್ನೆರಡನೆಯ ಶತಮಾನದಲ್ಲಿ ವಚನಸಾಹಿತ್ಯ ರಚನೆಯ ಮೂಲಕ ಕನ್ನಡಭಾಷೆಯನ್ನು ದೈವೀಕರಿಸಿ ದೇಶ ವಿದೇಶಗಳಲ್ಲಿ ಕನ್ನಡದ ಕಂಪು ಬೀರಿದ ವಿಶ್ವಗುರು ಸಾಂಸ್ಕೃತಿಕ ನಾಯಕ ಬಸವಣ್ಣನವರ ಭಾವಚಿತ್ರವನ್ನು ಕನ್ನಡ ಸಾಹಿತ್ಯ ಸಮ್ಮೇಳನದ ಪೋಸ್ಟರ್ ಹಾಗೂ ಆಹ್ವಾನಪತ್ರಿಕೆಯಲ್ಲಿ ಮುದ್ರಿಸದೆ ಅಗೌರವ ತೋರಿಸಲಾಗಿದೆ ಎಂದು ಕಲ್ಯಾಣ ಬಸವೇಶ್ವರ ಮಠದ ಪೀಠಾಧ್ಯಕ್ಷರಾದ ಓಂಕಾರ ಸ್ವಾಮೀಜಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಜಿಲ್ಲಾಡಳಿತ ನಡೆಸಿದ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಕನ್ನಡಭಾಷೆಗೆ ಮೆರಗು ತಂದುಕೊಟ್ಟ ಸಾಂಸ್ಕೃತಿಕ ನಾಯಕ ಅಣ್ಣಬಸವಣ್ಣ, ಜ್ಞಾನಪೀಠಪ್ರಶಸ್ತಿ ಪುರಸ್ಕೃತರು ಹಾಗೂ ಶರಣರ ಭಾವಚಿತ್ರಗಳನ್ನು ಮುದ್ರಿಸಬೇಕು ಹಾಗೂ ಶರಣರ ಹೆಸರಿನಲ್ಲಿ ಮಹಾದ್ವಾರಗಳನ್ನು ನಿರ್ಮಾಣಮಾಡಿ ಗೌರವಿಸಬೇಕೆಂದು ಮನವಿ ನೀಡಿದ್ದರೂ ಸಹ ಕಸಾಪ ರಾಜ್ಯಾಧ್ಯಕ್ಷರು ಉದ್ದೇಶಪೂರ್ವಕವಾಗಿ ಕಡೆಗಣಿಸಿರುವುದು ಅವರ ವೈದಿಕಶಾಹಿ ಮನೋಭಾವವನ್ನು ತೋರುತ್ತಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

12ನೇ ಶತಮಾನಕ್ಕಿಂತ ಮೊದಲು ಪಂಡಿತರು ರಚಿಸುತ್ತಿದ್ದ ಸಾಹಿತ್ಯ ಪಂಡಿತರಿಗೆ ಮಾತ್ರ ಅರ್ಥವಾಗುತ್ತಿತ್ತು. ಜನಸಾಮಾನ್ಯರು ಬಳಸುತ್ತಿದ್ದ ಭಾಷೆಯನ್ನೇ ವಚನ ಸಾಹಿತ್ಯದ ಮಾಧ್ಯಮವನ್ನಾಗಿ ಮಾಡಿಕೊಂಡು ಹಿಂದುಳಿದವರು, ದೀನ ದಲಿತರು, ಮಹಿಳೆಯರು, ವಿದೇಶದಿಂದ ಬಂದು ಕನ್ನಡಕಲಿತವರಿಂದ ವಚನಸಾಹಿತ್ಯ ರಚಿಸಿದ ಶರಣರ ಕೊಡುಗೆ ಕನ್ನಡ ನಾಡಿನಲ್ಲಿ ಸುವರ್ಣಾಕ್ಷರಗಳಿಂದ ಬರೆಸುವಂತಹದ್ದಾಗಿದೆ.

12ನೇ ಶತಮಾನದಲ್ಲಿ ನಿಜವಾದ ಸಾಹಿತ್ಯ ಪರ್ವ ಪ್ರಾರಂಭವಾಯಿತು. ತುಳಿತಕ್ಕೊಳಗಾಗಿದ್ದ ಜನರು ಕೂಡ ಮುಖ್ಯವಾಹಿನಿಗೆ ಬಂದರು. ಬಸವಕಲ್ಯಾಣದಲ್ಲಿ ಬಸವಣ್ಣನವರು ಅನುಭವ ಮಂಟಪ ಸ್ಥಾಪಿಸಿದುದರ ಫಲವಾಗಿ ವಿವಿಧ ದೇಶ ಮತ್ತು ನಾಡಿನಿಂದ 770 ಅಮರ ಗಣಂಗಳು ಮತ್ತು ಒಂದು ಲಕ್ಷದ 96 ಸಾವಿರ ಶರಣರು ಸೇರಲು ಕಾರಣೀಭೂತರಾಗಿ ಕರ್ನಾಟಕದ ಕೀರ್ತಿ ವಿದೇಶದಲ್ಲೆಲ್ಲಾ ಹರಡಲು ಕಾರಣರಾದರು.

ಬಸವಣ್ಣನವರು ಕಾಯಕ ಮತ್ತು ದಾಸೋಹ ತತ್ವವನ್ನು ಜಾರಿಗೆ ತಂದದರ ಫಲವಾಗಿ ಕಲ್ಯಾಣದಲ್ಲಿ ಕೊಡುವವರುಂಟು ಬೇಡುವವರಿಲ್ಲ ಎಂಬಂತೆ ಅಲ್ಲಿನ ಪ್ರಜೆಗಳು ಆರ್ಥಿಕವಾಗಿ ಸದೃಢರಾದರು. ದೇಹವೇ ದೇವಾಲಯ ಎಂಬ ತತ್ವದ ಮೂಲಕ ಮಾನವನು ಕೂಡ ಮಹಾದೇವನಾಗಬಹುದು ಎಂಬುದನ್ನು ಸ್ವತಃ ಆಚರಿಸಿ ಇತರರಿಗೆ ಬೋಧಿಸಿದರು. ಬಸವಣ್ಣನವರ ತತ್ವಗಳಿಂದ ಆಕರ್ಷಿತನರಾಗಿ ಅಫ್ಘಾನಿಸ್ತಾನದಿಂದ ಮರುಳ ಶಂಕರ ದೇವ, ಕಾಶ್ಮೀರದಿಂದ ಮೋಳಿಗೆ ಮಾರಯ್ಯ, ಮೋಳಿಗೆ ಮಹಾದೇವಿ, ತಮಿಳುನಾಡಿನಿಂದ ಮಾದಾರ ಚೆನ್ನಯ್ಯ, ಉತ್ತರ ಪ್ರದೇಶದಿಂದ ತೆಲುಗೇಶ ಮಂಕಣ್ಣ, ಮಹಾರಾಷ್ಟ್ರದಿಂದ ಸಿದ್ದರಾಮೇಶ್ವರ, ಆಂಧ್ರಪ್ರದೇಶದಿಂದ ಉರಿಲಿಂಗ ದೇವ, ಗುಜರಾತ್ ನಿಂದ ಆದಯ್ಯ ಹೀಗೆ ವಿವಿಧ ಭಾಷೆಗಳ ಜನರು ಕರ್ನಾಟಕಕ್ಕೆ ಬಂದರು. ಅವರಿಗೆ ಕನ್ನಡವನ್ನು ಕಲಿಸಿ ಕನ್ನಡದ ಪ್ರಥಮ ಅಭಿಮಾನಿಯಾದವರು ವಿಶ್ವಗುರು ಬಸವಣ್ಣನವರು.

ವಿಧಾನಸೌಧದಲ್ಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರವನ್ನು ಅನಾವರಣ ಮಾಡುವುದರ ಮೂಲಕ ಕರ್ನಾಟಕದ ಸಂಸ್ಕೃತಿಕ ನಾಯಕ ಎಂದು ಘೋಷಿಸಿದ್ದರೂ ಸಾಹಿತ್ಯ ಸಮ್ಮೇಳನದಲ್ಲಿ ಕಡೆಗಣಿಸುತ್ತಿರುವುದು ಖಂಡನೀಯ ಎಂದು ಸ್ವಾಮೀಜಿ ತಿಳಿಸಿದ್ದಾರೆ.

ಸಾಹಿತ್ಯ ಸಮ್ಮೇಳನದಲ್ಲಿ ವಿಶ್ವಗುರು ಬಸವಣ್ಣನವರನ್ನು ಕುರಿತು ಹಾಗೂ ಬಸವಾದಿ ಶರಣರನ್ನು ಕುರಿತು ವಿಚಾರಗೋಷ್ಠಿ ಉಪನ್ಯಾಸ ವಚನ ನೃತ್ಯ ಮುಂತಾದ ಕಾರ್ಯಕ್ರಮಗಳನ್ನು ಏರ್ಪಡಿಸುವುದರ ಮೂಲಕ ಬಸವಣ್ಣನವರು ಪ್ರತಿಪಾದಿಸಿರುವ ಸಮಾನತೆಯ ತತ್ವವನ್ನು ಸಾಹಿತ್ಯ ಸಮ್ಮೇಳನದಲ್ಲಿ ಪ್ರಚುರಪಡಿಸಿ ಆ ತತ್ವಗಳನ್ನು ಕನ್ನಡ ನಾಡಿನ ಪ್ರತಿಯೊಬ್ಬರೂ ಕೂಡ ಅಳವಡಿಸಿಕೊಂಡು ಮೌಲ್ಯಯುತ ಸಮಾಜವನ್ನು ನಿರ್ಮಾಣ ಮಾಡುವಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಮುಂದಾಗಬೇಕೆಂದು ಸ್ವಾಮೀಜಿ ಆಗ್ರಹಿಸಿದ್ದಾರೆ.

ಸಾಹಿತ್ಯ ಸಮ್ಮೇಳನದಲ್ಲಿ ವಿಶ್ವಗುರು ಬಸವಣ್ಣನವರ ಹೆಸರಿನಲ್ಲಿ ದ್ವಾರ ಹಾಗೂ ಸಭಾ ಮಂಟಪ, ವಿಚಾರಗೋಷ್ಠಿಗಳನ್ನು ಏರ್ಪಡಿಸಿ ಸಾಂಸ್ಕೃತಿಕ ನಾಯಕನಿಗೆ ಗೌರವ ಹೆಚ್ಚಿಸುವ ಕೆಲಸವನ್ನು ಜಿಲ್ಲಾಡಳಿತ ಹಾಗೂ ಸರ್ಕಾರ ಮಾಡಬೇಕೆಂದು ಒತ್ತಾಯಿಸಿದ್ದಾರೆ.

### ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಹೇಳಿಕೆ | ಸಾಗುವಳಿ ಚೀಟಿ, ಪಹಣಿ, ಪೋಡಿ ದಾಖಲೆ ಡಿಜಿಟಲೀಕರಣ ಪ್ರಕ್ರಿಯೆ

# ಚಾಮರಾಜನಗರ ಜಿಲ್ಲೆ ಉತ್ತಮ ಹೆಜ್ಜೆ

**ಚಾಮರಾಜನಗರ:** ನೂತನ ತಂತ್ರಜ್ಞಾನದಡಿ ಸಾಗುವಳಿ ಚೀಟಿ, ಪಹಣಿ ಪತ್ರ, ಪೋಡಿ ದಾಖಲೆ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸುವ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ ಅನುಷ್ಠಾನದಲ್ಲಿ ಚಾಮರಾಜನಗರ ಜಿಲ್ಲೆ ಉತ್ತಮ ಹೆಜ್ಜೆ ಇಟ್ಟಿದೆ ಎಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದರು.



ಗುಂಡ್ಲುಪೇಟೆಯ ಶಿಕ್ಷಕರ ಭವನದಲ್ಲಿಂದು ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬಗರ್ ಹುಕುಂ ಸಾಗುವಳಿ ಚೀಟಿ, ಪಹಣಿ ಪತ್ರಿಕೆ, ಪೋಡಿ ದಾಖಲೆ ಹಾಗೂ ಕಂದಾಯ ಗ್ರಾಮಗಳ ಹಕ್ಕುಪತ್ರ ವಿತರಣಾ ಕಾರ್ಯಕ್ರಮದಲ್ಲಿ ಈಗಾಗಲೇ ಡಿಜಿಟಲೀಕರಣಗೊಳಿಸಿರುವ ಸಾಗುವಳಿ ಚೀಟಿ, ಹಾಗೂ ಇತರೆ ದಾಖಲೆಗಳನ್ನು ರೈತರಿಗೆ ವಿತರಿಸಿ ಅವರು ಮಾತನಾಡಿದರು.

ಉಳುವವನೇ ಭೂಮಿ ಒಡೆಯ, ಭೂ ಸುಧಾರಣೆ ಯೋಜನೆ ಸೇರಿದಂತೆ ಹಲವು ವಿಷಯಗಳಡಿ 30-40 ವರ್ಷಗಳ ಹಿಂದೆ ಹಲವರಿಗೆ ಭೂಮಿ ಮಂಜೂರಾಗಿದೆ. ಇಂತಹ ಜಮೀನುಗಳು ಇದುವರೆಗೂ ದುರಸ್ತಿಯಾಗಿಲ್ಲ. ರೈತರು ಸಾಗುವಳಿ ಮಾಡುತ್ತಿದ್ದರೂ ಜಮೀನು ಸರ್ಕಾರಿ ಹೆಸರಿನಲ್ಲಿರುತ್ತದೆ. ಜಮೀನಿನ ಮೇಲೆ ಸಂಪೂರ್ಣ ಹಕ್ಕು, ಮಾಲೀಕತ್ವ ರೈತರಿಗೆ ಇಲ್ಲವಾಗಿದೆ. ಜಮೀನು ದುರಸ್ತಿಯಾಗದಿದ್ದರೆ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಕಾನೂನುಬದ್ಧವಾಗಿ ದಾಖಲೆಗಳ ಡಿಜಿಟಲೀಕರಣ ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ದುರಸ್ತಿ ಸಂಬಂಧ ರೈತರು ಅವಶ್ಯ ದಾಖಲೆಗಳನ್ನು ಒದಗಿಸುವುದು ಸಾಧ್ಯವಾಗದಿರಬಹುದು. ಇದನ್ನು ಮನಗಂಡಿರುವ ಸಿದ್ದರಾಮಯ್ಯ ನೇತೃತ್ವದ ರಾಜ್ಯಸರ್ಕಾರ ಸಾಗುವಳಿ ಚೀಟಿ, ಪಹಣಿ ಪತ್ರಿಕೆ, ಪೋಡಿ ದಾಖಲೆ ಹಾಗೂ ಕಂದಾಯ ಗ್ರಾಮಗಳ ಹಕ್ಕುಪತ್ರಗಳನ್ನು ನೂತನ ತಂತ್ರಜ್ಞಾನದಡಿ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸುವ ಮಹತ್ತರ ಕಾರ್ಯವನ್ನು ರಾಜ್ಯಾದ್ಯಂತ ಆರಂಭಿಸಿದೆ. ಎಲ್ಲಾ ಕಾನೂನುಗಳನ್ನು ಸುಲಭೀಕರಣಗೊಳಿಸಿ ಒಂದೇ ಸುತ್ತೋಲೆಯಲ್ಲಿ ಅಳವಡಿಸಲಾಗಿದೆ. ಇಂತಹ ಜನಪರ ಕೆಲಸಗಳಿಂದ ಜನರಿಗೆ ಸರ್ಕಾರದ ಬಗ್ಗೆ ಉತ್ತಮ ಅಭಿಪ್ರಾಯ ಮೂಡಲಿದೆ ಎಂದರು.

ಹಿಂದೆ ಸಾಗುವಳಿ ಮಾಡದಿರುವವರು, ಇತರರು ಬಗರ್‌ಹುಕುಂ ಅಡಿಯಲ್ಲಿ ಜಮೀನು ಸಕ್ರಮಗೊಳಿಸಲು ಅರ್ಜಿ ಸಲ್ಲಿಸಿರುವುದು ಕಂಡುಬಂದಿದೆ. ಇದಕ್ಕಾಗಿ ಸರ್ಕಾರ ನೂತನ ತಂತ್ರಜ್ಞಾನವನ್ನು ಸಿದ್ದಪಡಿಸಿದ್ದು, ಈಗ ಇದಕ್ಕೆಲ್ಲಾ ಅವಕಾಶವಿಲ್ಲದಂತಾಗಿದೆ. ಎಲ್ಲವೂ ಆನ್‌ಲೈನ್‌ನಲ್ಲಿ ನಮೂದಾಗುವುದರಿಂದ ದಾಖಲೆಗಳು ಕಳೆದುಹೋಗುವ ಸಂಭವವಿರದೇ ಶಾಶ್ವತವಾಗಿ ಸಾಕಷ್ಟು ವರ್ಷಗಳವರೆಗೆ ಇರಲಿದೆ. ಅಲ್ಲದೆ ಯಾವುದೇ ನಕಲಿ ದಾಖಲೆಗೆ, ಫೋರ್ಜರಿಗೆ, ತಿದ್ದುಪಡಿಗೆ ಅವಕಾಶವಿಲ್ಲದಂತಾಗಿದೆ. ಇದರಿಂದ ರೈತರು ನೆಮ್ಮದಿ ಜೀವನ ನಡೆಸುವಂತಾಗಲಿದೆ ಎಂದು ಸಚಿವರು ಹೇಳಿದರು.

ಪ್ರಸ್ತುತ ಬಗರ್‌ಹುಕುಂ ಅಡಿ ಜಮೀನು ಸಕ್ರಮಗೊಳಿಸಲು ರಾಜ್ಯಾದ್ಯಂತ 1 ಲಕ್ಷದ 58 ಸಾವಿರ ಅರ್ಜಿಗಳು ಬಂದಿವೆ. ಸಕ್ರಮಿಕರಣಗೊಳಿಸಲು ಯಾರು ಅರ್ಜಿ ಹಾಕಿದ್ದಾರೋ ಅವರಿಗೆ ಅವಶ್ಯ ದಾಖಲೆಗಳನ್ನು ಪಡೆದು ಪರಿಶೀಲಿಸಿ ಅರ್ಹರಿಗೆ ನಿಯಮಾನುಸಾರ ಮಂಜೂರು ಮಾಡಲಾಗುತ್ತದೆ. ಕೆಲವೆಡೆ ಗ್ರಾಮ, ತಾಂಡಾ, ಕ್ಯಾಂಪ್‌ಗಳಿದ್ದು, 50-100 ವರ್ಷಗಳಿಂದ ಕಂದಾಯ ಗ್ರಾಮಗಳಾಗಿ ಘೋಷಣೆಯಾಗಿರುವುದಿಲ್ಲ. ಇದರಿಂದ ಜನವಸತಿ ಸೌಲಭ್ಯಗಳನ್ನು ಒದಗಿಸಲು ತೊಂದರೆಯಾಗುತ್ತಿದೆ. ಇದನ್ನು ಪರಿಹರಿಸಲು ಸರ್ಕಾರ ಮುಂದಾಗಿದ್ದು, ಜಮೀನಿನ ನಕ್ಷೆ, ಆಕಾರ್ ಬಂದ್, ಹೊಸ ಸರ್ವೇ ನಂಬರ್ ಹಾಗೂ ಪ್ರತ್ಯೇಕ ಆರ್.ಟಿ.ಸಿ ಯೊಂದಿಗೆ ಸಾಗುವಳಿ ಚೀಟಿಯನ್ನು ಸರ್ಕಾರದ ವತಿಯಿಂದಲೇ ನೊಂದಣಿ ಮಾಡಿಸಿ ಡಿಜಿಟಲೀಕರಣಗೊಳಿಸಿ ರೈತರಿಗೆ ವಿತರಿಸಲಾಗುತ್ತಿದೆ ಎಂದರು.

ಚಾಮರಾಜನಗರ ಜಿಲ್ಲೆಯಲ್ಲಿ 68 ವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಗುರುತಿಸಲಾಗಿದ್ದು, ಡಿಜಿಟಲೀಕರಣಗೊಂಡಿರುವ ಕಂದಾಯ ಗ್ರಾಮಗಳ 10 ಹಕ್ಕುಪತ್ರಗಳನ್ನು ಸಾಂಕೇತಿಕವಾಗಿ ಇಂದು ವಿತರಿಸಲಾಗುತ್ತಿದೆ. ಮುಂದಿನ 4 ತಿಂಗಳೊಳಗೆ ಎಲ್ಲಾ ಅರ್ಜಿಗಳನ್ನು ವಿಲೇವಾರಿ ಮಾಡಿ ಅರ್ಹ ರೈತರೆಲ್ಲರಿಗೂ ಸಾಗುವಳಿ ಚೀಟಿ ವಿತರಿಸುವ ಕಾರ್ಯ ಪೂರ್ಣಗೊಳಿಸುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ. ಡಿಜಿಟಲೀಕರಣ ಪ್ರಕ್ರಿಯೆಯ ಯಶಸ್ವಿಗೆ ಗುಂಡ್ಲುಪೇಟೆ ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ತಹಶೀಲ್ದಾರ್ ರಮೇಶ್ ಬಾಬು ಅವರ ಸತತ ಪರಿಶ್ರಮದಿಂದ ಇಂದು ಸಾಗುವಳಿ, ಪಹಣಿ, ಪೋಡಿ ದಾಖಲೆಗಳ ವಿತರಣೆ ಗುಂಡ್ಲುಪೇಟೆಯಲ್ಲಿ ಸಾಧ್ಯವಾಗಿದೆ ಎಂದು ಸಚಿವರಾದ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಮಾತನಾಡಿ ಹಿಂದೆ ತಮ್ಮ ತಂದೆ ಬಿ. ರಾಚಯ್ಯ ಅವರು ಸಚಿವರಾಗಿದ್ದ ಅವಧಿಯಲ್ಲಿ ಬಡವರಿಗೆ ಅರಣ್ಯ ಜಾಗವನ್ನು ಕಂದಾಯ ಭೂಮಿಯಾಗಿ ಪರಿವರ್ತಿಸಿ ಸಾಗುವಳಿ ಚೀಟಿ ನೀಡಿದ್ದರು. ಅವು ಇನ್ನೂ ದುರಸ್ತಿಯಾಗಿಲ್ಲ. ಕಾನೂನಿನಡಿ ಈ ಸಮಸ್ಯೆಯನ್ನು ಪರಿಹರಿಸಬೇಕು ಎಂದು ಮನವಿ ಮಾಡಿದರು. ಈ ಸಂಬಂಧ ಪ್ರತಿಕ್ರಿಯಿಸಿದ ಸಚಿವರು ಈ ಪ್ರಕರಣದಲ್ಲಿ ಮರುಸಮೀಕ್ಷೆ ನಡೆದಿದ್ದು, ಅರಣ್ಯ ಇಲಾಖೆಯೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಸಮಸ್ಯೆ ಪರಿಹರಿಸಲಾಗುವುದು ಎಂದರು.

ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್ ಅಧ್ಯಕ್ಷತೆ ವಹಿಸಿ ಮಾತನಾಡಿ ಸಾಗುವಳಿ ಚೀಟಿ ಸಮಸ್ಯೆ ಪ್ರತಿ ಸಭೆಯಲ್ಲಿಯೂ ಪ್ರತಿಧ್ವನಿಸುತ್ತಿದೆ. ಕಾನೂನುಗಳು ಬಿಗಿಯಾಗಿರುವುದರಿಂದ ಅರಣ್ಯಭೂಮಿಗೆ ಸಾಗುವಳಿ ಚೀಟಿ ನೀಡುವುದು ಕಷ್ಟಸಾಧ್ಯವಾಗಿದೆ. ಅರಣ್ಯ ಇಲಾಖೆ ನಮ್ಮ ಭೂಮಿ ಕಿತ್ತುಕೊಳ್ಳಲಿದೆ ಎಂಬ ಭಯ ಜನರಲ್ಲಿದೆ. ಇದನ್ನು ಹೋಗಲಾಡಿಸಲು ಶಾಶ್ವತ ಪರಿಹಾರ ಕಂಡುಹಿಡಿಯಬೇಕಾಗಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಜಿಲ್ಲೆಯಲ್ಲಿ 5 ತಾಲೂಕುಗಳು, 16 ಹೋಬಳಿಗಳಿವೆ. 6,60,696 ಭೂ ಮಾಲೀಕರಿದ್ದಾರೆ. 4,11,580 ಆರ್.ಟಿ.ಸಿ ಗಳಿವೆ. 5,75,745 ಆರ್.ಟಿ.ಸಿ ಗಳು ಆಶಧಾರ್ ಸೀಡಿಂಗ್ ಆಗಿದ್ದು, ಶೇ. 82.81ರಷ್ಟು ಪ್ರಗತಿ ಸಾಧಿಸಲಾಗಿದೆ. 4 ಬಗರ್ ಹುಕುಂ ಸಮಿತಿ ರಚನೆಯಾಗಿವೆ. 3239 ದರಖಾಸ್ತು ಭೂಮಿ ಪೋಡಿಯಾಗಿದ್ದು, ಮೂರು ತಿಂಗಳೊಳಗೆ ಸಾಗುವಳಿ ಪತ್ರ ವಿತರಿಸಲಾಗುವುದು. ಭೂ ಸುರಕ್ಷಾ ಯೋಜನೆಯಡಿ ಎಲ್ಲಾ ದಾಖಲಾತಿಗಳು ಡಿಜಿಟಲೀಕರಣಗೊಂಡಿದ್ದು, ಯಳಂದೂರು ತಾಲೂಕನ್ನು ಪೈಲಟ್ ಯೋಜನೆಯಾಗಿ ತೆಗೆದುಕೊಂಡಿದ್ದು 18,71,799 ಪುಟಗಳನ್ನು ಡಿಜಿಟಲೀಕರಣ ಆಗಿದೆ. ಎ.ಸಿ. ಹಾಗೂ ಡಿಸಿ ಕೋರ್ಟ್‌ನಲ್ಲಿ 90 ದಿನದೊಳಗೆ ಇತ್ಯರ್ಥಪಡಿಸುವ ಬಾಕಿ ಪ್ರಕರಣಗಳು ಕಡಿಮೆ ಇವೆ. ಕಂದಾಯ ಇಲಾಖೆಯ ಎಲ್ಲಾ ಅಧೀನ ಕಚೇರಿಗಳು ಇ-ಆಫೀಸ್ ಆಗಿದ್ದು, ಇ-ಆಫೀಸ್ ಪ್ರಕ್ರಿಯೆಯಲ್ಲಿ ಜಿಲ್ಲೆ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಪುರಸಭಾ ಅಧ್ಯಕ್ಷರಾದ ಜಿ.ಎಸ್. ಕಿರಣ್, ಉಪಾಧ್ಯಕ್ಷರಾದ ಹೀನಾ ಕೌಸರ್, ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್, ಎಲ್ಲಾ ತಾಲೂಕುಗಳ ತಹಶೀಲ್ದಾರರು, ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವಿದ್ಯಾಲಕ್ಷ್ಮಿ ಯೋಜನೆಯಲ್ಲಿ ಉನ್ನತ ವಿದ್ಯಾಭ್ಯಾಸಕ್ಕಾಗಿ ಬ್ಯಾಂಕಿನಿಂದ ಸಾಲ




**ಹುಳಿಯಾರು:** ಕೇಂದ್ರ ಸರ್ಕಾರವು ಎಲ್ಲಾ ಬ್ಯಾಂಕುಗಳಲ್ಲಿಯೂ ಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕಾಗಿ ವಿದ್ಯಾಲಕ್ಷ್ಮಿ ಯೋಜನೆ ಅಡಿಯಲ್ಲಿ ಸಾಲ ನೀಡಲಾಗುವುದು ಎಂದು ಕರ್ನಾಟಕ ಗ್ರಾಮೀಣ ಬ್ಯಾಂಕ್ ಹೊಯ್ಸಳಕಟ್ಟೆ ಶಾಖಾ ವ್ಯವಸ್ಥಾಪಕರಾದ ಕೃಷ್ಣ ತಿಳಿಸಿದರು.

ಹುಳಿಯಾರು ಹೋಬಳಿಯ ಗಾಣದಾಳು ವಿಶ್ವ ಭಾರತಿ ಪ್ರೌಢಶಾಲೆಯಲ್ಲಿ ಇತ್ತೀಚೆಗೆ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ ಜಂಟಿಯಾಗಿ ಏರ್ಪಡಿಸಿದ್ದ ಜನ ಸುರಕ್ಷಾ ಶಿಬಿರದಲ್ಲಿ ಅವರು ಮಾತನಾಡಿದರು. ಚಿಕ್ಕನಾಯಕನಹಳ್ಳಿ, ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡುತ್ತಾ ಕೇಂದ್ರ ಸರ್ಕಾರವು ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹಾಗೂ ಸ್ಕಾಲರ್‌ಶಿಪ್ ಇನ್ನು ಮುಂತಾದ ಹಲವಾರು ಯೋಜನೆಗಳನ್ನು ಜಾರಿ ಮಾಡಿದ್ದು ಅದರ ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು. ಗಾಣದಾಳು ವಿಶ್ವ ಭಾರತಿ ಪ್ರೌಢಶಾಲೆಯ ಮುಖ್ಯೋಪಾಧ್ಯಯರಾದ ಸೋಮಶೇಖರ್, ಸಹ ಶಿಕ್ಷಕರಾದ ನವೀನ್, ತಿಮ್ಮರಾಜ್, ವಿನೋದ, ಮತ್ತಿತರರು ಉಪಸ್ಥಿತರಿದ್ದರು.

## ಕನ್ನಡದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ



**ಹುಳಿಯಾರು:** ಹುಳಿಯಾರಿನ ಕರ್ನಾಟಕ ರಕ್ಷಣಾ ವೇದಿಕೆಯಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಳೆದ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ ಕನ್ನಡದಲ್ಲಿ 125 ಕ್ಕೆ 125 ಅಂಕಗಳನ್ನು ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸೋಮವಾರ ಸನ್ಮಾನಿಸಲಾಯಿತು. ರಕ್ಷಿತ್, ಎಚ್.ಕೆ.ವರ್ಷಿಣಿ, ಜಿ.ಎಂ.ಮನೋಜ್, ಎಚ್.ಪಿ.ಗಗನ್, ಅನು, ಕೆ.ಭೂಮಿಕ ಅವರುಗಳು 125 ಕ್ಕೆ 125 ಅಂಕಗಳನ್ನು ಪಡೆದು ಕರವೇ ಸನ್ಮಾನಕ್ಕೆ ಭಾಜನರಾದರು.

ಹುಳಿಯಾರು ಕರವೇ ಅಧ್ಯಕ್ಷ ಬೇಕರಿ ಪ್ರಕಾಶ್ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಮಾತನಾಡಿ ಸಮಾಜದಲ್ಲಿ ಬದಲಾವಣೆಗಳು ಕಾಣಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ. ಈ ನಿಟ್ಟಿನಲ್ಲಿ ಇಂದು ಪೋಷಕರು ಮನೆಯಲ್ಲಿ ಎಷ್ಟೇ ಕಷ್ಟವಿದ್ದರೂ ಮಕ್ಕಳ ವಿದ್ಯಾಭ್ಯಾಸಕ್ಕೆ ಹಣಕಾಸಿನ ಕೊರತೆ ಮಾಡುತ್ತಿಲ್ಲ, ಆದರೆ ಮಕ್ಕಳೇ ಇಂದು ಕಲಿಕೆಯಲ್ಲಿ ನಿರಾಸಕ್ತಿ ತೋರುತ್ತಿದ್ದಾರೆ. ಅದರಲ್ಲೂ ಕನ್ನಡ ಭಾಷೆಯನ್ನೇ ತಾತ್ಸಾರ ಮಾಡುತ್ತಿದ್ದಾರೆ. ಇದಕ್ಕೆ ಕನ್ನಡದಲ್ಲೇ ಅನುತ್ತೀರ್ಣರಾಗುತ್ತಿರುವುದು ನಿದರ್ಶನವಾಗಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಇಂಗ್ಲೀಷ್‌ಗೆ ಒತ್ತು ನೀಡುವುದು ಅವಶ್ಯ. ಹಾಗಂತ ಮಾತೃ ಭಾಷೆಯನ್ನು ಕಡೆಗಣಿಸುವುದು ಸರಿಯಲ್ಲ ಎಂದರು.

ಪ್ರಾಚಾರ್ಯ ಎನ್.ಜಿ.ಕೃಷ್ಣಮೂರ್ತಿ, ಕರವೇಯ ಜಿಲ್ಲಾ ಉಪಾಧ್ಯಕ್ಷ ಮೆಡಿಕಲ್ ಚನ್ನಬಸವಯ್ಯ, ಹುಳಿಯರು ಕರವೇಯ ಚನ್ನಕೇಶವ, ರಘು, ದಿವಾಕರ, ಹರೀಶ, ಬಸವರಾಜು, ಹೊನ್ನಪ್ಪ, ಮಂಜುನಾಥ್ ಸೇರಿದಂತೆ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜೆಸಿಎಂ ಶಾಲೆಯಲ್ಲಿ ಡಿ.11 ರಂದು ಕಾನೂನು ಅರಿವು ಕಾರ್ಯಕ್ರಮ

**ಹುಳಿಯಾರು:** ಹುಳಿಯಾರು ಸಮೀಪದ ದೊಡ್ಡಬಿದರೆಯ ಜೆಸಿಎಂ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಡಿ.11 ರ ಬುಧವಾರ ಮಧ್ಯಾಹ್ನ 1.30 ಗಂಟೆಗೆ ಚಿಕ್ಕನಾಯಕನಹಳ್ಳಿ ಕಾನೂನು ಸೇವಾ ಪ್ರಾಧಿಕಾರದ ಸಹಕಾರದೊಂದಿಗೆ ಕಾನೂನು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಲಾ ಫಾರ್ ಆಲ್ ಪತ್ರಿಕೆಯ ಸಂಪಾದಕ ಸುರೇಶ್ ಕರ್ತಾಳ್ ತಿಳಿಸಿದರು.

ಹುಳಿಯಾರು ಹೋಬಳಿಯ ದೊಡ್ಡಬಿದರೆಯ ಜೆಸಿಎಂ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಈ ಸಂಬಂಧ ಸೋಮವಾರ ಪತ್ರಿಕಾಗೋಷ್ಠಿ ನಡೆಸಿದರು. ಕನ್ನಡಿಗರಿಗೆ ಆಡು ಭಾಷೆಯಲ್ಲಿ ಕಾನೂನು ಮಾಹಿತಿ ತಿಳಿಸುವ ಸಲುವಾಗಿ 2023 ಆಗಸ್ಟ್ ಮಾಹೆಯಲ್ಲಿ ಕನ್ನಡ ಕಾನೂನು ಮಾಸ ಪತ್ರಿಕೆ ಆರಂಭಿಸಿದ್ದೇನೆ. ದೇಶದಲ್ಲಿ ಇರುವ ಕಾನೂನಿನ ಜೊತೆಗೆ ಹೊಸಹೊಸ ಕಾನೂನುಗಳು ಹಾಗೂ ಮುಖ್ಯವಾದ ತೀರ್ಪುಗಳನ್ನು ಕನ್ನಡದಲ್ಲಿ ಪತ್ರಿಕೆ ಮೂಲಕ ಜನಸಾಮಾನ್ಯರಿಗೆ ತಿಳಿಸುವ ಪ್ರಯತ್ನ ಮಾಡಲಾಗುತ್ತಿದೆ. ಪ್ರತಿ ವರ್ಷ ಪತ್ರಿಕೆಯಿಂದ ಒಂದೊಂದು ಕಾರ್ಯಕ್ರಮ ಮಾಡಲಾಗುತ್ತಿದ್ದು ಕಳೆದ ವರ್ಷ ಮೈಸೂರಿನಲ್ಲಿ ಮಾಡಲಾಗಿದ್ದು ಈ ವರ್ಷ ಶಾಲಾ ವಿದ್ಯಾರ್ಥಿಗಳಿಗೆ ಕಾನೂನು ಅರಿವು ಮೂಡಿಸುವ ಸಲುವಾಗಿ ಜೆಸಿಎಂ ಇಂಟರ್ ನ್ಯಾಷನಲ್ ಸ್ಕೂಲ್‌ನಲ್ಲಿ ಆಯೋಜಿಸುತ್ತಿರುವುದಾಗಿ ತಿಳಿಸಿದರು.



ಚಿಕ್ಕನಾಯಕನಹಳ್ಳಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಎ.ಶ್ರೀನಾಥ್, ಅದೀನ ಸಿವಿಲ್ ನ್ಯಾಯಾಧೀಶರಾದ ಅಪರ್ಣ ಆರ್ ಹಾಗೂ ಮಾಜಿ ಕಾನೂನು ಸಚಿವರಾದ ಜೆ.ಸಿ.ಮಾಧುಸ್ವಾಮಿ ಸೇರಿದಂತೆ ಅನೇಕ ಪ್ರಮುಖರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಈ ಸಂದರ್ಭದಲ್ಲಿ ವಕೀಲರಾಗಿ 50 ವರ್ಷ ಸೇವೆ ಸಲ್ಲಿಸಿರುವವರನ್ನು ಸನ್ಮಾನಿಸಲಾಗುವುದು. 2025 ರ ನೂತನ ಕ್ಯಾಲೆಂಡರ್ ಬಿಡುಗಡೆ ಮಾಡಲಾಗುವುದು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಸುರೇಶ್ ತಿಳಿಸಿದ್ದಾರೆ.

## ರಾಜ್ಯಮಟ್ಟದ ಪ್ರತಿಭಾ ಕಾರಂಜಿಗೆ ಆಯ್ಕೆಯಾದ ವಿದ್ಯಾರ್ಥಿಗಳು

**ವಿಜಯಪುರ:** ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆಯ ಆವರಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವದಲ್ಲಿ ರೋಟರಿ ಶಾಲೆಯ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆಯುವ ಮೂಲಕ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ವಿದ್ಯಾರ್ಥಿನಿ ತನಿಶ್ರೀ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ, ರಸಪ್ರಶ್ನೆಯಲ್ಲಿ ಪ್ರಫುಲ್ ಕುಮಾರ್, ಹಾಗೂ ಸಂತೋಷ್ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಚಿತ್ರಕಲೆ ಸ್ಪರ್ಧೆಯಲ್ಲಿ ಹರ್ಷ ದ್ವಿತೀಯ, ಹಿಂದಿ ಭಾಷಣ ಸ್ಪರ್ಧೆಯಲ್ಲಿ ಪ್ರಫುಲ್ ಕುಮಾರ್ ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ ಎಂದು ಮುಖ್ಯಶಿಕ್ಷಕಿ ಎ.ಎಂ.ಮಂಜುಳಾ ತಿಳಿಸಿದ್ದಾರೆ.



## 11 ರಂದು ನಗರದಲ್ಲಿ ವಿಕಲಚೇತನರ ಕುಂದುಕೊರತೆ ಸಭೆ

**ಚಾಮರಾಜನಗರ:** ಜಿಲ್ಲಾ ಮಟ್ಟದ ವಿಕಲಚೇತನರ ಕುಂದುಕೊರತೆ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 11 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆ.ಡಿ.ಪಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ವಿಕಲಚೇತನರು ಸಭೆಯ ಸದುಪಯೋಗಪಡಿಸಿಕೊಳ್ಳ ಬೇಕು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿಗಳ ಕಚೇರಿ ದೂ.ಸಂ 08226-223688, 224688 ಸಂಪರ್ಕಿಸುವಂತೆ ಜಿಲ್ಲಾ ವಿಕಲಕಚೇತನರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 11 ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದಿಂದ ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಡಿಸೆಂಬರ್ 11 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಉಮ್ಮತ್ತೂರು, ಬಾಗಳಿ, ಲಿಂಗಣಾಪುರ, ಜನ್ನೂರು, ಜನ್ನೂರು ಹೊಸೂರು, ಹಳ್ಳಿಕೆರೆಹುಂಡಿ, ಗಣಗನೂರು, ಗಣಗನೂರುಪುರ, ನವಿಲೂರು, ಆಲ್ದೂರು, ಬಿಎಂಕೆ ಹುಂಡಿ, ಗೊದ್ದಲಹುಂಡಿ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಉಚಿತ ದೂ.ಸಂ 1912 ಸಂಪರ್ಕಿಸುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಬೇಡ್ಕರ್ ನಗರಕ್ಕೆ ಪ್ರತಿನಿತ್ಯ ಕಸದ ಗಾಡಿ ಕಳುಹಿಸಿ

**ಚಿತ್ರದುರ್ಗ:** ಟೀಚರ್ಸ್ ಕಾಲೋನಿ ಬಳಿ ಇರುವ ಅಂಬೇಡ್ಕರ್ ನಗರದ ಸುತ್ತಮುತ್ತ ಕಸ ಸಂಗ್ರಹಿಸುವ ಕಸದ ಗಾಡಿ ಪ್ರತಿನಿತ್ಯ ಬಂದು, ರಸ್ತೆ ಕಿರಿದಾಗಿದ್ದರು ಸಹ ಬೆಳಗ್ಗೆ 10 ಗಂಟೆಯ ನಂತರ ಪ್ರತಿ ಮನೆಗಳಿಂದ ಕಸ ಸಂಗ್ರಹಿಸಿದರೆ, ಸುತ್ತಮುತ್ತಲು ಬಿಸಾಡುವ ಕಸ ಕಡಿಮೆಯಾಗುತ್ತದೆ, ಪರಿಸರವು ಚೆನ್ನಾಗಿರುತ್ತದೆ. ಜನರು ಸಹ 10 ಗಂಟೆಯ ನಂತರ ಕಸದ ಗಾಡಿ ಬಂದರೂ ಸಹ, ಅದಕ್ಕೆ ಕಸ ಹಾಕಿ, ಉತ್ತಮ ಪರಿಸರ ಕಾಯ್ದುಕೊಳ್ಳಬೇಕು ಎಂದು ಟೀಚರ್ಸ್ ಕಾಲೋನಿಯ ನಿವೃತ್ತ ಸಹ ಶಿಕ್ಷಕರಾದ ಮಂಜುನಾಥ ರವರು ನಗರಸಭೆಗೆ ಮತ್ತು ನಾಗರೀಕರಿಗೆ ವಿನಂತಿಸಿಕೊಂಡಿದ್ದಾರೆ.



ಅವರು ಅಂಬೇಡ್ಕರ್ ನಗರದಲ್ಲಿ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಟೀಚರ್ಸ್ ಕಾಲೋನಿಯ ಪರಿಸರದ ಬಳಗ, ಅಮೃತ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪೇಯಿಂಗ್ ಗೆಸ್ಟ್ ವಿದ್ಯಾರ್ಥಿಗಳು ಸಂಯುಕ್ತವಾಗಿ ಆಯೋಜಿಸಿದ್ದ ಪರಿಸರ ಮತ್ತು ಆರೋಗ್ಯದ ಬಗ್ಗೆ ಜನಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಪ್ಲಾಸ್ಟಿಕ್ ವಸ್ತುಗಳನ್ನು ಎಲ್ಲಿಂದರಲ್ಲಿ ಬಿಸಾಡದೇ, ನಿರ್ದಿಷ್ಟವಾದ ಜಾಗದಲ್ಲಿ ಸಂಗ್ರಹಿಸಿಟ್ಟು, ಅದನ್ನು ನಗರಸಭೆಯ ಗಾಡಿಗಳಿಗೆ ಹಾಕಬೇಕು. ನಗರ ಸಭೆಯ ಗಾಡಿಗಳು ನಿಮ್ಮ ಮನೆಯ ಮುಂದೆ ಬಂದು ಕಸ ಸಂಗ್ರಹಿಸಲು ಅವಕಾಶಗಳನ್ನು ಕಲ್ಪಿಸಿಕೊಡಬೇಕು, ರಸ್ತೆ ಬದಿಯಲ್ಲಿ ನಿಲ್ಲಿಸಿರುವ ವಾಹನಗಳನ್ನು ತೆರವುಗೊಳಿಸಿ, ನಗರಸಭೆಯ ವಾಹನ ಬಂದು ಹೋಗುವಷ್ಟು ಜಾಗ ಕಲ್ಪಿಸಿ ಕೊಟ್ಟರೆ ಮಾತ್ರ, ನಗರ ಸಭೆಗೆ ಕಸ ಸಂಗ್ರಹಿಸಲು ಅನುಕೂಲಕರವಾಗುತ್ತದೆ. ಕಸ ಸಂಗ್ರಹಿಸಿ ಇಟ್ಟುಕೊಂಡು ಗಾಡಿ ಬಂದಾಗ ಅದನ್ನು ಹಾಕಬೇಕು ಎಂದು ಮನವಿ ಮಾಡಿಕೊಂಡರು.

ಬೆಳಗ್ಗೆ ಕಸದ ಗಾಡಿ ಬಂದಾಗ ಮನೆ ಮುಂದೆ ನಿಂತಿರುವ ಆಟೋಗಳು ಮತ್ತು ವಾಹನಗಳು ರಸ್ತೆ ಸಂಚಾರಕ್ಕೆ ಅಡೆತಡೆ ಉಂಟುಮಾಡುತ್ತವೆ, ಅದಕ್ಕಾಗಿ 10 ಗಂಟೆಯ ನಂತರ ಎಲ್ಲಾ ವಾಹನಗಳು ಖಾಲಿಯಾದಾಗ ನಗರಸಭೆಯ ವಾಹನ ಕಸ ಸಂಗ್ರಹಣೆಗೆ ಬರುತ್ತದೆ, ಆಗಲಾದರೂ ನೀವು ಕಸವನ್ನ ಹಾಕಿ ಸ್ವಚ್ಛತೆಯನ್ನ ಕಾಪಾಡಿಕೊಳ್ಳಬೇಕು ಎಂದರು.

ಶ್ರೀ ಚಿನ್ಮಯ ರೆಡ್ಡಿ, ನಿವೃತ್ತ ಮುಖ್ಯೋಪಾಧ್ಯಾಯರು ಮಾತನಾಡಿ, ಪ್ಲಾಸ್ಟಿಕ್ ವಸ್ತುಗಳು ಭೂಮಿಯಲ್ಲಿ ತಕ್ಷಣ ಕೊಳೆಯುವುದಿಲ್ಲ, ವರ್ಷಾನುಗಟ್ಟಲೆ ಭೂಮಿಯನ್ನ ನಾಶ ಮಾಡುತ್ತದೆ, ಅದೇ ಪರಿಸರದಲ್ಲಿ ಸಿಗುವ ಬಟ್ಟೆಯ ತುಂಡು, ಕೆಲವೇ ದಿನಗಳಲ್ಲಿ ಕೊಳೆತು ಗೊಬ್ಬರವಾಗುತ್ತದೆ. ಆದ್ದರಿಂದ ಪರಿಸರದಲ್ಲಿ ಸಿಗುವಂತ ವಸ್ತುಗಳನ್ನು ಹೆಚ್ಚು ಬಳಕೆ ಮಾಡಬೇಕು. ಪ್ಲಾಸ್ಟಿಕ್ ಅನ್ನು ನಿಷೇಧ ಮಾಡಿಕೊಳ್ಳಬೇಕು ಎಂದರು.

ಕರ್ನಾಟಕ ಜ್ಞಾನವಿಜ್ಞಾನ ಸಮಿತಿಯ ಜಿಲ್ಲಾಧ್ಯಕ್ಷ, ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ.ಎಚ್ ಕೆ ಎಸ್ ಸ್ವಾಮಿ ಮಾತನಾಡಿ, ಪ್ಲಾಸ್ಟಿಕ್ ನಿಂದ ಆಗುವ ಅನಾಹುತಗಳನ್ನು ಅರಿತುಕೊಂಡು, ಆದಷ್ಟು ಕಸದಿಂದ ರಸ ಮಾಡುವ ಯೋಜನೆಗಳನ್ನ ಅಳವಡಿಸಿಕೊಳ್ಳಬೇಕು. ಯಾವುದೂ ಕಸವಲ್ಲ, ಎಲ್ಲವನ್ನು ಸಹ ನಾವು ಮರುಬಳಿಕೆ ಮಾಡಿ, ಪರಿಸರವನ್ನ ಸಂರಕ್ಷಿಸಬೇಕು ಎಂದರು.

## ಅಯ್ಯಪ್ಪನ ದರ್ಶನಕ್ಕೆ ಇಡುಮುಡಿ ಹೊತ್ತ ಸ್ವಾಮಿಗಳು

**ವಿಜಯಪುರ:** ಶಬರಿಮಲೆ ಕೇರಳದಲ್ಲಿರುವ ಒಂದು ಹಿಂದೂ ಪುಣ್ಯ ಕ್ಷೇತ್ರ ಎಂದು ಶ್ರೀ ಧರ್ಮಶಾಸ್ತ ಅಯ್ಯಪ್ಪ ಸ್ವಾಮಿ ದೇವಾಲಯದ ಪ್ರಧಾನ ಅರ್ಚಕ ಮತ್ತು ಗುರುಸ್ವಾಮಿ ಜೆ.ವಿ ಮುನಿರಾಜು ತಿಳಿಸಿದರು.



ಪಟ್ಟಣದ ಅಯ್ಯಪ್ಪ ನಗರದ ಶ್ರೀ ಪಂಪ ಮಹಾಗಣಪತಿ ದೇವಾಲಯದ ಆವರಣದಲ್ಲಿ ಇಂದು ನಡೆದ ಇಡುಮುಡಿ ಮಹೋತ್ಸವ ಕಾರ್ಯಕ್ರಮದಲ್ಲಿ ನಲ್ವತ್ತೊಂದು ದಿನಗಳ ತುಳಸಿ ಮಾಲೆ ಹಾಕಿ ಕಪ್ಪು ವಸ್ತ್ರ ಧರಿಸಿ ಅಯ್ಯಪ್ಪ ಸ್ವಾಮಿಯ ವ್ರತಾಚರಣೆಯನ್ನು ಪೂರ್ಣಗೊಳಿಸಿದ ಸ್ವಾಮಿಗಳಿಗೆ ಶಬರಿಮಲೆಯ ಅಯ್ಯಪ್ಪ ಸ್ವಾಮಿ ದರ್ಶನಕ್ಕೆ ಹೊರಡುವ ಇಡುಮುಡಿ ಮಹೋತ್ಸವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಕೇರಳ ರಾಜ್ಯ ನಮ್ಮ ದೇಶದ ಪಶ್ಚಿಮ ಘಟ್ಟ ಪರ್ವತ ಶ್ರೇಣಿಯಲ್ಲಿರುವ ಪತ್ತನಂತಿಟ್ಟ ಜಿಲ್ಲೆಯಲ್ಲಿರುವ ಶಬರಿಗಿರಿಯಾಗಿದೆ. ಇಲ್ಲಿ ಶ್ರೀ ಅಯ್ಯಪ್ಪ ದೇವಸ್ಥಾನವು ದೇಶದ ಅತ್ಯಂತ ಪ್ರಾಚೀನ ಮತ್ತು ಪ್ರಸಿದ್ಧ ದೇವಾಲಯಗಳಲ್ಲಿ ಒಂದಾಗಿದೆ ಆದ್ದರಿಂದ ಪ್ರತಿವರ್ಷ ಲಕ್ಷಾಂತರ ಜನರು ಶ್ರೀ ಅಯ್ಯಪ್ಪ ಸ್ವಾಮಿಯ ಮಾಲೆಯನ್ನು ಧರಿಸಿ ಸ್ವಾಮಿಯ ದರ್ಶನ ಪಡೆದು ತಮ್ಮ ಇಷ್ಟಾರ್ಥಗಳನ್ನು ಪೂರೈಸಿ ಕೊಳ್ಳುತ್ತಾರೆ ಎಂದು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ. ಪ್ರಶಾಂತ ಮತನಾಡಿ ಶಬರಿಮಲೆ ಯಾತ್ರೆಯ ಅವಧಿಯನ್ನು ದೇವಾಲಯದ ಆಡಳಿತ ಮಂಡಳಿ ಧರ್ಮಶಾಸ್ತ್ರದ ಅನುಸಾರ ಮೊದಲೇ ನಿರ್ಧರಿಸಲಾಗಿದ್ದು ಯಾತ್ರಿಕರು ತಮ್ಮ ಅನುಕೂಲದ ವಿವಿಧ ಹಂತಗಳಲ್ಲಿ ಕ್ರಮಬದ್ಧವಾಗಿ ಯಾತ್ರೆ ಕೈಗೊಳ್ಳಬೇಕು. ಈ ಯಾತ್ರೆಯು ಮಲಯಾಳಂ ವರ್ಷದ ವೃಶ್ಚಿಕ ಮಾಸದ ಮೊದಲ ದಿನದಂದು ಪ್ರಾರಂಭವಾಗಿ ಧನುರ್ ಮಾಸದ ಕೊನೆಯ ದಿನದಂದು ಕೊನೆಗೊಳ್ಳುತ್ತದೆ ಆದ್ದರಿಂದ ಈ ದಿನಗಳಲ್ಲಿ ಮಾಲೆ ಧರಿಸುವ ಸ್ವಾಮಿಗಳು ತಮ್ಮ ಕಾಲಾನುಕೂಲದ ಅನುಸಾರವಾಗಿ ನಲ್ವತ್ತೊಂದು ದಿನಗಳ ಮಾಲೆಯನ್ನು ಧರಿಸಿ ಸ್ವಾಮಿಯ ವ್ರತಾಚರಣೆಯನ್ನು ಪೂರ್ಣಗೊಳಿಸಿದ ನಂತರ

ಸ್ವಾಮಿಯ ದರ್ಶನಕ್ಕೆ ಯಾತ್ರೆಯನ್ನು ಕೈಗೊಳ್ಳಬೇಕು. ಈ ಯಾತ್ರೆಯ ಅವಧಿಯನ್ನು ನಾವು ಋತು ಮಂಡಲ ಎಂದು ಕರೆಯಲಾಗುತ್ತದೆ ಎಂದು ತಿಳಿಸಿದರು. ಇಡುಮುಡಿ ಮಹೋತ್ಸವದ ಅಂಗವಾಗಿ ಪ್ರತಿದಿನ ದೇವಾಲಯದ ಆವರಣದಲ್ಲಿ ಮಾಲೆ ಧರಿಸಿದ ಸ್ವಾಮಿಗಳಿಗೆ ಪ್ರಾರ್ಥನೆ, ಭಜನೆ, ಧಾರ್ಮಿಕ ವಿಚಾರಗಳ ಚಿಂತನೆ, ಅವನ,ಹೋಮ, ಸ್ವಾಮಿಯ ಶರಣ ಘೋಷಣೆಗಳು ಮತ್ತು ಅನ್ನ ಸಂತರ್ಪಣೆ ನಡೆಯಿತು. ಇಡುಮುಡಿ ಮಹೋತ್ಸವ ದ ಕಾರ್ಯಕ್ರಮದ ಉಪಸ್ಥಿತಿಯಲ್ಲಿ ನಂದೀಶ್, ವಸಂತ್, ಮಧು, ಮುರಳಿ, ಶಿವಕುಮಾರ್,ಕಿಶೋರ್ ಕುಮಾರ್, ಸುಶೀಲಮ್ಮ, ಸುಧಾರಾಣಿ, ಮಂಜುನಾಥ್,ಯೋಗೀಶ್, ಪ್ರಮೋದ್, ಶಶಿ ಹಾಜರಿದ್ದರು.

# ಸಂಜೆ ಟಿಪ್ಸ್

## ಸ್ಪ್ಯಾಮ್ ವರದಿ ಬಿಡುಗಡೆಗೊಳಿಸಿದ ಏರ್‌ಟೆಲ್

ಭಾರತಿ ಏರ್ಟೆಲ್, ಭಾರತದ ಮೊದಲ ಸ್ಪ್ಯಾಮ್ ವಿರೋಧಿ ನೆಟ್ವರ್ಕ್, ತನ್ನ ಎಐ-ಚಾಲಿತ, ಸ್ಪ್ಯಾಮ್ ವಿರೋಧಿ ಪರಿಹಾರವನ್ನು ಪರಿಚಯಿಸಿದ ಎರಡೂವರೆ ತಿಂಗಳುಗಳಲ್ಲಿಯೇ 8 ಬಿಲಿಯನ್ ಸ್ಪ್ಯಾಮ್ ಕರೆಗಳುಮತ್ತು 0.8 ಬಿಲಿಯನ್ ಸ್ಪ್ಯಾಮ್ ಟಗಳನ್ನು ವರದಿ ಮಾಡಿದೆ. ಈ ಸುಧಾರಿತ ಅಲ್ಗಾರಿದಮ್ ಅನ್ನು ಬಳಸಿಕೊಂಡು ಎಐ-ಚಾಲಿತ ನೆಟ್ವರ್ಕ್ ಯಶಸ್ವಿಯಾಗಿ ಪ್ರತಿ ದಿನ ಅಂದಾಜು 1 ಮಿಲಿಯನ್ ಸ್ಪ್ಯಾಮರ್ ಗಳನ್ನು ಗುರುತಿಸಿದೆ.ಸಂಸ್ಥೆಯು, ಕಳೆದ 2.5 ತಿಂಗಳುಗಳಲ್ಲಿ, ತನ್ನ 252 ಮಿಲಿಯನ್ ವಿಶಿಷ್ಟ ಗ್ರಾಹಕರಿಗೆ ಈ ಅನುಮಾನಾಸ್ಪದ ಕರೆಗಳ ಬಗ್ಗೆ ಎಚ್ಚರಿಕೆ ನೀಡಿದೆ, ಜೊತೆಗೆ ಇಂತಹ ಕರೆಗಳನ್ನು ಸ್ವೀಕರಿಸುವ ಗ್ರಾಹಕರ ಪ್ರಮಾಣದಲ್ಲಿ 12%ರಷ್ಟು ಕುಸಿತವನ್ನು ಸಹ ಗಮನಿಸಿದೆ. ಏರ್ಟೆಲ್ ನೆಟ್ವರ್ಕ್ ನ ಎಲ್ಲಾ ಕರೆಗಳಲ್ಲಿ ಶೇಖಡಾ 6% ಸ್ಪ್ಯಾಮ್ ಕರೆಗಳಾಗಿವೆ ಮತ್ತು ಎಲ್ಲಾ ಟಗಳ ಶೇಖಡಾ 2% ರಷ್ಟು ಸಂದೇಶಗಳು ಸ್ಪ್ಯಾಮ್ ಸಂದೇಶಗಳು ಎಂದು ಗುರುತಿಸಲಾಗಿದೆ. ಆಸಕ್ತಿದಾಯಕವಾಗಿ, ಶೇಖಡಾ 35%ರಷ್ಟು ಸ್ಪ್ಯಾಮರ್ ಗಳು ಸ್ಥಿರ ದೂರವಾಣಿಗಳನ್ನು ಬಳಸುತ್ತಾರೆ. ಹೆಚ್ಚುವರಿಯಾಗಿ, ದೆಹಲಿಯಲ್ಲಿರುವ ಗ್ರಾಹಕರು ಅತ್ಯಧಿಕ ಸ್ಪ್ಯಾಮ್ ಕರೆಗಳನ್ನು ಸ್ವೀಕರಿಸಿದರೆ, ಆಂಧ್ರಪ್ರದೇಶ ಮತ್ತು ಪಶ್ಚಿಮ ಉತ್ತರ ಪ್ರದೇಶ ಸ್ಪ್ಯಾಮ್ ಕರೆಗಳನ್ನು ಸ್ವೀಕರಿಸುವ ನಂತರದ ರಾಜ್ಯಗಳಾಗಿವೆ. ಗರಿಷ್ಠ ಸ್ಪ್ಯಾಮ್ ಕರೆಗಳ ಮೂಲವು ಮೊದಲು ದೆಹಲಿ, ನಂತರ ಮುಂಬೈ ಮತ್ತು ಕರ್ನಾಟಕದ್ದಾಗಿದೆ ಎಂದೂ ಸಹ ಗಮನಿಸಲಾಗಿದೆ. ಖಜಖಗಳಿಗೆ ಸಂಬಂಧಿತ ವಿಷಯದಲ್ಲಿ, ಮೊದಲು ಗುಜರಾತ್, ನಂತರ ಕೊಲ್ಕತ್ತಾ ಮತ್ತು ಉತ್ತರ ಪ್ರದೇಶದಿಂದ ಹೆಚ್ಚಿನ ಸ್ಪ್ಯಾಮ್ ಸಂದೇಶಗಳನ್ನು ಕಳುಹಿಸಲಾಗಿದೆ. ಮತ್ತು ಮುಂಬೈ, ಚೆನ್ನೈ ಹಾಗೂ ಗುಜರಾತ್ ನಗರಗಳಲ್ಲಿನ ಗ್ರಾಹಕರು ಸ್ಪ್ಯಾಮ್ ಕರೆಗಳಿಗೆ ಗುರಿಯಾಗಿದ್ದಾರೆ. ಇತ್ತೀಚಿನ ಪ್ರವೃತ್ತಿಗಳ ಪ್ರಕಾರ, ಎಲ್ಲಾ ಸ್ಪ್ಯಾಮ್ ಕರೆಗಳ ಶೇಖಡಾ 76%ರಷ್ಟು ಸ್ಪ್ಯಾಮ್ ಕರೆಗಳು ಪುರುಷ ಗ್ರಾಹಕರನ್ನು ಗುರಿಪಡಿಸುತ್ತದೆ. ಜೊತೆಗೆ, ವಯಸ್ಸಿನ ಅಂಕಿಅಂಶಗಳಾದ್ಯಂತ ಸ್ಪ್ಯಾಮ್ ಕರೆಗಳ ಆವರ್ತನದಲ್ಲಿಯೂ ಸಹ ಗಮನಾರ್ಹ ವ್ಯತ್ಯಾಸಗಳನ್ನು ಕಾಣಬಹುದಾಗಿದೆ. 36-60 ವಯಸ್ಸಿನ ಗ್ರಾಹಕರು ಶೇಖಡಾ 48%ರಷ್ಟು ಸ್ಪ್ಯಾಮ್ ಕರೆಗಳನ್ನು ಸ್ವೀಕರಿಸುತ್ತಾರೆ, ಇನ್ನು 26-35 ವಯೋಮಿತಿಯವರು ಎಲ್ಲಾ ಕರೆಗಳ ಶೇಖಡಾ 26%ರಷ್ಟು ಸ್ಪ್ಯಾಮ್ ಕರೆಗಳನ್ನು ಸ್ವೀಕರಿಸುತ್ತಾರೆ, ಈ ವಯೋಮಿತಿಯವರು ಎರಡನೆಯ ಅತ್ಯಂತ ಹೆಚ್ಚಿನ ಸ್ಪ್ಯಾಮ್ ಕರೆಗಳನ್ನು ಸ್ವೀಕರಿಸುವವರಾಗಿದ್ದಾರೆ.

## ರವೆ ಉಂಡೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಚಿರೋಟಿ ರವೆ- 1 ಕಪ್, ಒಣಕೊಬ್ಬರಿ- 1 ಕಪ್, ಒಣದ್ರಾಕ್ಷಿ- 15, ಗೋಡಂಬಿ- 15, ಏಲಕ್ಕಿ ಸ್ವಲ್ಪ, ಸಕ್ಕರೆ -1 ಕಪ್, ಹಾಲು -1 ಕಪ್, ತುಪ್ಪ-1 ಕಪ್

### ಮಾಡುವ ವಿಧಾನ

ಮೊದಲಿಗೆ ಚಿರೋಟಿ ರವೆಯನ್ನು ಸಣ್ಣ ಉರಿಯಲ್ಲಿ ತುಪ್ಪ ಹಾಕಿ ಚೆನ್ನಾಗಿ ಹುರಿಯಬೇಕು. ಒಣಕೊಬ್ಬರಿಯನ್ನು ಮಿಕ್ಸಿಯಲ್ಲಿ ಹಾಕಿ ಪುಡಿ ಮಾಡಿಕೊಳ್ಳಬೇಕು. ದ್ರಾಕ್ಷಿ ಮತ್ತು ಗೋಡಂಬಿಯನ್ನು ತುಪ್ಪದಲ್ಲಿ ಹಾಕಿ ಕರಿಯಬೇಕು. ರವೆ ಬಿಸಿ ಇರುವಾಗಲೇ ಕೊಬ್ಬರಿ ಪುಡಿ, ದ್ರಾಕ್ಷಿ ಗೋಡಂಬಿ, ಪುಡಿ ಮಾಡಿದ ಸಕ್ಕರೆ ಎಲಕ್ಕಿ ಪುಡಿ ಬಾಕಿ ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಬಿಸಿ ಮಾಡಿದ ಹಾಲನ್ನು ಮಿಶ್ರಣಕ್ಕೆ ಹಾಕಿ ಚೆನ್ನಾಗಿ ಕಲೆಸಿ. ನಂತರ ಉಂಡೆ ಮಾಡಿ. ಈಗ ಸಿಹಿಯಾದ ರವೆಉಂಡೆ ಸವಿಯಲು ಸಿದ್ಧ.

## ಶಾಹಿದ್ ಅಫ್ರಿದಿ, ಸೋನಾಲಿ ಬೇಂದ್ರೆ ಡೇಟಿಂಗ್ ವಂದತಿ: ರಹಸ್ಯ ಬಹಿರಂಗ



ಪಾಕಿಸ್ತಾನ ಕ್ರಿಕೆಟ್ ತಂಡದ ಮಾಜಿ ನಾಯಕ ಶಾಹಿದ್ ಅಫ್ರಿದಿ ಮತ್ತು ಅಂದಿನ ಸ್ಟಾರ್ ನಾಯಕಿ ಸೋನಾಲಿ ಬೇಂದ್ರೆ ಈ ಹಿಂದೆ ಸಂಬಂಧ ಹೊಂದಿದ್ದರು ಎಂಬ ವದಂತಿಗಳಿಗೆ ಇತ್ತೀಚೆಗಷ್ಟೇ ಸ್ಪಷ್ಟನೆ ಸಿಕ್ಕಿದೆ.

ಕ್ರಿಕೆಟ್ಗೂ ಸಿನಿಮಾರಂಗಕ್ಕೂ ಮೊದಲಿನಿಂದಲೂ ಒಂದು ನಂಟಿದೆ. ಹಲವು ಖ್ಯಾತ ನಟಿಯರು ಕ್ರಿಕೆಟಿಗರನ್ನು ಪ್ರೀತಿಸಿ ಮದುವೆಯಾಗಿದ್ದಾರೆ. ಆಗಾಗ ಬಾಲಿವುಡ್ ಸೆಲಿಬ್ರಿಟಿಗಳು ಮತ್ತು ಕ್ರಿಕೆಟಿಗರ ಡೇಟಿಂಗ್ ವದಂತಿಗಳು ಸಹ ಹರಡುತ್ತಿರುತ್ತವೆ.

ಪಾಕಿಸ್ತಾನ ಕ್ರಿಕೆಟ್ ತಂಡದ ಮಾಜಿ ನಾಯಕ ಶಾಹಿದ್ ಅಫ್ರಿದಿ ಮತ್ತು ಅಂದಿನ ಸ್ಟಾರ್ ನಾಯಕಿ ಸೋನಾಲಿ ಬೇಂದ್ರೆ ಈ ಹಿಂದೆ ಸಂಬಂಧ ಹೊಂದಿದ್ದರು ಎಂಬ ಬಹುದೊಡ್ಡ ವದಂತಿ ಆ ಕಾಲದಲ್ಲಿತ್ತು. ಇತ್ತೀಚೆಗಷ್ಟೇ ಅಫ್ರಿದಿ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ.

ಶಾಹಿದ್ ಅಫ್ರಿದಿ ಈ ಹಿಂದೆ ಪಾಕಿಸ್ತಾನ ಕ್ರಿಕೆಟ್ ತಂಡದ ಪ್ರಮುಖ ಆಟಗಾರನಾಗಿದ್ದರು. ವಿಶ್ವಾದ್ಯಂತ ಅಭಿಮಾನಿಗಳನ್ನು ಹೊಂದಿದ್ದಾರೆ. ಶಾಹಿದ್ ಅಫ್ರಿದಿ ಭಾರತೀಯ ನಟಿ ಸೋನಾಲಿ ಬೇಂದ್ರೆಯೊಂದಿಗೆ ಸಂಬಂಧ ಹೊಂದಿದ್ದಾರೆ ಎಂಬ ವದಂತಿ ಹಬ್ಬಿತ್ತು. ಈ ಬಗ್ಗೆ ಅಫ್ರಿದಿ ಈಗ ಮೌನ ಮುರಿದಿದ್ದಾರೆ.

ಪಾಕಿಸ್ತಾನ್ ಟ್ರಿಬ್ಯೂನ್ ವೆಬ್ಸೈಟ್ ವರದಿ ಪ್ರಕಾರ.. 17ನೇ ಉರ್ದು ಅಂತರಾಷ್ಟ್ರೀಯ ಸಮ್ಮೇಳನ, ಕರಾಚಿ ಉತ್ಸವದಲ್ಲಿ ಭಾಗವಹಿಸಿದ್ದ ಅಫ್ರಿದಿ ಅವರನ್ನು ಈ ಬಗ್ಗೆ ಕೇಳಲಾಯಿತು. ಈಗ ನಾನು ಅಜ್ಜನಾಗಿದ್ದೇನೆ ಎಂದು ಹೇಳಿದ್ದಾರೆ.

ಇನ್ನೊಂದು ಪ್ರಶ್ನೆಗೆ ಉತ್ತರಿಸಿದ ಅಫ್ರಿದಿ.. ನನಗೆ ಇನ್ನೂ ವಯಸ್ಸಾಗಿದೆ ಎಂದು ಅನ್ನಿಸಿಲ್ಲ.. ನನ್ನ ಐದನೇ ಮಗಳ ಮೂಲಕ ಮೊಮ್ಮಗ ಹುಟ್ಟಿದಾಗ ತಾತನಂತೆ ಅನಿಸುತ್ತದೆ ಎಂದಿದ್ದಾರೆ. ಹಿಂದಿ ಚಿತ್ರಗಳ ಮೂಲಕ ಜನಮನ್ನಣೆ ಗಳಿಸಿದ್ದ ಸೋನಾಲಿ ಬೇಂದ್ರೆ, ಪಾಕಿಸ್ತಾನದ ಮಾಜಿ ಕ್ರಿಕೆಟಿಗರಾದ ಅಫ್ರಿದಿ ಮತ್ತು ಶೋಯೆಬ್ ಅಖ್ತರ್ ಅವರೊಂದಿಗೆ ಸಂಬಂಧ ಹೊಂದಿದ್ದರು ಎಂದು ಹೇಳಲಾಗುತ್ತಿತ್ತು. ಆದರೆ ಪಾಕಿಸ್ತಾನಿ ಕ್ರಿಕೆಟಿಗರಿಬ್ಬರೂ ಈ ವದಂತಿಗಳನ್ನು ಅಲ್ಲಗಳೆದಿದ್ದಾರೆ. ಇವೆಲ್ಲವೂ ಕೆಟ್ಟ ಊಹಾಪೋಹಗಳು ಎಂದು ಅಫ್ರಿದಿ ಇತ್ತೀಚೆಗೆ ಮತ್ತೊಮ್ಮೆ ಸ್ಪಷ್ಟಪಡಿಸಿದ್ದಾರೆ. ಸೋನಾಲಿ ಬೇಂದ್ರೆ ಅವರು ಚಲನಚಿತ್ರ ನಿರ್ಮಾಪಕ ಗೋಲ್ಡಿ ಬೆಹ್ಲ್ ಅವರನ್ನು ವಿವಾಹವಾದರು. ಅವರಿಗೆ ರಣವೀರ್ ಬೆಹ್ಲ್ ಎಂಬ ಮಗನಿದ್ದಾನೆ. ಸೋನಾಲಿ ಬೇಂದ್ರೆ ಇತ್ತೀಚೆಗಷ್ಟೇ ಕ್ಯಾನ್ಸರ್ ಗೆದ್ದು ಬಂದಿದ್ದಾರೆ.



## ತಲೆನೋವಿನಿಂದ ಮುಕ್ತಿ ಪಡೆಯುವುದು ಹೇಗೆ?



### ಹೆಲ್ತ್ ಟಿಪ್ಸ್

ತಲೆನೋವಿನ ಸಮಸ್ಯೆಯನ್ನು ಕಡಿಮೆ ಮಾಡಲು ಸೇಬು ಮತ್ತು ಉಪ್ಪನ್ನು ಒಟ್ಟಿಗೆ ಸೇವಿಸಿ. ಸೇಬು ಮತ್ತು ಉಪ್ಪನ್ನು ಒಟ್ಟಿಗೆ ಸೇವಿಸುವುದರಿಂದ ತಲೆನೋವು ಕಡಿಮೆಯಾಗುತ್ತದೆ. ಇದಕ್ಕಾಗಿ, 1 ಸೇಬನ್ನು ಕತ್ತರಿಸಿಕೊಂಡು ಅದಕ್ಕೆ ಉಪ್ಪು ಉದುರಿಸಿ ತಿನ್ನಿ. ಇದರಿಂದ ತಲೆನೋವಿನಿಂದ ಮುಕ್ತಿ ಪಡೆಯಬಹುದು. ಲವಂಗದ ಸಹಾಯದಿಂದ, ತಲೆನೋವಿನ ಸಮಸ್ಯೆಯನ್ನು ಕಡಿಮೆ ಮಾಡಬಹುದು. ಲವಂಗದಲ್ಲಿರುವ ಗುಣಗಳು ತಲೆನೋವನ್ನು ನಿವಾರಿಸುವಲ್ಲಿ ಪರಿಣಾಮಕಾರಿ. ಇದಕ್ಕಾಗಿ ಕೆಲವು ಲವಂಗ ಮೊಗ್ಗುಗಳನ್ನು ತೆಗೆದುಕೊಂಡು ಅದನ್ನು ಪ್ಯಾನ್ ಮೇಲೆ ಬಿಸಿ ಮಾಡಿ. ಲವಂಗದ ಪರಿಮಳ ಬರಲು ಆರಂಭವಾದಾಗ ಅದನ್ನು ಕರವಸ್ತ್ರದಲ್ಲಿ ಕಟ್ಟಿಕೊಳ್ಳಿ. ನಂತರ ಪದೇ ಪದೇ ಇದರ ವಾಸನೆ ನೋಡುತ್ತಾ ಇರಿ. ಹೀಗೆ ಮಾಡಿದರೆ ತಲೆನೋವು ತಲೆನೋವು ಕಡಿಮೆ ಮಾಡಲು, ಬೆಚ್ಚಗಿನ ನೀರಿಗೆ ನಿಂಬೆ ರಸ ಬೆರೆಸಿ ಕುಡಿಯಿರಿ. ಇದರಿಂದ ಸಾಕಷ್ಟು ಲಾಭವಾಗುವುದು. ಇದಕ್ಕಾಗಿ 1 ಗ್ಲಾಸ್ ಬೆಚ್ಚಗಿನ ನೀರನ್ನು ತೆಗೆದುಕೊಳ್ಳಿ. ಅದರಲ್ಲಿ ಕೆಲವು ಹನಿ ನಿಂಬೆ ರಸವನ್ನು ಬೆರೆಸಿ ಸೇವಿಸಿ. ಹೀಗೆ ಮಾಡಿದರೆ ತಲೆನೋವಿನಿಂದ ಮುಕ್ತಿ ಸಿಗುವುದು.

ತುಳಸಿ ಮತ್ತು ಶುಂಠಿಯ ರಸದ ಮಿಶ್ರಣವು ತಲೆನೋವು ನಿವಾರಿಸಲು ಪ್ರಯೋಜನಕಾರಿಯಾಗಿದೆ. ಇದಕ್ಕಾಗಿ ತುಳಸಿ ಎಲೆಗಳನ್ನು ಚೆನ್ನಾಗಿ ರುಬ್ಬಿಕೊಂಡು ರಸ ತೆಗೆದುಕೊಳ್ಳಿ. ಈಗ ಈ ರಸವನ್ನು ಸ್ವಲ್ಪ ಬಿಸಿ ಮಾಡಿ ಸೇವಿಸಿ. ಇದರಿಂದ ತಲೆನೋವಿನಿಂದ ಪರಿಹಾರ ಸಿಗುತ್ತದೆ.

ತಲೆನೋವನ್ನು ಹೋಗಲಾಡಿಸಲು ಲವಂಗದ ಎಣ್ಣೆಯಿಂದ ತಲೆಗೆ ಮಸಾಜ್ ಮಾಡಿ.

ಇದು ನೋವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಲವಂಗದ ಎಣ್ಣೆಯನ್ನು ಹಣೆಯ ಮೇಲೆ ಹಚ್ಚಿ ಕೆಲವು ನಿಮಿಷಗಳ ಕಾಲ ಮಸಾಜ್ ಮಾಡಿ. ಇದರಿಂದ ತಲೆನೋವಿನಿಂದ ಮುಕ್ತಿ ಪಡೆಯಬಹುದು. ತಲೆನೋವಿನ ಸಮಸ್ಯೆಗಳನ್ನು ಕಡಿಮೆ ಮಾಡಲು, ಮೇಲೆ ಹೇಳಿದ ಪರಿಹಾರಗಳು ಪರಿಣಾಮಕಾರಿಯಾಗಿರುತ್ತವೆ. ಆದರೆ ನೋವು ತೀವ್ರವಾಗಿದ್ದರೆ ಖಂಡಿತವಾಗಿಯೂ ತಜ್ಞರ ಸಲಹೆಯನ್ನು ತೆಗೆದುಕೊಳ್ಳಿ.

## ಚರ್ಮದ ಆರೈಕೆ ಹೇಗಿರಬೇಕು ಗೊತ್ತಾ?

### ಬ್ಯೂಟಿ ಟಿಪ್ಸ್



ಪ್ರತಿಯೊಬ್ಬರೂ ವಿಭಿನ್ನ ಚರ್ಮದ ಪ್ರಕಾರ ಹೊಂದಿರುತ್ತಾರೆ ಮತ್ತು ಅದಕ್ಕೆ ತಕ್ಕಂತೆ ವಿಭಿನ್ನ ಚರ್ಮದ ಕಾಳಜಿಯ ಅಗತ್ಯತೆ ಇರುತ್ತದೆ. ಉದಾಹರಣೆಗೆ ಚರ್ಮದ ಪ್ರಕಾರಗಳು ಆಯ್ಲಿ ಸ್ಕಿನ್, ಡ್ರೈ ಸ್ಕಿನ್, ಸಂಯೋಜನೆ ಚರ್ಮ, ಸೂಕ್ಷ್ಮ ಚರ್ಮ, ಮೊಡವೆ ಪೀಡಿತ ಚರ್ಮ, ರೊಸಾಸಿಯ-ಪೀಡಿತ ಚರ್ಮ ಹೀಗೆ ಒಬ್ಬೊಬ್ಬರು ಒಂದೊಂದು ರೀತಿ ಚರ್ಮದ ಪ್ರಕಾರ ಹೊಂದಿರುತ್ತಾರೆ. ಈ ಚರ್ಮಕ್ಕೆ ಅನುಗುಣವಾಗಿ ನಿಮ್ಮ ಪ್ರತಿನಿತ್ಯದ ಆರೈಕೆ ಇರಬೇಕು. ಮುಖದ ಸ್ವಚ್ಛತೆ ನಿಮ್ಮ ಮೊದಲ ಆದ್ಯತೆಯಾಗಿರಲಿ. ಕ್ಲೆನ್ಸರ್ಗಳು ಮೇದೋಗ್ರಂಥಿಗಳ ಸ್ರಾವ, ಕೊಳಕು ಮತ್ತು ಮೇಕಪ್ ಅನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಎಣ್ಣೆಯುಕ್ತ ಚರ್ಮದಂತಹ ಸಮಸ್ಯೆಯನ್ನು ನಿವಾರಿಸುತ್ತದೆ. ಹೀಗಾಗಿ ನಿಮ್ಮ ಚರ್ಮದ ಆರೈಕೆಯಲ್ಲಿ ಕ್ಲೆನ್ಸರ್ ಬಳಸಿ ಎಣ್ಣೆಯುಕ್ತ ಅಥವಾ ಮೊಡವೆ ಚರ್ಮಕ್ಕಾಗಿ ಸ್ಯಾಲಿಸಿಲಿಕ್ ಆಮ್ಲ ಆಧಾರಿತ ಕ್ಲೆನ್ಸರ್ಗಳು, ರೊಸಾಸಿಯ ಚರ್ಮಕ್ಕಾಗಿ ಸೂಕ್ಷ್ಮ ಕ್ಲೆನ್ಸರ್ಗಳ ಬಳಕೆ ಉತ್ತಮ.

ದೇಹಕ್ಕೆ ನೀರು ಎಷ್ಟು ಅಗತ್ಯವೋ ಚರ್ಮಕ್ಕೆ ಮಾಯಿಶ್ಚರೈಸಿಂಗ್ ಕೂಡ ಅಷ್ಟೇ ಅತ್ಯಗತ್ಯ. ಎಣ್ಣೆಯುಕ್ತ ಚರ್ಮಕ್ಕೆ ಸ್ಯಾಲಿಸಿಲಿಕ್ ಆಮ್ಲ ಮತ್ತು ನಿಯಾಸಿನಮೈಡ್ ಹೊಂದಿರುವ ಮಾಯಿಶ್ಚರೈಸರ್ಗಳನ್ನು ಆರಿಸಿಕೊಳ್ಳಿ. ಮಾಯಿಶ್ಚರೈಸರ್ ಹೆಚ್ಚುವರಿ ಎಣ್ಣೆಯನ್ನು ಹೀರಿಕೊಳ್ಳಲು ಮತ್ತು ನಿಮ್ಮ ಚರ್ಮವನ್ನು ಅಂದಗೊಳಿಸುತ್ತದೆ.

ಒಣ ತ್ವಚೆಗೆ ಉತ್ತಮವಾದ ಮಾಯಿಶ್ಚರೈಸರ್ಗಳು ಸಾಮಾನ್ಯವಾಗಿ ಸೆರಮೈಡ್ಗಳು, ಗ್ಲಿಸರಿನ್, ಪ್ಯಾಂಥೆನಾಲ್ ಮತ್ತು ಹೈಲುರಾನಿಕ್ ಆಮ್ಲದಂತಹ ಹೈಡ್ರೇಟಿಂಗ್ ಪದಾರ್ಥಗಳನ್ನು ಹೊಂದಿರುತ್ತವೆ.

ಚರ್ಮದ ಆರೈಕೆಯಲ್ಲಿ ಸನ್ಸ್ಕ್ರೀನ್ ಪಾತ್ರ ಬಹುದೊಡ್ಡದು. ಇದು ಸೂರ್ಯನ ನೇರಾಳತೀತ ಕಿರಣಗಳಿಂದ ರಕ್ಷಣೆ ನೀಡುತ್ತದೆ. ದೈನಂದಿನ ಬಳಕೆಗಾಗಿ SPF 30 ಅಥವಾ ಹೆಚ್ಚಿನ ಸನ್ಸ್ಕ್ರೀನ್ ಅನ್ನು ಬಳಸಬಹುದು. ನೇರಳಾತೀತ ಕಿರಣಗಳಿಂದ ರಕ್ಷಣೆ ನೀಡುವ ವಿಶಾಲವಾದ ಸ್ಪೆಕ್ಟ್ರಮ್ ಸನ್ಸ್ಕ್ರೀನ್ ಅನ್ನು ಆರಿಸಿಕೊಳ್ಳುವುದು ಸೂಕ್ತ.

ಮಲಗುವ ಮುನ್ನ ಮೇಕಪ್ ಅನ್ನು ಮರೆಯದೆ ತೆಗೆಯಿರಿ. ಈ ಅಭ್ಯಾಸ ಕ್ರಮ ನಿಮ್ಮ ಉತ್ತಮ ಚರ್ಮಕ್ಕೆ ಸಹಾಯಕಾರಿ. ನಿಮಗೆ ಹೊಂದಿಕೊಳ್ಳುವಂತಹ ಮೇಕಪ್ ರಿಮೂವರ್ಗಳನ್ನು ಬಳಸಿ ನಿಮ್ಮ ಚರ್ಮವನ್ನು ಸ್ವಚ್ಛಗೊಳಿಸಬೇಕು.

ಚರ್ಮದ pH ಅನ್ನು ಸಮತೋಲನಗೊಳಿಸಲು ಟೋನರ್ಗಳು ಸಹಾಯಕವಾಗಿದ್ದರೂ, ತೇವಾಂಶವನ್ನು ಹೀರಿಕೊಳ್ಳುತ್ತವೆ ಎಂದು ತಜ್ಞರು ಅಭಿಪ್ರಾಯ ಪಡುತ್ತಾರೆ. ಆದರೆ ಇವುಗಳನ್ನು ಸೂಕ್ತವಾಗಿ ಬಳಸುವುದರಿಂದ ಚರ್ಮದ ಆರೈಕೆ ದಿನಚರಿಗಳಿಗೆ ಸಹಾಯಕಾರಿ. ಸನ್ಸ್ಕ್ರೀನ್ ಅನ್ನು ಅನ್ವಯಿಸುವ ಮೊದಲು ಬೆಳಗ್ಗೆ ವಿಟಮಿನ್ ಸಿ ಸೀರಮ್ ಅನ್ನು ಬಳಸುವುದು UV ಕಿರಣಗಳಿಂದ ಹೆಚ್ಚುವರಿ ರಕ್ಷಣೆಯನ್ನು ಒದಗಿಸುತ್ತದೆ.

## ಎಂ. ಐ. ಟಿ. ಬೆಂಗಳೂರಿನ ಸ್ವಾಯತ್ತ ಮೊಬಿಲಿಟಿ ಹಬ್ ಉದ್ಘಾಟನೆ



ಸಾರಿಗೆಯ ಭವಿಷ್ಯದಲ್ಲಿ ಒಂದು ಪ್ರಮುಖ ಜಿಗಿತವನ್ನು ಗುರುತಿಸುವ ಹೆಗ್ಗುರುತಿನ ಘಟನೆಯಲ್ಲಿ, ಸ್ವಾಯತ್ತ ಚಲನಶೀಲತೆಯ ಶ್ರೇಷ್ಠತೆಯ ಕೇಂದ್ರವನ್ನು ಇಂದು ಎಂಐಟಿ ಬೆಂಗಳೂರಿನಲ್ಲಿ ಎಐಸಿಟಿಇ ಅಧ್ಯಕ್ಷ ಡಾ. ಟಿ. ಜಿ. ಸೀತಾರಾಮ್ ಉದ್ಘಾಟಿಸಿದರು. ಈ ಮಹತ್ವಾಕಾಂಕ್ಷೆಯ ಉಪಕ್ರಮವು ಎಂಐಟಿ ಬೆಂಗಳೂರು, ಡೆಸಿಬೆಲ್ ಲ್ಯಾಬ್ ಪ್ರೈವೇಟ್ ಲಿಮಿಟೆಡ್ ನಡುವಿನ ಸಹಯೋಗವಾಗಿದೆ. ಲಿಮಿಟೆಡ್, ಮತ್ತು ವಿರ್ಯಾ ಎಐ (ಮೈನಿ ಗ್ರೂಪ್) ಸ್ವಾಯತ್ತ ಚಲನಶೀಲತೆ ತಂತ್ರಜ್ಞಾನಗಳಲ್ಲಿ ಅತ್ಯಾಧುನಿಕ ಪ್ರಗತಿಗೆ ಚಾಲನೆ ನೀಡಲು ಸಜ್ಜಾಗಿದೆ.

ಕೇಂದ್ರದ ಸಹಯೋಗದೊಂದಿಗೆ ವಿರ್ಯಾ ಎಐ ಜಂಟಿಯಾಗಿ ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಿದ ಅತ್ಯಾಧುನಿಕ ಸ್ವಾಯತ್ತ ಆರು ಆಸನಗಳ ಎಲೆಕ್ಟ್ರಿಕ್ ಬಗ್ಗಿಯನ್ನು ಅನಾವರಣಗೊಳಿಸುವುದು ಈ ಕಾರ್ಯಕ್ರಮದ ಪ್ರಮುಖ ಅಂಶವಾಗಿತ್ತು. ಈ ಅನಾವರಣವು ಸುರಕ್ಷಿತ, ಚುರುಕಾದ ಮತ್ತು ಸುಸ್ಥಿರ ಪರಿಹಾರಗಳನ್ನು ನೀಡುವ ಮೂಲಕ ಸಾರಿಗೆಯನ್ನು ಪರಿವರ್ತಿಸುವ ಸ್ವಾಯತ್ತ ಚಲನಶೀಲತೆಯ ಸಾಮರ್ಥ್ಯವನ್ನು ಒತ್ತಿಹೇಳುತ್ತದೆ. ಎಲ್ಐಡಿಎಆರ್ ಸಂವೇದಕಗಳು, ರಾಡಾರ್, ಉನ್ನತ-ರೆಸಲ್ಯೂಶನ್ ಕ್ಯಾಮೆರಾಗಳು ಮತ್ತು ಅತ್ಯಾಧುನಿಕ ಸಿಮ್ಯುಲೇಶನ್ ಸಾಫ್ಟ್ವೇರ್ನಂತಹ ಸುಧಾರಿತ ಸಾಧನಗಳನ್ನು ಹೊಂದಿರುವ ಈ ಕೇಂದ್ರವು ಸ್ವಾಯತ್ತ ವಾಹನ ವ್ಯವಸ್ಥೆಗಳಲ್ಲಿ ನಾವೀನ್ಯತೆಯನ್ನು ಬೆಳೆಸುವ ಗುರಿಯನ್ನು ಹೊಂದಿದೆ. ಸುರಕ್ಷಿತ ಮತ್ತು ವಿಶ್ವಾಸಾರ್ಹ ಸ್ವಾಯತ್ತ ಚಲನಶೀಲತೆ ಪರಿಹಾರಗಳ ಮೇಲೆ ಕೇಂದ್ರೀಕರಿಸುವ ಮೂಲಕ, ಇದು ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಉದ್ಯಮದ ವೃತ್ತಿಪರರಿಗೆ ಅದ್ಭುತ ಯೋಜನೆಗಳಲ್ಲಿ ಸಹಕರಿಸಲು ಅನುವು ಮಾಡಿಕೊಡುತ್ತದೆ, ಈ ಪರಿವರ್ತಕ ಉದ್ಯಮದಲ್ಲಿ ಭಾರತದ ಸ್ಥಾನವನ್ನು ಮುಂಚೂಣಿಯಲ್ಲಿರಿಸುತ್ತದೆ.

ಈ ಕೇಂದ್ರವನ್ನು ಡೆಸಿಬೆಲ್ ಲ್ಯಾಬ್ ಪ್ರೈವೇಟ್ ಲಿಮಿಟೆಡ್ನ ಸಹಭಾಗಿತ್ವದಲ್ಲಿ ಸ್ಥಾಪಿಸಲಾಗಿದೆ. ನಾಲ್ಕು ಚಕ್ರ ವಾಹನಗಳಿಗೆ ಸ್ವಾಯತ್ತ ಚಲನಶೀಲತೆ ಪ್ರಯೋಗಾಲಯವನ್ನು ನಿರ್ಮಿಸುವಲ್ಲಿ ಪರಿಣತಿ ಹೊಂದಿರುವ ಲಿಮಿಟೆಡ್ ಮತ್ತು ಸ್ವಾಯತ್ತ ಬಗ್ಗಿಯನ್ನು ಅಭಿವೃದ್ಧಿಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ ವಿರ್ಯಾ ಎಐ (ಮೈನಿ ಗ್ರೂಪ್) ಇಂದು ಅನಾವರಣಗೊಳಿಸಲಾಯಿತು. ಎರಡೂ ಸಹಯೋಗಗಳು ನೈಜ-ಪ್ರಪಂಚದ ಸವಾಲುಗಳಿಗೆ ಪರಿಣಾಮಕಾರಿ ಪರಿಹಾರಗಳನ್ನು ಸೃಷ್ಟಿಸಲು ಶೈಕ್ಷಣಿಕ ಮತ್ತು ಉದ್ಯಮದ ನಡುವಿನ ಅಂತರವನ್ನು ಕಡಿಮೆ ಮಾಡುವ ಕೇಂದ್ರದ ಒತ್ತುಗಳನ್ನು ಪ್ರತಿಬಿಂಬಿಸುತ್ತವೆ.

ಈ ಉಪಕ್ರಮದ ಬಗ್ಗೆ ತಮ್ಮ ದೃಷ್ಟಿಕೋನವನ್ನು ವ್ಯಕ್ತಪಡಿಸಿದ ಎಂಎಹೆಚ್ಇಯ ಸಹ-ಉಪಕುಲಪತಿ ಪ್ರೊ. ಮಧು ವೀರರಾಘವನ್, ಸ್ವಾಯತ್ತ ಚಲನಶೀಲತೆಯ ಶ್ರೇಷ್ಠತೆಯ ಕೇಂದ್ರವು ನಾವೀನ್ಯತೆ ಮತ್ತು ಅತ್ಯಾಧುನಿಕ ಸಂಶೋಧನೆಗೆ ಎಂಎಹೆಚ್ಇಯ ಅಚಲ ಬದ್ಧತೆಗೆ ಸಾಕ್ಷಿಯಾಗಿದೆ. ಈ ಉಪಕ್ರಮವು ಸುಸ್ಥಿರ ಮತ್ತು ಸುರಕ್ಷಿತ ಚಲನಶೀಲತೆ ವ್ಯವಸ್ಥೆಗಳ ಅಭಿವೃದ್ಧಿಗೆ ಕೊಡುಗೆ ನೀಡುವ ಜೊತೆಗೆ ಸಾರಿಗೆಯಲ್ಲಿ ಪರಿವರ್ತಕ ಪರಿಹಾರಗಳನ್ನು ಸೃಷ್ಟಿಸಲು ನಮಗೆ ಅನುವು ಮಾಡಿಕೊಡುತ್ತದೆ. ಈ ದೃಷ್ಟಿಕೋನವನ್ನು ಸಾಕಾರಗೊಳಿಸಲು ದಣಿವರಿಯದೆ ಶ್ರಮಿಸಿದ ನಮ್ಮ ಬೋಧಕವರ್ಗ ಮತ್ತು ಪಾಲುದಾರರ ಬಗ್ಗೆ ನನಗೆ ಹೆಮ್ಮೆ ಇದೆ .

ಎಂ. ಐ. ಟಿ. ಬೆಂಗಳೂರಿನ ನಿರ್ದೇಶಕ ಡಾ. ಐವೆನ್ ಜೋಸ್, ಇಂದು ಎಂ. ಐ. ಟಿ. ಬೆಂಗಳೂರಿಗೆ ಮಹತ್ವದ ಮೈಲಿಗಲ್ಲಾಗಿದೆ. ಕೇಂದ್ರದ ಉದ್ಘಾಟನೆಯು ಸುಧಾರಿತ ತಂತ್ರಜ್ಞಾನ, ಶೈಕ್ಷಣಿಕ ನಾಯಕತ್ವ ಮತ್ತು ಉದ್ಯಮದ ಪರಿಣತಿಯ ಸಮ್ಮಿಳನವನ್ನು ಪ್ರತಿನಿಧಿಸುತ್ತದೆ. ಈ ಕೇಂದ್ರದೊಂದಿಗೆ, ಸ್ವಾಯತ್ತ ಚಲನಶೀಲತೆಯ ಸವಾಲುಗಳನ್ನು ಪರಿಹರಿಸುವುದಲ್ಲದೆ, ಶೈಕ್ಷಣಿಕ ಮತ್ತು ಉದ್ಯಮದ ನಡುವಿನ ಸಹಯೋಗಕ್ಕೆ ದಾರಿದೀಪವಾಗಿ ಕಾರ್ಯನಿರ್ವಹಿಸುವ ನಾವೀನ್ಯತೆಗಾಗಿ ವೇದಿಕೆಯನ್ನು ರಚಿಸುವ ಗುರಿಯನ್ನು ನಾವು ಹೊಂದಿದ್ದೇವೆ. ಇಂದು ಅನಾವರಣಗೊಳಿಸಲಾದ ಸ್ವಾಯತ್ತ ಬಗ್ಗಿಯು ಈ ಕೇಂದ್ರವು ಏನನ್ನು ಸಾಧಿಸಬಹುದು ಎಂಬುದರ ಪ್ರಾರಂಭವಾಗಿದೆ. ಕೇಂದ್ರವು ಸಂವೇದಕ ವಿನ್ಯಾಸ, ಕ್ರಮಾವಳಿ ಅಭಿವೃದ್ಧಿ ಮತ್ತು ಸ್ವಾಯತ್ತ ಸೈಬರ್ ಭದ್ರತಾ ಸ್ಟ್ಯಾಕ್ಗಾಗಿ ವಿಶೇಷ ಪ್ರಯೋಗಾಲಯವನ್ನು ಸಹ ಪೂರೈಸುತ್ತದೆ, ಇದು ಸ್ವಾಯತ್ತ ಸಹಾಯಕ ತಂತ್ರಜ್ಞಾನದಲ್ಲಿ ಅದರ ಅಭಿವೃದ್ಧಿಯನ್ನು ಕೈಗೊಳ್ಳಲು ಯೋಜಿಸಿದೆ

ಕೇಂದ್ರದ ನೇತೃತ್ವವನ್ನು ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಎಂಜಿನಿಯರಿಂಗ್ (ಇಸಿಇ) ವಿಭಾಗದ ಮುಖ್ಯಸ್ಥರಾದ ಡಾ. ಉಜ್ವಲ್ ವರ್ಮಾ ಮತ್ತು ಐಕ್ಯೂಎಸಿಯ ಸಹಾಯಕ ನಿರ್ದೇಶಕ ಡಾ. ಮಹೀಪಾಲ್ ಬುಕ್ಯಾ ವಹಿಸಿದ್ದಾರೆ. ಈ ಸೌಲಭ್ಯವು ವಿದ್ಯಾರ್ಥಿಗಳು ಮತ್ತು ವೃತ್ತಿಪರರಿಗೆ ಸಮಾನವಾಗಿ ಸಂಶೋಧನೆ ಮತ್ತು ತರಬೇತಿ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ, ಸಂಕೀರ್ಣ ಸಂಚಾರ ಪರಿಸರದಲ್ಲಿ ಅಲ್ಗಾರಿದಮ್ ಅಭಿವೃದ್ಧಿ, ವಾಹನ ಗ್ರಹಿಕೆ ಮತ್ತು ನ್ಯಾವಿಗೇಷನ್ ಮೇಲೆ ಕೇಂದ್ರೀಕರಿಸುತ್ತದೆ. ಇದು ಸ್ವಾಯತ್ತ ವಾಹನ ತಂತ್ರಜ್ಞಾನಗಳಲ್ಲಿ ತಮ್ಮ ಕಾರ್ಯಪಡೆಯ ಕೌಶಲ್ಯವನ್ನು ಹೆಚ್ಚಿಸಲು ಉದ್ಯಮದ ಪಾಲುದಾರರೊಂದಿಗೆ ಸಹಯೋಗವನ್ನು ಸುಗಮಗೊಳಿಸುತ್ತದೆ.

ನಗರದ ದಟ್ಟಣೆ, ಸಂಚಾರ ಸುರಕ್ಷತೆ ಮತ್ತು ಸುಸ್ಥಿರತೆಯಂತಹ ಜಾಗತಿಕ ಸವಾಲುಗಳನ್ನು ಎದುರಿಸುವ ಪರಿಹಾರಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೇಂದ್ರದ ಪ್ರಯತ್ನಗಳು ಸಜ್ಜಾಗಿರುತ್ತವೆ, ಜೊತೆಗೆ ಸ್ವಾಯತ್ತ ಚಲನಶೀಲತೆಯಲ್ಲಿ ಮುಂದಿನ ಪೀಳಿಗೆಯ ನಾವೀನ್ಯಕಾರರು ಮತ್ತು ಸಂಶೋಧಕರನ್ನು ಪೋಷಿಸುತ್ತವೆ.ಡೆಸಿಬೆಲ್ ಲ್ಯಾಬ್ ಪ್ರೈವೇಟ್ ಲಿಮಿಟೆಡ್ನಂತಹ ಪ್ರಮುಖ ಉದ್ಯಮ ಪಾಲುದಾರರ ಬೆಂಬಲದೊಂದಿಗೆ. ಎಂ. ಎ. ಎಚ್. ಇ. ಮತ್ತು ಎಂ. ಐ. ಟಿ. ಬೆಂಗಳೂರಿನ ನಾಯಕತ್ವದೊಂದಿಗೆ, ಈ ಉಪಕ್ರಮವು ಭಾರತದ ತಾಂತ್ರಿಕ ಭೂದೃಶ್ಯ ಮತ್ತು ಅದರಾಚೆಗೂ ಗಮನಾರ್ಹ ಕೊಡುಗೆಗಳನ್ನು ನೀಡುವ ನಿರೀಕ್ಷೆಯಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಕುಟುಂಬದಲ್ಲಿ ಮುಖ್ಯಸ್ಥರಿಂದ ಬೋಧನೆ, ಉತ್ತಮ ವ್ಯಾಪಾರ ವಹಿವಾಟು, ದಾಂಪತ್ಯದಲ್ಲಿ ಪ್ರೀತಿ, ವಿಪರೀತ ಖರ್ಚು.

**ವೃಷಭ:** ವಿವಾದಾತ್ಮಕ ವಿಷಯಗಳಿಂದ ದೂರವಿರಿ, ಆರ್ಥಿಕ ಬಿಕ್ಕಟ್ಟು, ಸಹೋದರರಿಂದ ಕಲಹ ಸಾಧ್ಯತೆ.

**ಮಿಥುನ:** ಪರರಿಂದ ಮೋಸ, ಮನಸ್ಸಿನಲ್ಲಿ ಗೊಂದಲ, ಮಹಿಳೆಯರಿಗೆ ಶುಭ, ಸಾಲ ಮರುಪಾವತಿ, ವಾಹನ ಯೋಗ

**ಕಟಕ:** ಆದಾಯಕ್ಕಿಂತ ಖರ್ಚು ಜಾಸ್ತಿ, ಋಣ ಭಾದೆ, ಅನಾರೋಗ್ಯ, ದೃಷ್ಟಿ ದೋಷ, ಚಂಚಲ ಮನಸ್ಸು,ಸಂತಾನ.

**ಸಿಂಹ:** ಕಾರ್ಯಕ್ಷೇತ್ರದಲ್ಲಿ ಉತ್ತಮ ಫಲ, ಯಾರನ್ನು ಹೆಚ್ಚಾಗಿ ನಂಬಬೇಡಿ, ಸ್ವಂತ ವಿಷಯಗಳ ಕಡೆ ಗಮನ ಕೊಡಿ.

**ಕನ್ಯಾ:** ಬಂಧುಗಳ ಭೇಟಿ, ಲ್ಯಾಂಡ್ ಡೆವಲಪರ್‌ನವರಿಗೆ ಲಾಭ, ದೂರಾಲೋಚನೆ, ಸಣ್ಣ ಮಾತಿನಿಂದ ಕಲಹ ಎಚ್ಚರ.

**ತುಲಾ:** ನಾನಾ ರೀತಿಯ ಸಂಕಷ್ಟ, ಅವಕಾಶಗಳು ಕೈತಪ್ಪುವುದು, ಮನಕ್ಲೇಶ, ಶರೀರದಲ್ಲಿ ತಳಮಳ, ದ್ರವ್ಯ ಲಾಭ.

**ವೃಶ್ಚಿಕ:** ವಿದ್ಯಾರ್ಥಿಗಳಲ್ಲಿ ಉತ್ತಮ ಪ್ರಗತಿ, ದಾಯಾದಿ ಕಲಹ, ಕೋಪ ಜಾಸ್ತಿ, ಕಾರ್ಯ ವಿಕಲ್ಪ, ಆಲಸ್ಯ ಮನೋಭಾವ.

**ಧನಸ್ಸು:** ಅನ್ಯಾಯವನ್ನ ವಿರೋಧಿಸುವಿರಿ, ತಾಳ್ಮೆ ಅತ್ಯಗತ್ಯ, ಸ್ನೇಹ ವೃದ್ಧಿ, ಹಿತ ಶತ್ರು ಭಾದೆ, ಹಿರಿಯರಲ್ಲಿ ಭಕ್ತಿ.

**ಮಕರ:** ಹಣದ ವಿಷಯದಲ್ಲಿ ಜಾಗ್ರತೆ ವಹಿಸಿ, ಭೋಗ ವಸ್ತು ಖರೀದಿ, ಮಕ್ಕಳಿಂದ ನೋವು.

**ಕುಂಭ:** ವಿನಾಕಾರಣ ದ್ವೇಷ, ಹೊಗಳಿಕೆಗೆ ಬೇಗ ವಶವಾಗುವಿರಿ, ಅನಿರೀಕ್ಷಿತ ಧನ ಲಾಭ, ವಾಹನದಿಂದ ತೊಂದರೆ.

**ಮೀನ:** ಕೋಪ ಜಾಸ್ತಿ,ಅಷ್ಟೇ ಬೇಗ ಶಾಂತವಾಗುವಿರಿ, ಮಾತಿನಲ್ಲಿ ಸೋಲುವುದಿಲ್ಲ, ಮಾರ್ಗದರ್ಶನದಿಂದ ಯಶಸ್ಸು.

## ವಿಶ್ವ ಮಾನವ ಹಕ್ಕುಗಳ ದಿನ




ಇಂದು ವಿಶ್ವ ಮಾನವ ಹಕ್ಕುಗಳ ದಿನ. ಪ್ರತಿ ವರ್ಷ ಡಿಸೆಂಬರ್ 10 ರಂದು ವಿಶ್ವ ಮಾನವ ಹಕ್ಕುಗಳ ದಿನವನ್ನು ಆಚರಣೆ ಮಾಡಲಾಗುತ್ತದೆ. ಪ್ರತಿ ವರ್ಷ ಹೊಸ ಹೊಸ ಥೀಮ್ ನೊಂದಿಗೆ ಈ ದಿನವನ್ನು ಆಚರಣೆ ಮಾಡಲಾಗುತ್ತದೆ.

ಈ ಭೂಮಿಯ ಮೇಲೆ ಪ್ರತಿಯೊಂದು ಜೀವಿಗಳಿಗೂ ಬದುಕುವ ಹಕ್ಕಿದೆ. ಸ್ವತಂತ್ರವಾಗಿ ತಮಗೆ ಬೇಕಾದ ಹಾಗೇ, ಬೇಕಾದ್ದನ್ನು ತಿನ್ನುವ, ವಾಸಿಸುವ, ಎಲ್ಲೆಂದರಲ್ಲಿ ಓಡಾಡುವ ಹಕ್ಕಿದೆ. ಇದನ್ನೇ ಮಾನವ ಹಕ್ಕುಗಳು ಎಂದು ಕರೆಯಲಾಗುತ್ತದೆ.

ಭೂಮಿಯ ಮೇಲಿರುವ ಪ್ರತಿಯೊಬ್ಬ ಮನುಷ್ಯನಿಗೆ ಮುಖ್ಯವಾಗಿ ಬೇಕಾಗಿರುವುದು ಆಹಾರ, ಉಡುಪು ಮತ್ತು ವಸತಿ. ಇವು ಮನುಷ್ಯನ ಮೂಲಭೂತ ಹಕ್ಕುಗಳು. ಇವುಗಳಿಲ್ಲದೆ ಮನುಷ್ಯನ ಜೀವನ ಎಂದಿಗೂ ಕಷ್ಟವೇ. ಈ ಮೂಲಭೂತ ಸವಲತ್ತುಗಳನ್ನು ಪಡೆಯುವುದು ಪ್ರತಿಯೊಬ್ಬ ಪ್ರಜೆಯ ಜನ್ಮಸಿದ್ಧ ಹಕ್ಕಾಗಿದೆ.ಆದರೆ ಬಹುತೇಕ ಸಂದರ್ಭಗಳಲ್ಲಿ ಮನುಷ್ಯನ ಈ ಮೂಲಭೂತ ಹಕ್ಕುಗಳನ್ನು ಧಮನಿಸುವ ಪ್ರಯತ್ನಗಳೇ ನಡೆಯುತ್ತಿವೆ. ಇದು ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ. ಇತರರ ಬದುಕಿನ ಹಕ್ಕನ್ನು ಕಸಿಯುವುದು, ಅವರಿಗೆ ಹಿಂಸೆ ನೀಡುವುದು ಇತ್ಯಾದಿ ಇದರ ವ್ಯಾಪ್ತಿಯೊಳಗೆ ಬರುತ್ತವೆ.

ಪ್ರತಿಯೊಬ್ಬ ಮನುಷ್ಯನ ಈ ಹಕ್ಕುಗಳು ಸಂರಕ್ಷಿಸಲ್ಪಡಬೇಕು, ಅವರನ್ನು ಯಾರು ಧಮನಿಸಬಾರದು, ಮನುಷ್ಯನಿಗೆ ಕನಿಷ್ಠ ಅಗತ್ಯತೆಗಳು ಸಿಗಬೇಕು, ಅವರ ಹಕ್ಕುಗಳಿಗೆ ಗೌರವ ಸಿಗಬೇಕು ಎಂಬ ಉದ್ದೇಶದಿಂದ ಪ್ರತಿವರ್ಷ ಡಿಸೆಂಬರ್ 10 ರಂದು ವಿಶ್ವ ಮಾನವ ಹಕ್ಕುಗಳ ದಿನವನ್ನಾಗಿ ಜಗತ್ತಿನೆಲ್ಲೆಡೆ ಆಚರಿಸಲಾಗುತ್ತದೆ.

ನಾಗರಿಕ ಸಮಾಜದ ಸ್ವಾತಂತ್ರ್ಯವನ್ನು ಎತ್ತಿ ಹಿಡಿಯುವ ಉದ್ದೇಶದಿಂದ ಘೋಷಿಸಲಾದ ಮಾನವ ಹಕ್ಕುಗಳನ್ನು 1948 ರಲ್ಲಿ ವಿಶ್ವಸಂಸ್ಥೆ ಅಂಗೀಕರಿಸಿತು. ಅಂದಿನಿಂದ ಡಿಸೆಂಬರ್ 10 ರಂದು ವಿಶ್ವ ಮಾನವ ಹಕ್ಕುಗಳ ದಿನವನ್ನು ಆಚರಿಸಲಾಗುತ್ತಿದೆ. 1950 ರ ಡಿಸೆಂಬರ್ 10 ರಂದು ಪ್ಯಾರಿಸ್ನಲ್ಲಿ ನಡೆದ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದಲ್ಲಿ ಮಾನವ ಹಕ್ಕುಗಳ ಬಗ್ಗೆ ಉಲ್ಲೇಖಿಸಲಾಯಿತು. ಯಾವುದೇ ಧರ್ಮ, ಜಾತಿ, ಲಿಂಗ, ಜನಾಂಗ, ಬಣ್ಣ, ಭಾಷೆ, ರಾಜಕೀಯ ಅಥವಾ ಇತರೆ ಅಭಿಪ್ರಾಯಗಳು, ಸ್ಥಾನಮಾನವನ್ನು ಲೆಕ್ಕಿಸದೆ ಎಲ್ಲಾ ಮಾನವರು ಸಮಾನರು. ಎಲ್ಲರೂ ಸಂಪೂರ್ಣ ಹಕ್ಕನ್ನು ಹೊಂದಿದ್ದಾರೆ ಎಂಬುದನ್ನು ಸೂಚಿಸುವುದು ಮಾನವ ಹಕ್ಕುಗಳ ಮೂಲ ಉದ್ದೇಶವಾಗಿದೆ.

# ಆಸ್ಟರಿಯಾ ಏರೋಸ್ಪೇಸ್ ನಿಂದ ಎಟಿ- 15 VTOL ಡ್ರೋನ್ ಪೂರೈಕೆ

**ದೆಹಲಿ:** ಆಸ್ಟರಿಯಾ ಏರೋಸ್ಪೇಸ್ ಎಂಬುದು ಸಂಪೂರ್ಣವಾಗಿ ಎಲ್ಲವನ್ನೂ ದೇಶೀಯವಾಗಿ ಸಿದ್ಧಪಡಿಸಿ, ಉತ್ಪಾದನೆ ಮಾಡುತ್ತಿರುವ ಡ್ರೋನ್ ತಂತ್ರಜ್ಞಾನ ಕಂಪನಿಯಾಗಿದೆ. ಈ ಕಂಪನಿಯು ಇದೀಗ ಪ್ರಮುಖ ಘೋಷಣೆಯೊಂದನ್ನು ಮಾಡಿದೆ. ಅದರ ಪ್ರಕಾರ, ಕಂಪನಿಯು ತನ್ನ ಎಟಿ- 15 (ಎಟಿ-15) ವರ್ಟಿಕಲ್ ಟೇಕ್ಆಫ್ ಅಂಡ್ ಲ್ಯಾಂಡಿಂಗ್ ಡ್ರೋನ್ಗಳ ಅತಿದೊಡ್ಡ ಒಪ್ಪಂದವನ್ನು ಭಾರತೀಯ ಸೇನೆಗೆ ಯಶಸ್ವಿಯಾಗಿ ತಲುಪಿಸಿರುವುದಾಗಿ ತಿಳಿಸಿದೆ. ಈ ಮಹತ್ವದ ಮೈಲುಗಲ್ಲು ''ಆತ್ಮನಿರ್ಭರ್ ಭಾರತ್'' ಎಂಬ ಸಂಕಲ್ಪಕ್ಕೆ ಪೂರಕವಾದ ಮತ್ತು ರಕ್ಷಣಾ ಹಾಗೂ ತಾಯ್ನಾಡಿನ ಭದ್ರತಾ ಸಂಸ್ಥೆಗಳ ಕಠಿಣವಾದ ಅವಶ್ಯಕತೆಗಳೊಂದಿಗೆ ತಂತ್ರಜ್ಞಾನದಲ್ಲಿ ಅತ್ಯಾಧುನಿಕವಾದದ್ದನ್ನು ಪೂರೈಸುವ ಆಸ್ಟರಿಯಾದ ಬದ್ಧತೆಯನ್ನು ಒತ್ತಿಹೇಳುತ್ತದೆ. ಭಾರತೀಯ ರಕ್ಷಣಾ ಸಚಿವಾಲಯಕ್ಕೆ ಆಸ್ಟರಿಯಾದಿಂದ ಸ್ಥಳೀಯವಾಗಿ ಅಭಿವೃದ್ಧಿಪಡಿಸಿದ ಎಟಿ- 15 ಕಣ್ಗಾವಲು ಡ್ರೋನ್ಗಳ ಈ ವಿತರಣೆಯು ನಮ್ಮ ರಕ್ಷಣಾ ಪಡೆಗಳ ಬದಲಾವಣೆ ಕಾಣುತ್ತಿರುವ ಅಗತ್ಯಗಳನ್ನು ಪೂರೈಸುವುದಕ್ಕೆ ನಮ್ಮ ಬಲವಾದ ಬೆಂಬಲವನ್ನು ಪ್ರದರ್ಶಿಸುತ್ತದೆ,'' ಎಂದು ಆಸ್ಟರಿಯಾ ಏರೋಸ್ಪೇಸ್ನ ನಿರ್ದೇಶಕ ಮತ್ತು ಸಹ-ಸಂಸ್ಥಾಪಕ ನೀಲ್ ಮೆಹ್ತಾ ಹೇಳಿದ್ದಾರೆ. ಈ 'ಮ್ಯಾನ್ ಪೋರ್ಟಬಲ್' ಡ್ರೋನ್ಗಳು ಹೆಚ್ಚಿನ ಸುಧಾರಿತ ವೈಶಿಷ್ಟ್ಯಗಳೊಂದಿಗೆ ಅಂದರೆ, ಎತ್ತರದ ಪ್ರದೇಶಗಳಲ್ಲಿ ಅತ್ಯುತ್ತಮ ಫ್ಲೈಟ್ ಹಾರಾಟ ಕಾರ್ಯಕ್ಷಮತೆ, ಇಂಟಿಗ್ರೇಟೆಡ್ ಹೈ-ರೆಸಲ್ಯೂಷನ್ ಹಗಲು ಮತ್ತು ರಾತ್ರಿ ಕ್ಯಾಮೆರಾಗಳು, ನಿಖರ ಶಸ್ತ್ರಾಸ್ತ್ರ ಗುರಿಗೆ ಬೆಂಬಲ ನೀಡುವಂಥದ್ದಾಗಿದೆ. ಭಾರತೀಯ ಸೇನೆಯ ಕಣ್ಗಾವಲು ಸಾಮರ್ಥ್ಯವನ್ನು ಹೆಚ್ಚಿಸುವಲ್ಲಿ ಇದು ನಿರ್ಣಾಯಕ ಪಾತ್ರ ವಹಿಸುತ್ತದೆ ಎಂಬ ವಿಶ್ವಾಸ ನಮಗಿದೆ,'' ಎಂದಿದ್ದಾರೆ.

ವಿಶಿಷ್ಟವಾಗಿ ಸಂಯೋಜನೆಗೊಂಡ ರೆಕ್ಕೆ ವಿನ್ಯಾಸದೊಂದಿಗೆ ಆಸ್ಟರಿಯಾದ ಎಟಿ-15 ಡ್ರೋನ್ ಫ್ಲೈಟ್ ಕಾರ್ಯಕ್ಷಮತೆಗೆ ಅತ್ಯುತ್ತಮ ಗುಣಮಟ್ಟದ ಏರೋಡೈನಮಿಕ್ಸ್ ಒದಗಿಸುತ್ತದೆ ಮತ್ತು ಸಮುದ್ರ ಮಟ್ಟಕ್ಕಿಂತ 6000 ಮೀಟರ್ ಎತ್ತರದ ತನಕ ಕಾರ್ಯ ನಿರ್ವಹಿಸುವುದಕ್ಕೆ ಅತಿ ಹೆಚ್ಚಿನ ಗಾಳಿಗೆ ಪ್ರತಿರೋಧವನ್ನು ಒಡ್ಡಲು ಸಾಧ್ಯವಿದೆ. ಇದರ ಲಂಬವಾದ ಟೇಕ್ಆಫ್ ಮತ್ತು ಲ್ಯಾಂಡಿಂಗ್ ಸಾಮರ್ಥ್ಯವು ಸೀಮಿತವಾದ



ಪ್ರವೇಶ ಹಾಗೂ ನಿರ್ಗಮನ ಪ್ರದೇಶದಿಂದಲೂ ವಾಪಸ್ ಪಡೆದುಕೊಳ್ಳಲು ಸಹಾಯ ಮಾಡುತ್ತದೆ. ಎಟಿ-15 120 ನಿಮಿಷಗಳವರೆಗೆ ಹಾರಾಟದ ಸಮಯವನ್ನು ಹೊಂದಿದೆ ಮತ್ತು 20 ಕಿಮೀ ದೃಷ್ಟಿ ರೇಖೆಯ ವ್ಯಾಪ್ತಿಯನ್ನು ಹೊಂದಿದೆ. ಇದು ದೀರ್ಘಾವಧಿಯ ಕಣ್ಗಾವಲು ಹಾಗೂ ಮಿಲಿಟರಿ ಕಾರ್ಯಾಚರಣೆಗಳನ್ನು ವಿಶಾಲ ವ್ಯಾಪ್ತಿಯ ಪ್ರದೇಶಗಳಲ್ಲಿ ಖಾತ್ರಿಪಡಿಸುತ್ತದೆ. ಡ್ರೋನ್ ನಲ್ಲಿ ಹೆಚ್ಚಿನ ಜೂಮ್ ಸಾಮರ್ಥ್ಯದೊಂದಿಗೆ ಸಂಯೋಜಿತ ಇಒ-ಐಆರ್ ಪೇಲೋಡ್ ಇದ್ದು, ಹಗಲು ಮತ್ತು ರಾತ್ರಿಯಲ್ಲಿ ಹೆಚ್ಚಿನ ಸ್ಟ್ಯಾಂಡ್ಆಫ್ ದೂರದಿಂದ ನಿರ್ಣಾಯಕ ವೈಮಾನಿಕ ಗುಪ್ತಚರ ಸಂಗ್ರಹವನ್ನು ಸಕ್ರಿಯಗೊಳಿಸುತ್ತದೆ. ಇಷ್ಟೇ ಅಲ್ಲದೆ, ಡ್ರೋನ್ ಅನ್ನು ಸಂಪೂರ್ಣವಾಗಿ ಕಾಂಪೋಸಿಟ್ ವಸ್ತುಗಳಿಂದ ನಿರ್ಮಿಸಲಾಗಿದೆ, ಇದು ಡ್ರೋನ್ ಅನ್ನು ದೃಢ, ಹಗುರ ಮತ್ತು ವ್ಯಕ್ತಿ ಪೋರ್ಟಬಲ್ ಮಾಡುತ್ತದೆ. ಆಸ್ಟರಿಯಾ ಏರೋಸ್ಪೇಸ್ 28,000 ಚದರ ಅಡಿಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಜ್ಜಾಗಿರುವ ವಿನ್ಯಾಸ ಮತ್ತು ಉತ್ಪಾದನಾ ಕೇಂದ್ರವನ್ನು ಬೆಂಗಳೂರಿನಲ್ಲಿ ಹೊಂದಿದೆ. ಇದು ಡಿಎಸ್ಐಆರ್ ನಿಂದ ಮಾನ್ಯತೆ ಪಡೆದ ಸಂಶೋಧನೆ ಹಾಗೂ ಅಭಿವೃದ್ಧಿ ಪ್ರಯೋಗಾಲಯದೊಂದಿಗೆ ಭವಿಷ್ಯಕ್ಕೆ ಉಪಯುಕ್ತವಾಗುವಂಥ ಉತ್ಪನ್ನಗಳನ್ನು ಅತ್ಯುತ್ಕೃಷ್ಟ ಗುಣಮಟ್ಟದ ಪ್ರಮಾಣದೊಂದಿಗೆ ಹಾಗೂ ನಿಯಮಾವಳಿ ಅನುಸಾರ ನಿರ್ಮಾಣ ಮಾಡುವ ವ್ಯವಸ್ಥೆಯನ್ನು ಹೊಂದಿದೆ. ಇದರ ಜೊತೆಗೆ ಕಂಪನಿಯು ಗುರುಗ್ರಾಮ್ ನಲ್ಲಿ ಕಾರ್ಯತಂತ್ರ ಉಪಸ್ಥಿತಿಯನ್ನು ನಿರ್ವಹಿಸುತ್ತಿದ್ದು, ಸರ್ಕಾರ ಹಾಗೂ ರಕ್ಷಣಾ ಸಂಸ್ಥೆಗಳಂಥ ವೈವಿಧ್ಯ ಗ್ರಾಹಕರಿಗೆ ಅಗತ್ಯವಾದದ್ದನ್ನು ಪೂರೈಸುವ ಉದ್ದೇಶವನ್ನು ಹೊಂದಿದೆ. ಆಸ್ಟರಿಯಾ ಏರೋಸ್ಪೇಸ್ ಮತ್ತು ಅದ ಉತ್ಪನ್ನಗಳ ಕುರಿತು ಹೆಚ್ಚಿನ ಮಾಹಿತಿಗಾಗಿ,https://asteria.co.in/ಗೆ ಭೇಟಿ ನೀಡಿ.

# ಜಾಗುರ್‌ನಿಂದ ಕಣಕ್ಕಿಳಿಯಲಿರುವ ಸಿಸೋಡಿಯಾ



**ನವದೆಹಲಿ:** ಮುಂದಿನ ವರ್ಷ ದೆಹಲಿ ವಿಧಾನಸಭೆಗೆ ಚುನಾವಣೆ ನಡೆಯಲಿದ್ದು, ಆಮ್ ಆದ್ಮಿ ಪಕ್ಷ ಎರಡನೇ ಅಭ್ಯರ್ಥಿಗಳ ಪಟ್ಟಿಯನ್ನು ಇಂದು ಬಿಡುಗಡೆ ಮಾಡಿದೆ. ಪಕ್ಷದ ಹಿರಿಯ ನಾಯಕ ಮನೀಶ್ ಸಿಸೋಡಿಯಾ ಜಗ್ಪುರ್ ಕ್ಷೇತ್ರದಿಂದ ಕಣಕ್ಕಿಳಿಯಲಿದ್ದಾರೆ. ಇತ್ತೀಚಿಗಷ್ಟೇ ಎಎಪಿ ಸೇರಿದ್ದ ಶಿಕ್ಷಣ ತಜ್ಞ ಅವದ್ ಓಜಾ ಅವರು ಪತ್ಪರಗಂಜ್ನಿಂದ ಕಣಕ್ಕಿಳಿಯುತ್ತಿದ್ದಾರೆ. ಪ್ರಸ್ತುತ ಈ ಕ್ಷೇತ್ರವನ್ನು ಸಿಸೋಡಿಯಾ ಪ್ರತಿನಿಧಿಸುತ್ತಿದ್ದಾರೆ. ಬಿಜೆಪಿ ತೊರೆದು ಎಎಪಿ ಸೇರಿದ್ದ ಜಿತೇಂದರ್ ಸಿಂಗ್ ಅವರು ಶಹಾದರ್ ಮತ್ತು ಸುರಿಂದರ್ ಪಾಲ್ ಸಿಂಗ್ ಬಿಟ್ಟು ತಿಮರ್ಪುರ್ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.ಎಎಪಿ ತನ್ನ ಮೊದಲ ಪಟ್ಟಿಯಲ್ಲಿ 11 ಅಭ್ಯರ್ಥಿಗಳ ಹೆಸರು ಘೋಷಿಸಿದೆ. ದೆಹಲಿಯ 70 ವಿಧಾನಸಭಾ ಕ್ಷೇತ್ರಗಳಿಗೆ ಮುಂದಿನ ಫೆಬ್ರವರಿಗೂ ಮುನ್ನ ಚುನಾವಣೆ ನಡೆಯುವ ಸಾಧ್ಯತೆ ಇದೆ.

# ರಾಗಾಯಿಂದ ಕಾನೂನು ನೆರವು ಕೋರಿದ ಟ್ರ್ಯಾಕ್ ಮನ್ ಸಂಘಟನೆ



**ಹೊಸದಿಲ್ಲಿ:** ಕಾರ್ಮಿಕ ಸಂಘಟನೆ ಚುನಾವಣೆಗೆ ಸಂಬಂಧಿಸಿದಂತೆ ರೈಲ್ವೆ ಮಂಡಳಿಯ ವಿರುದ್ಧ ಸುಪ್ರೀಂ ಕೋರ್ಟ್ ನಲ್ಲಿ ಹೋರಾಟ ನಡೆಸಲು ಕಾನೂನು ನೆರವು ಕೋರಿ ಲೋಕಸಭಾ ವಿಪಕ್ಷಗಳ ನಾಯಕ ರಾಹುಲ್ ಗಾಂಧಿಗೆ ಅಖಿಲ ಭಾರತೀಯ ರೈಲ್ವೆ ಹಳಿ ನಿರ್ವಹಣಾಕಾರರ ಸಂಘಟನೆ ಪತ್ರ ಬರೆದಿದೆ. ಕಾರ್ಮಿಕ ಸಂಘಟನೆ ಚುನಾವಣೆಗಳಲ್ಲಿ ಸ್ಪರ್ಧಿಸಲು ಅಖಿಲ ಭಾರತೀಯ ರೈಲ್ವೆ ಹಳಿ ನಿರ್ವಹಣಾಕಾರರ ಸಂಘಟನೆಗೆ ಬಾಂಬೆ ಹೈಕೋರ್ಟ್ ನೀಡಿದ್ದ ಅನುಮತಿಯನ್ನು ಪ್ರಶ್ನಿಸಿ ನವೆಂಬರ್ 29, 2024ರಂದು ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ ರೈಲ್ವೆ ಮಂಡಳಿ, ಆ ಆದೇಶದ ವಿರುದ್ಧ ತಡೆಯಾಜ್ಞೆ ಪಡೆದಿತ್ತು. ಅಖಿಲ ಭಾರತೀಯ ರೈಲ್ವೆ ಹಳಿ ನಿರ್ವಹಣಾಕಾರರ ಸಂಘಟನೆ ಅನಧಿಕೃತವಾಗಿದ್ದು, ನಿಯಮಗಳ ಪ್ರಕಾರ ಅದು ಗೋಪ್ಯ ಮತಪತ್ರ ಚುನಾವಣೆಗಳಲ್ಲಿ ಸ್ಪರ್ಧಿಸಲು ಸಾಧ್ಯವಿಲ್ಲ. ಆದರೆ, ಹೈಕೋರ್ಟ್ ಎದುರು ಪೂರ್ಣ ವಾಸ್ತವಾಂಶಗಳನ್ನು ಬಚ್ಚಿಟ್ಟು ಹಾಗೂ ಒದಗಿಸದೆ ಚುನಾವಣೆಗಳಲ್ಲಿ ಸ್ಪರ್ಧಿಸಲು ಯತ್ನಿಸಿದೆ ಎಂದು ರೈಲ್ವೆ ಮಂಡಳಿ ತನ್ನ ಅರ್ಜಿಯಲ್ಲಿ ವಾದಿಸಿದೆ.''ಹೀಗಿದ್ದೂ, ಡಿಸೆಂಬರ್ 4, 5 ಹಾಗೂ 6ರಂದು ಭಾರತೀಯ ರೈಲ್ವೆಯಾದ್ಯಂತ ಚುನಾವಣೆಗಳನ್ನು ನಡೆಸಲಾಗಿದೆ'' ಎಂದು ರೈಲ್ವೆ ಮಂಡಳಿಯ ಕಾರ್ಯಕಾರಿ ನಿರ್ದೇಶಕ (ಮಾಹಿತಿ ಮತ್ತು ಪ್ರಚಾರ) ದಿಲೀಪ್ ಕುಮಾರ್ ಹೇಳಿದ್ದಾರೆ.

# ಬಂಗಾಳ ನಮ್ಮೆಂದ ಬಾಂಗ್ಲಾದೇಶಕ್ಕೆ ಸಿಎಂ ಮಮತಾ ತಿರುಗೇಟು



**ಕೋಲ್ಕತಾ(ಪಶ್ಚಿಮ ಬಂಗಾಳ):** ನೀವು ನಮ್ಮ ದೇಶದ ಭೂಮಿ ಆಕ್ರಮಿಸಿಕೊಳ್ಳಲು ಯತ್ನಿಸಿದರೆ ನಾವೇನು ಲಾಲಿಪಾಪ್ ತಿನ್ನಿತ್ತೀರ್ವಾ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬಾಂಗ್ಲಾದೇಶದ ರಾಜಕಾರಣಿಗಳಿಗೆ ಸೋಮವಾರ ತಿರುಗೇಟು ಕೊಟ್ಟಿದ್ದಾರೆ. ಬಂಗಾಳ, ಬಿಹಾರ ಮತ್ತು ಒಡಿಶಾದ ಮೇಲೆ ಬಾಂಗ್ಲಾದೇಶ ಕಾನೂನುಬದ್ಧ ಅಧಿಕಾರ ಹಕ್ಕುಗಳಿವೆ ಎಂಬ ಬಾಂಗ್ಲಾದೇಶದ ಕೆಲ ರಾಜಕಾರಣಿಗಳ ಹೇಳಿಕೆಗೆ ಮಮತಾ ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.

ಪಶ್ಚಿಮ ಬಂಗಾಳ ವಿಧಾನಸಭೆಯಲ್ಲಿ ಮಾತನಾಡಿದ ಅವರು, ಜನತೆ ಶಾಂತವಾಗಿರುವಂತೆ ಮತ್ತು ಬಾಂಗ್ಲಾದೇಶದ ರಾಜಕಾರಣಿಗಳ ಹೇಳಿಕೆಗಳಿಂದ ಪ್ರಚೋದಿತರಾಗದಂತೆ ಮನವಿ ಮಾಡಿದರು. ಅಲ್ಲದೆ ಕೇಂದ್ರವು ತೆಗೆದುಕೊಳ್ಳುವ ಯಾವುದೇ ನಿರ್ಧಾರಕ್ಕೆ ಪಶ್ಚಿಮ ಬಂಗಾಳ ಯಾವಾಗಲೂ ಬದ್ಧವಾಗಿರುತ್ತದೆ ಎಂದು ಹೇಳಿದರು.

ಇತ್ತೀಚೆಗೆ, ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ ಕೆಲವು ಬಾಂಗ್ಲಾದೇಶದ ನಾಯಕರನ್ನು ಗೇಲಿ ಮಾಡಿದ ಅವರು, ಶಾಂತವಾಗಿರಿ, ಆರೋಗ್ಯಕರವಾಗಿರಿ ಮತ್ತು ಮನಸ್ಸಿನ ಶಾಂತಿಯನ್ನು ಹೊಂದಿರಿ ಎಂದು ಹೇಳಿದರು. ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಾರ್ಟಿ (ಬಿಎನ್ ಪಿ) ಇತ್ತೀಚೆಗೆ ಢಾಕಾದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಬಂಗಾಳ, ಬಿಹಾರ ಮತ್ತು ಒಡಿಶಾದ ಮೇಲೆ ದೇಶವು ಕಾನೂನುಬದ್ಧ ಅಧಿಕಾರ ಹೊಂದಿದೆ ಎಂದು ಹೇಳಿದೆ.

ಬಾಂಗ್ಲಾದೇಶದಲ್ಲಿನ ಕೆಲವರ ಪ್ರಚೋದನಕಾರಿ ಹೇಳಿಕೆಗಳಿಂದ ಪ್ರಭಾವಿತರಾಗದಂತೆ ಮತ್ತು ಶಾಂತವಾಗಿರುವಂತೆ ಪಶ್ಚಿಮ ಬಂಗಾಳದ ಜನರಿಗೆ ಮನವಿ ಮಾಡಿದ ಅವರು, ನಮ್ಮ ರಾಜ್ಯದಲ್ಲಿ ಇಮಾಮ್ಗಳು ಸಹ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಅಲ್ಪಸಂಖ್ಯಾತರ ಮೇಲಿನ ದಾಳಿಗಳನ್ನು ಖಂಡಿಸಿದ್ದಾರೆ ಎಂದು ಹೇಳಿದರು.

ಹಿಂದೂಗಳು ಮತ್ತು ಮುಸ್ಲಿಮರು ಮತ್ತು ಇತರ ಎಲ್ಲಾ ಸಮುದಾಯಗಳ ರಕ್ತನಾಳಗಳಲ್ಲಿ ಹರಿಯುವ ರಕ್ತ ಒಂದೇ. ಪಶ್ಚಿಮ ಬಂಗಾಳದಲ್ಲಿ ಪರಿಸ್ಥಿತಿ ಹಾಳಾಗದಂತೆ ನಾವೆಲ್ಲರೂ ಒಟ್ಟಾಗಿ ಪ್ರಯತ್ನಿಸಬೇಕು ಎಂದು ಅವರು ಹೇಳಿದರು.

# ಅಮಿತ್ ಶಾ ಭೇಟಿಯಾದ ನಿಖಿಲ್

**ನವದೆಹಲಿ:** ಯುವ ಜನತಾದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಸೋಮವಾರ ನವದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಬಳಿಕ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ಅತ್ಯಂತ ಗೌರವಪೂರ್ವಕವಾಗಿ ಅಮಿತ್ ಶಾ ಅವರನ್ನು ಸಂಸತ್ ಭವನದ ಅವರ ಕಚೇರಿಯಲ್ಲಿ ಮಧ್ಯಾಹ್ನ 12 ಗಂಟೆಗೆ ಭೇಟಿ ಮಾಡಲಾಯಿತು. ಚನ್ನಪಟ್ಟಣ ಫಲಿತಾಂಶದ ಕುರಿತಾದ ಮಾಹಿತಿಯನ್ನು ಅವರೊಂದಿಗೆ ಹಂಚಿಕೊಂಡೆ ಹಾಗೂ ಅವರು ಕೂಡ ನನಗೆ ಧೈರ್ಯ ತುಂಬಿ ಉತ್ತಮವಾಗಿ ಕೆಲಸ ಮಾಡುವಂತೆ ಹುರಿದುಂಬಿಸಿದರು ಎಂದರು. ಅಲ್ಲದೆ, ಮುಂಬರುವ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆ ಬಗ್ಗೆ ಅವರೊಂದಿಗೆ ಚರ್ಚೆ ನಡೆಸಲಾಯಿತು. ಮೈತ್ರಿಕೂಟಗಳ ಎರಡೂ ಪಕ್ಷಗಳು ಒಟ್ಟಾಗಿ ಹೋಗಬೇಕು. ತಳಮಟ್ಟದಲ್ಲಿ ಎನ್ಡಿಎ ಮೈತ್ರಿಕೂಟವನ್ನು



ಬಲಪಡಿಸುವ ನಿಟ್ಟಿನಲ್ಲಿ ಅಮಿತ್ ಶಾ ಅವರು ನನಗೆ ಮಾರ್ಗದರ್ಶನ ಮಾಡಿದರು ಎಂದು ನಿಖಿಲ್ ಕುಮಾರಸ್ವಾಮಿ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಇದಕ್ಕೂ ಮುನ್ನ ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್, ರಾಜ್ಯ ಬಿಜೆಪಿ ಉಸ್ತುವಾರಿ ಡಾ.ರಾಧಾಮೋಹನ್ ದಾಸ್ ಅಗರ್ವಾಲ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದೆ. ಎಲ್ಲಾ ನಾಯಕರು ಸಂಘಟನೆಗೆ ಹೆಚ್ಚು ಕೊಡಬೇಕು ಎಂದು ಸಲಹೆ ಮಾಡಿದರು ಎಂದು ತಿಳಿಸಿದರು.

# ಪುಷ್ಪ ಸ್ಟೈಲ್‌ನಲ್ಲಿ ಆಪ್-ಬಿಜೆಪಿ ನಾಯಕರು ಪೋಸ್!

**ನವದೆಹಲಿ:** ಇನ್ನೇನು ಕೆಲವೇ ತಿಂಗಳಲ್ಲಿ ಚುನಾವಣೆಗೆ ಎದುರು ನೋಡುತ್ತಿರುವ ದೆಹಲಿಯಲ್ಲಿ ಎಲೆಕ್ಷನ್(ಆಜಟ್ಟು ಂ ಜಟಭಟಥಿ ಇಟಜಥಿಣಠಿಟ 2025) ಬಿಸಿ ಜೋರಾಗಿದೆ. ಬಿಜೆಪಿ ಮತ್ತು ಆಡಳಿತರೂಢ ಆಪ್ ನಡುವೆ ಈಗಾಗಲೇ ಪೈಪೋಟಿ ಶುರುವಾಗಿದೆ. ಇದಕ್ಕೆ ಪೂರಕ ಎಂಬಂತೆ ಇದೀಗ ಎರಡೂ ಪಕ್ಷಗಳ ನಡುವೆ ಪೋಸ್ಟರ್ ವಾರ್ ಜೋರಾಗಿದೆ(ಆಜಟ್ಟು ಕಠಣಜಡಿ ಘಾಚಿಡಿ). ಪುಷ್ಪ 2 ಚಿತ್ರದ ಪೋಸ್ಟರ್ಗಳನ್ನು ಬಳಸಿಕೊಂಡು ಎರಡೂ ಪಕ್ಷಗಳೂ ತಮ್ಮ ತಮ್ಮ ನಾಯಕರ ಫೋಟೊವನ್ನು ಅದಕ್ಕೆ ಹಾಕಿ ಜನರನ್ನು ಸೆಳೆಯುವ ಪ್ರಯತ್ನದ ಜತೆಗೆ ಪರಸ್ಪರ ಟಾಂಗ್ ಕೊಡಲು ಮುಂದಾಗಿವೆ.

ಸಾಮಾಜಿಕ ಜಾಲತಾಣದಲ್ಲಿ ಎರಡೂ ಪಕ್ಷಗಳ ಪೋಸ್ಟರ್ ಭಾರೀ ಸದ್ದು ಮಾಡುತ್ತಿದ್ದು, ತಮ್ಮ ತಮ್ಮ ನಾಯಕರ ಫೋಟೊಗಳ ಜತೆಗೆ ಸಿನಿಮಾದ ಫೇಮಸ್ ಡೈಲಾಗ್ಗಳನ್ನೂ ಪ್ರಿಂಟ್ ಮಾಡಲಾಗಿದೆ. ಚಿತ್ರದ ಫೇಮಸ್ ಡೈಲಾಗ್ ಆಗಿರುವ ''ಕೇಜ್ರಿವಾಲ್ ಜುಕೇಗಾ ನಹಿ'' ಎಂಬ ಸಾಲುಗಳೊಂದಿಗೆ ಆಪ್ ಶನಿವಾರ ಪೋಸ್ಟರ್ ಅನ್ನು ಬಿಡುಗಡೆ ಮಾಡಿದೆ. ಸಾಲುಗಳನ್ನು ದಪ್ಪ ಅಕ್ಷರಗಳಲ್ಲಿ ಪ್ರಿಂಟ್ ಮಾಡಲಾಗಿದೆ.

ಕೇಜ್ರಿವಾಲ್ ಅವರು ಪಕ್ಷದ ಚಿಹ್ನೆಯಾದ ಪೊರಕೆಯನ್ನು ತಮ್ಮ ಭುಜದ ಮೇಲೆ ಹೊತ್ತುಕೊಂಡು ಹೀರೋ ತರಹ ಪೋಸ್ ನೀಡಿದ್ದಾರೆ. 2013, 2015 ಮತ್ತು 2020ರಲ್ಲಿ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದ ಚುನಾವಣಾ ಯಶಸ್ಸನ್ನು ಉಲ್ಲೇಖಿಸಿ 4ನೇ ಅವಧಿ ಶೀಘ್ರದಲ್ಲೇ ಬರಲಿದೆ ಎಂಬ ಬರಹವನ್ನೂ ಪೋಸ್ಟರ್ನಲ್ಲಿ ಕಾಣಬಹುದಾಗಿದೆ.

ಇನ್ನು ಆಪ್ ಪೋಸ್ಟರ್ಗೆ ಬಿಜೆಪಿಯೂ ತನ್ನದೇ ಆದ ಸ್ಟೈಲ್ನಲ್ಲಿ ಪೋಸ್ಟರ್ ಬಿಡುಗಡೆ ಮಾಡಿ ಟಾಂಗ್ ಕೊಟ್ಟಿದೆ. ಬಿಜೆಪಿ ಪುಷ್ಪ 2 ಪ್ರೇರಿತ ಪೋಸ್ಟರ್ ಅನ್ನು ಬಿಡುಗಡೆ ಮಾಡುವ ಮೂಲಕ ಸೋಮವಾರ ತಿರುಗೇಟು ಕೊಟ್ಟಿದೆ. ದಿಲ್ಲಿಯ ಬಿಜೆಪಿ ಅಧ್ಯಕ್ಷ ವೀರೇಂದ್ರ ಸಚ್ದೇವ ಅವರು ಸಿಂಹಾಸನದ ಮೇಲೆ ಸಿನಿಮಾ ನಾಯಕ ಅಲ್ಲು ಅರ್ಜುನ್ ಅವರಂತೆ ಪೋಸ್ ಕೊಟ್ಟಿದ್ದು, ''ಭ್ರಷ್ಟಾಚಾರಿಯೋಂ ಕೋ ಖತಮ್ ಕರೆಂಗೆ'' (ಭ್ರಷ್ಟರನ್ನು ಮುಗಿಸುತ್ತೇವೆ) ಎಂದು ದಪ್ಪ ಅಕ್ಷರದಲ್ಲಿ ಬರೆಯಲಾಗಿದೆ.

# ಸಿರಿಯಾ ಮಧ್ಯಂತರ ಪ್ರಧಾನಿಯಾಗಿ 'ಮೊಹಮ್ಮದ್ ಅಲ್-ಬಶೀರ್' ನೇಮಕ



**ಸಿರಿಯಾ:** ಭಾನುವಾರ ಬಷರ್ ಅಲ್-ಅಸ್ಸಾದ್ ಅವರನ್ನ ಪದಚ್ಯುತಗೊಳಿಸಿದ ನಂತರ ಸಿರಿಯಾದ ಬಂಡುಕೋರರು ಮೊಹಮ್ಮದ್ ಅಲ್-ಬಶೀರ್ ಅವರನ್ನ ದೇಶದ ಮಧ್ಯಂತರ ಪ್ರಧಾನಿಯಾಗಿ ನೇಮಿಸಿದ್ದಾರೆ. ಅರಬ್ ಮಾಧ್ಯಮ ವರದಿಗಳ ಪ್ರಕಾರ, ಬಶೀರ್ ಅವರು ಸಿರಿಯಾದ ನಿರ್ಗಮಿತ ಪ್ರಧಾನಿ ಮೊಹಮ್ಮದ್ ಅಲ್-ಜಲಾಲಿ ಅವರನ್ನ ಡಮಾಸ್ಕಸ್ನಲ್ಲಿ ಭೇಟಿಯಾಗುತ್ತಿದ್ದಾರೆ. ಆದ್ರೆ, ಈ ಬಗ್ಗೆ ಯಾವುದೇ ಅಧಿಕೃತ ಪ್ರಕಟಣೆ ಹೊರಬಿದ್ದಿಲ್ಲ. ಈಗಿರುವ ಮಾಜಿ ಅಧ್ಯಕ್ಷ ಅಸ್ಸಾದ್ ಅವರನ್ನ ಅಧಿಕಾರದಿಂದ ಕೆಳಗಿಳಿಸಲು 12 ದಿನಗಳ ದಾಳಿಯನ್ನ ಪ್ರಾರಂಭಿಸುವ ಮೊದಲು ಬಶೀರ್ ಆಡಳಿತವನ್ನ ಬಂಡುಕೋರರ ಹಿಡಿತದಲ್ಲಿರುವ ಸಣ್ಣ ಜೇಬಿನಲ್ಲಿ ನಡೆಸುತ್ತಿದ್ದರು. ಇಸ್ಲಾಮಿಕ್ ಗುಂಪು ಹಯಾತ್ ತಹ್ರಿರ್ ಅಲ್-ಶಾಮ್ (ಎಚ್ಟಿಎಸ್) ಮೇಲ್ವಿಚಾರಣೆಯ ಸಂಸ್ಥೆಯಲ್ಲಿ ಇದ್ದರು. ಮುಂಬರುವ ಮಧ್ಯಂತರ ಪ್ರಧಾನಿ ಸಾಲ್ವೇಶನ್ ಸರ್ಕಾರವನ್ನ ಮುನ್ನಡೆಸಿದರು, ಇದು ವಾಯುವ್ಯ ಸಿರಿಯಾ ಮತ್ತು ಇಡ್ಲಿಬ್ನ ಕೆಲವು ಭಾಗಗಳನ್ನ ಮಾತ್ರ ಆಳಿತು.

# ಬಾಂಗ್ಲಾ ದ್ವಿಪಕ್ಷೀಯ ಸಭೆಯಲ್ಲಿ ವಿಕ್ರಮ್ ಮಿಸ್ರಿ ಗುಡುಗು

**ಢಾಕಾ:** ಬಾಂಗ್ಲಾದೇಶದಲ್ಲಿನಡೆಯುತ್ತಿರುವ ಅಲ್ಪಸಂಖ್ಯಾತರ ಮೇಲಿನ ನಿರಂತರ ದಾಳಿಗಳ ಕುರಿತು ಭಾರತದ ಕಳವಳವನ್ನು ಢಾಕಾಗೆತಿಳಿಸಿರುವುದಾಗಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿಇಂದುಹೇಳಿದ್ದಾರೆ. ಬಾಂಗ್ಲಾದೇಶದ ವಿದೇಶಾಂಗ ಸಲಹೆಗಾರ ಮೊಹಮ್ಮದ್ ತೌಹಿದ್ ಹೊಸೈನ್ ಅವರೊಂದಿಗೆ ಮಿಸ್ರಿ ಸುದೀರ್ಘವಾಗಿ ಮಾತುಕತೆ ನಡೆಸಿದ್ದು, ಧಾರ್ಮಿಕ ಸಂಸ್ಥೆಗಳು ಮತ್ತು ಪವಿತ್ರ ಪೂಜಾ ಸ್ಥಳಗಳ ಮೇಲಿನ ದಾಳಿಗಳು ಖಂಡನೀಯ ಎಂದು ಹೇಳಿದ್ದಾರೆ.

ಭಾರತವು ಬಾಂಗ್ಲಾದೊಂದಿಗೆ ಧನಾತ್ಮಕ, ರಚನಾತ್ಮಕ ಮತ್ತು ಪರಸ್ಪರ ಸ್ನೇಹ ಸಂಬಂಧವನ್ನು ಹೊಂದಲು ಬಯಸುತ್ತದೆ ಎಂದು ಮಿಸ್ರಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರಕ್ಕೆ ತಿಳಿಸಿದ್ದಾರೆ. ತಮ್ಮ ದ್ವಿಪಕ್ಷೀಯ ಸಭೆ ಮುಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮಿಸ್ರಿ, ''ಇಂದು ನಡೆದ ಸಭೆಯಲ್ಲಿ ಬಾಂಗ್ಲಾದೇಶದಲ್ಲಿ ಅಧಿಕಾರದಲ್ಲಿರುವ ಮಧ್ಯಂತರ ಸರ್ಕಾರದೊಂದಿಗೆ ನಿಕಟವಾಗಿ ಕೆಲಸ ಮಾಡಲು ಭಾರತ ಇಚ್ಛಿಸುತ್ತದೆ ಎಂದು ಹೇಳಿದ್ದೇನೆ'' ಎಂದು ತಿಳಿಸಿದರು. ಬಾಂಗ್ಲಾದೇಶದ ಅಲ್ಪಸಂಖ್ಯಾತರ ಸಮಸ್ಯೆಯ ಕುರಿತು ಮಾತನಾಡಿದ ಮಿಸ್ರಿ, ''ನಾವು ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಗಂಭೀರವಾಗಿ ಚರ್ಚಿಸಿದ್ದೇವೆ. ಅಲ್ಪಸಂಖ್ಯಾತರ ಸುರಕ್ಷತೆ ಮತ್ತು ಅಭಿವೃದ್ಧಿಗೆ ಸಂಬಂಧಿಸಿದ ನಮ್ಮ ಕಳವಳಗಳನ್ನು ಅವರಿಗೆ ತಿಳಿಸಿದ್ದೇನೆ. ಸಾಂಸ್ಕೃತಿಕ, ಧಾರ್ಮಿಕ ಸ್ಥಳಗಳು ಮತ್ತು ಸಾರ್ವಜನಿಕ ಆಸ್ತಿಗಳ ಮೇಲಿನ ನಿರಂತರ ದಾಳಿಗಳ



ಬಗ್ಗೆಯೂ ಮಾತನಾಡಿದ್ದೇನೆ'' ಎಂದರು.

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಒಂದು ದಿನದ ಭೇಟಿಗಾಗಿ ಇಂದು ಮುಂಜಾನೆ ಢಾಕಾಗೆ ತೆರಳಿದ್ದರು. ಆಗಸ್ಟ್‌ನಲ್ಲಿ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರ ಪದಚ್ಯುತಿಯ ನಂತರ ಉಭಯ ದೇಶಗಳ ನಡುವಿನ ಮೊದಲ ಉನ್ನತ ಮಟ್ಟದ ಸಭೆ ಇದಾಗಿತ್ತು. ಮಿಸ್ರಿ ಮೊದಲು ತಮ್ಮ ಸಹವರ್ತಿ ವಿದೇಶಾಂಗ ಕಾರ್ಯದರ್ಶಿ ಜಾಶಿಮ್ ಉದ್ದೀನ್ ಅವರೊಂದಿಗೆ ಸಭೆ ನಡೆಸಿದರು. ರಾಜ್ಯ ಅತಿಥಿ ಗೃಹವಾದ ಪದ್ಮಾದಲ್ಲಿ ಸಭೆ ನಡೆಯಿತು. ಇಬ್ಬರು ವಿದೇಶಾಂಗ ಕಾರ್ಯದರ್ಶಿಗಳು ಒಬ್ಬರಿಗೊಬ್ಬರು ಮಾತುಕತೆ ನಡೆಸಿದ್ದು, ನಂತರ ಔಪಚಾರಿಕ ಸಭೆಯನ್ನು ನಡೆಸಲಾಯಿತು. ಅಲ್ಲಿ ಎರಡೂ ಕಡೆಯ ಪ್ರತಿನಿಧಿಗಳು ಉಪಸ್ಥಿತರಿದ್ದರು ಎಂದು ತಿಳಿದು ಬಂದಿದೆ.

# ದೆಹಲಿಯಲ್ಲಿ 40ಕ್ಕೂ ಹೆಚ್ಚು ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆ!

**ದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿಯ 40ಕ್ಕೂ ಹೆಚ್ಚು ಶಾಲೆಗಳ ಆಡಳಿತ ಮಂಡಳಿಗಳಿಗೆ ಬಾಂಬ್ ಬೆದರಿಕೆಯ ಇ-ಮೇಲ್ ಬಂದಿವೆ. ಪರಿಣಾಮವಾಗಿ ಸೋಮವಾರ ಶಾಲೆಗೆ ಹೋಗಿದ್ದ ಮಕ್ಕಳನ್ನು ಮತ್ತೆ ಮನೆಗೆ ಕಳಿಸುವಂತೆ ಪೊಲೀಸರು ಶಾಲಾ ಆಡಳಿತ ಮಂಡಳಿಗಳಿಗೆ ಸೂಚಿಸಿದ್ದಾರೆ. ಪೊಲೀಸರ ಪರಿಶೀಲನೆಯ ನಂತರ ಇದು 'ಹುಸಿ ಬಾಂಬ್ ಬೆದರಿಕೆ' ಎಂದು ಗೊತ್ತಾಗಿದ್ದರೂ ನಾಗರಿಕರು ತೀವ್ರ ತೆರನಾದ ಆತಂಕಕ್ಕೀಡಾಗಿದ್ದಾರೆ.

ತಮಗೆ ಇ-ಮೇಲ್ ಬಂದದ್ದು ಗೊತ್ತಾಗಿದ್ದೇ ತಡ ಶಾಲಾ ಆಡಳಿತ ಮಂಡಳಿಯವರು ಸ್ಥಳೀಯ ಪೊಲೀಸರಿಗೆ ತಿಳಿಸಿದ್ದಾರೆ. ತಕ್ಷಣವೇ ಬಂದ ಪೊಲೀಸರು ಮತ್ತು ಬಾಂಬ್ ನಿಷ್ಕ್ರಿಯದಳದ ಸಿಬ್ಬಂದಿ ಕೂಡಲೇ ಮಕ್ಕಳನ್ನು ವಾಪಸ್ ಮನೆಗೆ ಕಳುಹಿಸುವಂತೆ ಶಾಲಾ ಆಡಳಿತ ಮಂಡಳಿಗೆ ಸೂಚಿಸಿದ್ದಾರೆ. ನಂತರ ಶಾಲೆಯ ಕಟ್ಟಡವನ್ನು ಪರಿಶೀಲನೆ ನಡೆಸಿ 'ಇದು ಹುಸಿ ಬಾಂಬ್ ಬೆದರಿಕೆ' ಎಂದು ಧೃಡಪಡಿಸಿದ್ದಾರೆ.




ಪಶ್ಚಿಮ ವಿಹಾರ್ನ ಜಿಡಿ ಗೋಯೆಂಕಾ ಪಬ್ಲಿಕ್ ಸ್ಕೂಲ್, ಮದರ್ ಮೇರಿಸ್ ಸ್ಕೂಲ್, ಬ್ರಿಟಿಷ್ ಸ್ಕೂಲ್, ಸಲ್ವಾನ್ ಪಬ್ಲಿಕ್ ಸ್ಕೂಲ್ ಮತ್ತು ಕೇಂಬ್ರಿಡ್ಜ್ ಸ್ಕೂಲ್ ಮತ್ತಿತರ ಪ್ರಮುಖ ಮತ್ತು ಅತಿ ಹೆಚ್ಚು ಮಕ್ಕಳು ವಿದ್ಯಾಭಾಸ ಮಾಡುವ ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆಯ ಈ-ಮೇಲ್ ಬಂದಿತ್ತು ಎನ್ನುವುದು ಗೊತ್ತಾಗಿದೆ. ಈಗ ಎಲ್ಲಾ ಶಾಲೆಗಳನ್ನು ಪೊಲೀಸರು ಪರಿಶೀಲನೆ ನಡೆಸಿದ್ದು ಅಲ್ಲಿ ಬಾಂಬ್ ಇಲ್ಲ ಎನ್ನುವುದನ್ನು ಖಚಿತಪಡಿಸಿದ್ದಾರೆ. ಹುಸಿ ಬಾಂಬ್ ಬೆದರಿಕೆ ನೀಡಿದ ಪಾತಕಿಗಳು 'ನಾವು ನಿಮ್ಮ ಶಾಲೆಯಲ್ಲಿ ಸಣ್ಣ ಗಾತ್ರದ ಬಾಂಬ್ ಇಟ್ಟಿದ್ದೇವೆ. ನೀವು ಹುಡುಕಿದರೂ ಅದು ಸಿಗುವುದಿಲ್ಲ. ನೀವು ನಮಗೆ 30,000 ರೂಪಾಯಿಗಳನ್ನು ನೀಡಿದರೆ ಅವನ್ನು ಸ್ಫೋಟಿಸುವುದಿಲ್ಲ. ಇಲ್ಲದಿದ್ದರೆ ಸ್ಫೋಟಿಸುತ್ತೇವೆ. ಇದರಿಂದ ಕಟ್ಟಡಕ್ಕೆ ಏನೂ ಹಾನಿಯಾಗುವುದಿಲ್ಲ. ಆದರೆ ಮಕ್ಕಳು ಗಾಯಗೊಳ್ಳುತ್ತಾರೆ' ಎಂದು ಇ-ಮೇಲ್ ಮಾಡಿದ್ದಾರೆಂದು ತಿಳಿದುಬಂದಿದೆ.

# ರಾಜಸ್ಥಾನದಲ್ಲಿ 150 ಅಡಿ ಆಳದ ಕೊಳವೆಬಾವಿಗೆ ಬಿದ್ದ 5 ವರ್ಷದ ಬಾಲಕ



**ರಾಜಸ್ಥಾನ:** ಇಲ್ಲಿನ ದೌಸಾ ಜಿಲ್ಲೆಯಿಂದ ಒಂದು ದೊಡ್ಡ ಸುದ್ದಿ ಹೊರಬರುತ್ತಿದೆ. ನಂಗಲ್ ರಾಜ್ವತನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾಲಿಖಡ್ ಗ್ರಾಮದಲ್ಲಿ ಐದು ವರ್ಷದ ಬಾಲಕ 150 ಅಡಿ ಆಳದ ಕೊಳವೆಬಾವಿಗೆ ಬಿದ್ದಿದ್ದಾನೆ. ಮಗುವಿನ ರಕ್ಷಣೆಗಾಗಿ ಎಸ್ಡಿಆರ್ ಎಫ್ ಮತ್ತು ಎನ್ಡಿಆರ್ಎಫ್ ತಂಡಗಳನ್ನು ಸಹ ಕರೆಯಲಾಗಿದೆ. ಉನ್ನತ ಪೊಲೀಸ್ ಮತ್ತು ಆಡಳಿತ ಅಧಿಕಾರಿಗಳು ಸ್ಥಳಕ್ಕೆ ತಲುಪಿದ್ದಾರೆ. ಬೋರ್ವೆಲ್ ಒಳಗೆ ಆಮ್ಲಜನಕ ಪೂರೈಕೆಯನ್ನು ಪ್ರಾರಂಭಿಸಲಾಗಿದೆ.

ದೌಸಾ ಜಿಲ್ಲೆಯ ನಂಗಲ್ ರಾಜ್ವತನ್ ಪೊಲೀಸ್ ಠಾಣೆ ವ್ಯಾಪ್ತಿಯ ಕಾಲಿಖಂಡ್ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಮಾಹಿತಿಯ ಪ್ರಕಾರ, ಗ್ರಾಮದಲ್ಲಿ ವಾಸಿಸುವ ಐದು ವರ್ಷದ ಮಗು ಆರ್ಯನ್ ಕೊಳವೆಬಾವಿಗೆ ಬಿದ್ದಿದ್ದಾನೆ. ಮಗು ಕೊಳವೆಬಾವಿಗೆ ಬಿದ್ದ ಸುದ್ದಿ ಗ್ರಾಮದಲ್ಲಿ ಹರಡುತ್ತಿದ್ದಂತೆಯೇ ಗ್ರಾಮದಲ್ಲಿ ಕೋಲಾಹಲ ಉಂಟಾಯಿತು. ಕುಟುಂಬದ ಗೋಳಾಟ ಮುಗಿಲು ಮುಟ್ಟಿದೆ. ಏತನ್ಮಧ್ಯೆ, ಗ್ರಾಮದ ಜನರು ಈ ಬಗ್ಗೆ ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಿದರು. ಮಾಹಿತಿ ಪಡೆದ ಕೂಡಲೇ ಪೊಲೀಸ್ ತಂಡ ಸ್ಥಳಕ್ಕೆ ತಲುಪಿ ಘಟನೆಯ ಬಗ್ಗೆ ಉನ್ನತ ಅಧಿಕಾರಿಗಳಿಗೆ ಮಾಹಿತಿ ನೀಡಿತು. ಮಾಹಿತಿ ಪಡೆದ ನಂತರ, ಜಿಲ್ಲೆಯ ಉನ್ನತ ಪೊಲೀಸ್ ಮತ್ತು ಆಡಳಿತ ಅಧಿಕಾರಿಗಳು ಎನ್ಡಿಆರ್ಎಫ್ ಮತ್ತು ಎಸ್ಡಿಆರ್ಎಫ್ ತಂಡದೊಂದಿಗೆ ಸ್ಥಳಕ್ಕೆ ತಲುಪಿದರು. ಮಾಹಿತಿಯ ಪ್ರಕಾರ, ಐದು ವರ್ಷದ ಮುಗ್ಧ ಬಾಲಕ 150 ಅಡಿ ಆಳದಲ್ಲಿದ್ದು, ಅವನ ರಕ್ಷಣಾ ಕಾರ್ಯ ನಡೆಯುತ್ತಿದೆ. ಬೋರ್ ವೆಲ್ ಬಳಿ ಸುರಂಗ ನಿರ್ಮಿಸಲು ಉತ್ಖನನ ನಡೆಸಲಾಗುತ್ತಿದೆ. ಮಗುವನ್ನು ಹೊರತೆಗೆಯಲು ರಕ್ಷಣಾ ತಂಡ ಸ್ಥಳದಲ್ಲಿದೆ. ಇದಲ್ಲದೆ, ನಂಗಲ್ ರಾಜ್ವತನ್ ಪೊಲೀಸ್, ಪಾಪಡ್ದಾ ಪೊಲೀಸ್ ಠಾಣೆ ಪೊಲೀಸರ ಅಧಿಕಾರಿಗಳು ಸ್ಥಳದಲ್ಲಿದ್ದಾರೆ. ದೌಸಾ ಶಾಸಕ ದೀನ್ ದಯಾಳ್ ಬೈರ್ವಾ ಕೂಡ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕಾಶ್ಮೀರದಲ್ಲಿ ಶೀತದ ಅಲೆ ತೀವ್ರ



**ಶ್ರೀನಗರ(ಜಮ್ಮು-ಕಾಶ್ಮೀರ):** ಜಮ್ಮು ಮತ್ತು ಕಾಶ್ಮೀರದಲ್ಲಿ ಮೈ ಕೊರೆಯುವ ಚಳಿ ಇದೆ. ತೀವ್ರ ಶೀತಗಾಳಿಯಿಂದಾಗಿ ಕಣಿವೆಯ ಜನರು ಗಡಗಡ ನಡುಗುತ್ತಿದ್ದಾರೆ. ತಾಪಮಾನ ತೀವ್ರ ಪ್ರಮಾಣದಲ್ಲಿ ಕುಸಿಯುತ್ತಿದ್ದು, ಗುಲ್ಮಾರ್ಗ್ನಲ್ಲಿ ಭಾನುವಾರ ರಾತ್ರಿ -9.0 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಹಿಮಾಲಯ ಪರ್ವತದ ಬುಡದಲ್ಲಿರುವ ಗುಲ್ಮಾರ್ಗ್ನಲ್ಲಿ ಹಿಮಪಾತ ಶುರುವಾಗಿದೆ. ತೀವ್ರ ಮಂಜಿನಿಂದಾಗಿ ಈ ಪ್ರದೇಶವು ಕೇಂದ್ರಾಡಳಿತ ಪ್ರದೇಶದಲ್ಲಿಯೇ ಅತೀ ಶೀತ ಪ್ರದೇಶವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಾರ್ಷಿಕವಾಗಿ ನಡೆಯುವ ಅಮರನಾಥ ಯಾತ್ರೆಯ ಮೂಲ ಶಿಬಿರವಾಗಿ ಕಾರ್ಯನಿರ್ವಹಿಸುವ ಪಹಲ್ಗಾಮ್ನಲ್ಲಿ ಕನಿಷ್ಠ ತಾಪಮಾನ ಮೈನಸ್ 6.8 ಡಿಗ್ರಿ ಸೆಲ್ಸಿಯಸ್ಗೆ ಇಳಿದಿದೆ. ಶ್ರೀನಗರದಲ್ಲಿ -3.3 ಡಿಗ್ರಿ ಸೆಲ್ಸಿಯಸ್, ಕಾಶ್ಮೀರದ ಹೆಬ್ಬಾಗಿಲು ಎಂದು ಕರೆಸಿಕೊಳ್ಳುವ ಖಾಜಿಗುಂಡ್ನಲ್ಲಿ -5.2 ಡಿಗ್ರಿ ಸೆಲ್ಸಿಯಸ್ ತಾಪಮಾನವಿದೆ. ಉತ್ತರ ಕಾಶ್ಮೀರದ ಕುಪ್ವಾರ ಮತ್ತು ದಕ್ಷಿಣ ಕಾಶ್ಮೀರದ ಕೋಕರ್ನಾಗ್ನಲ್ಲಿ ಕನಿಷ್ಠ ಮೈನಸ್ 4.4 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

**ಹಿಮಪಾತದ ಮುನ್ಸೂಚನೆ:** ಚಳಿ ಏರುತ್ತಿರುವ ಕಾರಣ, ಮುಂದಿನ 10 ದಿನ ಕಾಶ್ಮೀರದಲ್ಲಿ ಶುಷ್ಕ ವಾತಾವರಣವಿರಲಿದೆ. ಡಿಸೆಂಬರ್ 12ರಂದು ಕಣಿವೆಯ ಹೆಚ್ಚಿನ ಪ್ರದೇಶಗಳಲ್ಲಿ ಲಘು ಹಿಮಪಾತವಾಗುವ ಸಾಧ್ಯತೆಯಿದೆ. ಶೀತದ ಅಲೆಗೆ ತೀವ್ರವಾಗುತ್ತಿದ್ದು, ಡಿಸೆಂಬರ್ 21ರಿಂದ 40 ದಿನಗಳ ಕಾಲ ಅತ್ಯಂತ ಚಳಿ ಆವರಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ‘ಅನಿಮಲ್ 2’ 2027ರಲ್ಲಿ ಶುರುವಾಗಲಿದೆ

ಬಾಲಿವುಡ್ ನಟ ರಣ್‌ಬೀರ್ ಕಪೂರ್ ನಟನೆಯ ‘ಅನಿಮಲ್’ ಸಿನಿಮಾ ಕಳೆದ ವರ್ಷ ರಿಲೀಸ್ ಆಗಿ ಸಕ್ಸಸ್ ಕಂಡಿದೆ. ಈ ಚಿತ್ರದ ಸೀಕ್ವೆಲ್ ಯಾವಾಗ ಎಂಬ ಅಭಿಮಾನಿಗಳ ಕಾತರಕ್ಕೆ ರಣ್‌ಬೀರ್ ಕಪೂರ್ ಗುಡ್ ನ್ಯೂಸ್ ಕೊಟ್ಟಿದ್ದಾರೆ. ‘ಅನಿಮಲ್ 2’ 2027ರಲ್ಲಿ ಶುರುವಾಗಲಿದೆ ಎಂದಿದ್ದಾರೆ.

ಇತ್ತೀಚೆಗೆ ಆಗಮಿಸಿದ ಕಾರ್ಯಕ್ರಮವೊಂದರಲ್ಲಿ ರಣ್‌ಬೀರ್ ಮಾತನಾಡಿ, ‘ಅನಿಮಲ್ ಪಾರ್ಟ್ 2’ 2027ರಲ್ಲಿ ರಿಲೀಸ್ ಆಗಲಿದೆ. ಈ ಚಿತ್ರವನ್ನು ನನಗೆ 3 ಭಾಗಗಳಲ್ಲಿ ಮಾಡಲು ಆಸೆಯಿದೆ. 2ನೇ ಪಾರ್ಟ್‌ಗೆ ‘ಅನಿಮಲ್ ಪಾರ್ಕ್’ ಎಂದು ಟೈಟಲ್ ಇಡಲಾಗಿದೆ. ಈ ಮೊದಲೇ ಈ ಬಗ್ಗೆ ಚರ್ಚಿಸಿದ್ದೇವು ಎಂದಿದ್ದಾರೆ.

ಈ ಚಿತ್ರ ನನಗೆ ತುಂಬಾ ಖುಷಿ ಕೊಟ್ಟಿದೆ. ಒಂದೇ ಸಿನಿಮಾದಲ್ಲಿ ವಿಲನ್ ಮತ್ತು ಹೀರೋ ಎರಡು ಪಾತ್ರದಲ್ಲಿ ನಟಿಸುವ ಚಾನ್ಸ್ ದಕ್ಕಿದೆ ಎಂದು ಖುಷಿಯಿಂದ ರಣ್‌ಬೀರ್ ಮಾತನಾಡಿದ್ದಾರೆ.

ಇನ್ನೂ ಸಂದೀಪ್ ರೆಡ್ಡಿ ವಂಗಾ ನಿರ್ದೇಶನದ ಅನಿಮಲ್ ಸಿನಿಮಾದಲ್ಲಿ ರಣ್‌ಬೀರ್ ಜೊತೆ ರಶ್ಮಿಕಾ ಮಂದಣ್ಣ, ತೃಪ್ತಿ ದಿಮ್ರಿ, ಅನಿಲ್ ಕಪೂರ್, ಬಾಬಿ ಡಿಯೋಲ್ ಸೇರಿದಂತೆ ಅನೇಕರು ನಟಿಸಿದರು. ತಂದೆ ಮತ್ತು ಮಗನ ಬಾಂಧವ್ಯ, ಮತ್ತು ಗೀತಾಂಜಲಿ (ರಶ್ಮಿಕಾ) ಮೇಲಿನ ರಣ್‌ಬೀರ್ ಪ್ರೀತಿಗೆ ಫ್ಯಾನ್ಸ್ ಫಿದಾ ಆಗಿದ್ದರು.



# ತಾಯ್ತನದ ಖುಷಿಯಲ್ಲಿ ಹರಿಪ್ರಿಯಾ

ಸ್ಯಾಂಡಲ್‌ವುಡ್ ನಟಿ ಹರಿಪ್ರಿಯಾ ಅವರು ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ತಾಯ್ತನದ ಕುರಿತು ನಟಿ ಪೋಸ್ಟ್‌ವೊಂದನ್ನು ಹಂಚಿಕೊಂಡಿದ್ದಾರೆ. ಅಮ್ಮನ ಮಡಿಲಲ್ಲಿ ಹರಿಪ್ರಿಯಾ ನಿದ್ದೆ ಮಾಡುತ್ತಿರುವ ವಿಶೇಷ ಫೋಟೋ ಶೇರ್ ಮಾಡಿದ್ದಾರೆ.

ಕಂದ ನನ್ನ ಒಡಲಲ್ಲಿ, ನಾನು ಅಮ್ಮನ ಮಡಿಲಲ್ಲಿ ಎಂದು ನಟಿ ಬರೆದುಕೊಂಡಿದ್ದಾರೆ. ಮನೆಗೆ ಆಗಮಿಸಲಿರುವ ಕಂದನ ಮೇಲಿನ ಮತ್ತು ಅಮ್ಮನ ಮೇಲಿನ ಮಮತೆಯನ್ನು ಈ ಫೋಟೋ ಮೂಲಕ ನಟಿ ವ್ಯಕ್ತಪಡಿಸಿದ್ದಾರೆ.

ಇನ್ನೂ ನವೆಂಬರ್ 1ರಂದು ವಸಿಷ್ಠ ಸಿಂಹ ದಂಪತಿ ಮೊದಲ ಮಗುವಿನ ನಿರೀಕ್ಷೆಯಲ್ಲಿರುವ ವಿಚಾರವನ್ನು ರಿವೀಲ್ ಮಾಡಿದ್ದರು. ಮದುವೆಯ ಬಳಿಕ ಬಣ್ಣದ ಲೋಕದಿಂದ ಅಂತರ ಕಾಯ್ದುಕೊಂಡಿದ್ದಾರೆ. ಈಗ ಹೊಸ ಅತಿಥಿ ಆಗಮಿಸುತ್ತಿರುವ ಖುಷಿಯಲ್ಲಿದ್ದಾರೆ.

ಇನ್ನೂ ವಸಿಷ್ಠ ಸಿಂಹ ಜೊತೆ ಹರಿಪ್ರಿಯಾ ಕಳೆದ ವರ್ಷ ಜ.26ರಂದು ಹಸೆಮಣೆ ಏರಿದರು. ಹಲವು ವರ್ಷಗಳ ಪ್ರೀತಿಗೆ ಮದುವೆಯ ಮುದ್ರೆ ಒತ್ತಿದ್ದರು.



# ಗರ್ಲ್‌ಫ್ರೆಂಡ್ ರಶ್ಮಿಕಾ ಮಂದಣ್ಣಗೆ ಲಕ್ಕಿ ಚಾರ್ಮ್ ಎಂದ ದೇವರಕೊಂಡ



ಟಾಲಿವುಡ್‌ನ ‘ಲೈಗರ್’ ನಟ ವಿಜಯ್ ದೇವರಕೊಂಡ ಅವರು ಕೊನೆಗೂ ಗರ್ಲ್‌ಫ್ರೆಂಡ್ ರಶ್ಮಿಕಾರನ್ನು ಪರಿಚಯಿಸಿದ್ದಾರೆ. ರಶ್ಮಿಕಾ ಮಂದಣ್ಣ ನಟನೆಯ ‘ದಿ ಗರ್ಲ್‌ಫ್ರೆಂಡ್’ ಟೀಸರ್ ರಿಲೀಸ್ ಮಾಡಿ ಚಿತ್ರತಂಡಕ್ಕೆ ವಿಜಯ್ ಶುಭಕೋರಿದ್ದಾರೆ. ಜೊತೆ ನಟಿಯನ್ನು ಲಕ್ಕಿ ಚಾರ್ಮ್ ಎಂದು ಕೊಂಡಾಡಿದ್ದಾರೆ.

‘ದಿ ಗರ್ಲ್‌ಫ್ರೆಂಡ್’ ಸಿನಿಮಾದ ಟೀಸರ್‌ನ ಪ್ರತಿಯೊಂದು ದೃಶ್ಯವು ನನಗೆ ಇಷ್ಟವಾಗಿದೆ. ಈ ಸಿನಿಮಾ ನೋಡಲು ಕಾತರದಿಂದ ಕಾಯುತ್ತಿದ್ದೇನೆ. ಅನೇಕ ನಟರಿಗೆ ರಶ್ಮಿಕಾ ಲಕ್ಕಿ ಚಾರ್ಮ್ ಆಗಿದ್ದಾರೆ. ದೊಡ್ಡ ಯಶಸ್ಸಿಗೆ ಅವರು ಭಾಗವಾಗಿದ್ದಾರೆ. ಇಂದು ಅವರು ಸ್ಟಾರ್ ಆಗಿ ಬೆಳೆದಿದ್ದರು. 8 ವರ್ಷಗಳ ಹಿಂದೆ ಹೇಗೆ ಇದ್ದರೋ ಹಾಗಯೇ ಇದ್ದಾರೆ. 8 ವರ್ಷಗಳ ಹಿಂದೆ ನಾನು ಸೆಟ್‌ನಲ್ಲಿ ಭೇಟಿಯಾದ ಅದೇ ಹುಡುಗಿ ಇವರು ಎಂದು ರಶ್ಮಿಕಾ ಸಿನಿ ಜರ್ನಿಯನ್ನು ಹೊಗಳಿದ್ದಾರೆ. ನಿಮಗೆ ಶುಭವಾಗಲಿ ಎಂದು ವಿಜಯ್ ಹಾರೈಸಿದ್ದಾರೆ.

‘ದಿ ಗರ್ಲ್‌ಫ್ರೆಂಡ್’ ಟೀಸರ್‌ನಲ್ಲಿ ರಶ್ಮಿಕಾ ಹೆಚ್ಚು ಎಲ್ಲೂ ಮಾತನಾಡಿಲ್ಲ. ಬದಲಾಗಿ ಒಳ್ಳೆಯ ಎಕ್ಸ್‌ಪ್ರೆಷನ್ ಕೊಡುವ ಮೂಲಕ ಅವರು ಹೈಲೆಟ್ ಆಗಿದ್ದಾರೆ. ಭಾವನೆಗಳಲ್ಲಿಯೇ ನಟಿ ಸಾಕಷ್ಟು ವಿಷಯಗಳನ್ನು ಹೇಳಿದ್ದಾರೆ. ಕೊಡಗಿನ ಕುವರಿಗೆ ‘ದಿಯಾ’ ಖ್ಯಾತಿಯ ದೀಕ್ಷಿತ್ ಶೆಟ್ಟಿ ಸಾಥ್ ನೀಡಿದ್ದಾರೆ. ಅವರ ಝಲಕ್ ಕೂಡ ಇಲ್ಲಿ ಹೈಲೆಟ್ ಆಗಿದೆ. ‘ಪುಷ್ಪ 2’ ಯಶಸ್ಸಿನಲ್ಲಿ ತೇಲುತ್ತಿರುವ ನಟಿಯ ‘ದಿ ಗರ್ಲ್‌ಫ್ರೆಂಡ್’ ಚಿತ್ರದ ಟೀಸರ್ ನೋಡಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ.

ದೀಕ್ಷಿತ್‌ಗೆ ಗರ್ಲ್‌ಫ್ರೆಂಡ್ ಆಗಿ ರಶ್ಮಿಕಾ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರವನ್ನು ಡೈರೆಕ್ಟರ್ ರಾಹುಲ್ ರವಿಚಂದ್ರನ್ ನಿರ್ದೇಶನ ಮಾಡಿದ್ದಾರೆ. ಗೀತಾ ಆರ್ಟ್ಸ್ ಮೂಲಕ ಅಲ್ಲು ಅರವಿಂದ್ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕನ್ನಡ, ತೆಲುಗು ಸೇರಿದಂತೆ ಹಲವು ಭಾಷೆಗಳಲ್ಲಿ ಮೂಡಿ ಬಂದಿದೆ. ಸದ್ಯದಲ್ಲೇ ರಿಲೀಸ್ ಡೇಟ್ ಕುರಿತು ಚಿತ್ರತಂಡ ಮಾಹಿತಿ ನೀಡಲಿದೆ.



ಐಸಿಸಿ ಅಂಗಳ ತಲುಪಿದ ಸಿರಾಜ್ – ಹೆಡ್ ವಾಗ್ವಾದ

# ಇಬ್ಬರಿಗೂ ಬ್ಯಾನ್ ಭೀತಿ?

ಇಲ್ಲಿನ ಕ್ರೀಡಾಂಗಣದಲ್ಲಿ ನಡೆದ ಬಾರ್ಡರ್ ಗವಾಸ್ಕರ್ ಟ್ರೋಫಿ ಪಿಂಕ್ ಬಾಲ್ ಟೆಸ್ಟ್ ಪಂದ್ಯದ ವೇಳೆ ಆಸ್ಟ್ರೇಲಿಯಾ ಸ್ಟಾರ್ ಬ್ಯಾಟರ್ ಟ್ರಾವಿಸ್ ಹೆಡ್ ಹಾಗೂ ಟೀಂ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್ ನಡುವಿನ ವಾಗ್ವಾದ ಐಸಿಸಿ ಅಂಗಳ ತಲುಪಿದೆ. ಇದರಿಂದ ಇಬ್ಬರ ವಿರುದ್ಧವೂ ಐಸಿಸಿ ಶಿಸ್ತುಕ್ರಮ ಕೈಗೊಳ್ಳುವ ಸಾಧ್ಯತೆಯಿದೆ ಎಂದು ವರದಿಯಾಗಿದೆ.

ಹೌದು. ಭಾರತ ಮತ್ತು ಆಸೀಸ್ ನಡುವಿನ 2ನೇ ಟೆಸ್ಟ್ ಪಂದ್ಯದ ವೇಳೆ ಆಸೀಸ್‌ನ ಮೊದಲ ಇನ್ನಿಂಗ್ಸ್‌ನಲ್ಲಿ ಸಿರಾಜ್ ಎಸೆದ ಯಾರ್ಕರ್‌ಗೆ ಟ್ರಾವಿಸ್ ಹೆಡ್ ಕ್ಲೀನ್ ಬೌಲ್ಡ್ ಆಗಿದ್ದರು. ಅಷ್ಟರಲ್ಲಾಗಲೇ 140 ರನ್ ಬಾರಿಸಿದ್ದರು. ಟ್ರಾವಿಸ್ ಹೆಡ್ ಔಟಾಗುತ್ತಿದ್ದಂತೆ ವೆಲ್ ಬೌಲ್ ಎಂದು ಹೇಳಿರುವುದಾಗಿ ಹೇಳಿಕೊಂಡಿದ್ದಾರೆ. ಈ ವೇಳೆ ಸಿರಾಜ್ ಅವರು ತೋರಿದ ಅತಿರೇಖದ ವರ್ತನೆ ಈಗ ಚರ್ಚೆಗೆ ಗ್ರಾಸವಾಗಿದೆ.

ಔಟಾದ ಬಳಿಕ ಸಿರಾಜ್‌ಗೆ ಹೆಡ್ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದರು. ಆದರೆ ಅವರಿಬ್ಬರ ನಡುವೆ ವಿನಿಮಯವಾದ ಮಾತುಗಳು ಏನು ಎನ್ನುವುದು ಸ್ಪಷ್ಟವಾಗಿಲ್ಲ. ಆದ್ರೆ, ಇದನ್ನು ಅಭಿಮಾನಿಗಳು ಸುಮ್ಮನೆ ಬಿಡಲಿಲ್ಲ. ಸಿರಾಜ್ ಬೌಂಡರಿ ಲೈನ್ ಬಳಿ ಫೀಲ್ಡಿಂಗ್‌ಗೆ ನಿಂತಿದ್ದಾಗ ಆಸ್ಟ್ರೇಲಿಯಾ ಪ್ರೇಕ್ಷಕರು ‘ಬೂ’ ಎಂದು ಅವರನ್ನು ಅಣುಕಿಸಿದ್ದರು. ಈ ವಿವಾದ ಐಸಿಸಿ ಅಂಗಳ ತಲುಪಿದ್ದು, ಇಬ್ಬರಿಗೂ ದಂಡ ವಿಧಿಸುವ ಅಥವಾ ಒಂದು ಪಂದ್ಯಕ್ಕೆ ಬ್ಯಾನ್ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.




**ಟ್ರಾವಿಸ್ ಹೆಡ್ ಹೇಳಿದ್ದೇನು?:** 2ನೇ ದಿನದ ಆಟ ಮುಕ್ತಾಯಗೊಂಡ ಬಳಿಕ ಟ್ರಾವಿಸ್ ಹೆಡ್ ಪೋಸ್ಟ್ ಪ್ರೆಸೆಂಟೇಷನ್‌ನಲ್ಲಿ ಮಾತನಾಡಿದ್ದರು. ನಾನು ಔಟಾದ ಬಳಿಕ ‘ಚೆನ್ನಾಗಿ ಬೌಲ್ ಮಾಡಿದ್ದಿರಿ’ ಎಂದು ಹೇಳಿದೆ. ಆದ್ರೆ, ಸಿರಾಜ್ ತಪ್ಪಾಗಿ ಅರ್ಥೈಸಿಕೊಂಡರು. ಇದು ಸ್ವಲ್ಪ ಜಾಸ್ತಿ ಆಯ್ತು ಎಂದು ಹೆಡ್ ಸ್ಪಷ್ಟನೆ ನೀಡಿದ್ದರು.

**ಸಿರಾಜ್ ಪ್ರತಿಕ್ರಿಯೆ ಏನು?:** ಮರುದಿನ ಹರ್ಭಜನ್ ಸಿಂಗ್ ಅವರೊಂದಿಗೆ ನಡೆದ ಚುಟುಕು ಸಂದರ್ಶನದಲ್ಲಿ ಈ ಕುರಿತು ಮಾತನಾಡಿದ್ದ ಸಿರಾಜ್, ಹೆಡ್ ಹೇಳಿಕೆಯನ್ನು ನಿರಾಕರಿಸಿದ್ದರು. ‘ಚೆನ್ನಾಗಿ ಬೌಲ್ ಮಾಡಿದ್ದಿ’ ಎಂಬುದಾಗಿ ಹೆಡ್ ಹೇಳಲೇ ಇಲ್ಲ. ಒಳ್ಳೆಯ ಎಸೆತವನ್ನು ಸಿಕ್ಸರ್‌ಗೆ ಬಾರಿಸಿದಾಗ, ಅದು ನಿಮ್ಮಲ್ಲಿ ವಿಭಿನ್ನವಾಗಿ ಕಿಚ್ಚು ಹೊತ್ತಿಸುತ್ತದೆ. ನಾನು ಅವರನ್ನು ಬೌಲ್ಡ್ ಮಾಡಿದಾಗ ನಾನು ಸಂಭ್ರಮಿಸಿದ್ದೆ ಅಷ್ಟೆ. ಆಗ ಅವರು ನನ್ನನ್ನು ನಿಂದಿಸಿದರು. ಅವರು ನನಗೆ ಹೇಳಿದ್ದು ಅದನ್ನಲ್ಲ ಎನ್ನುವುದು ಎಲ್ಲರಿಗೂ ಕಾಣುವಂತಿದೆ. ನಾವು ಎಲ್ಲರನ್ನೂ ಗೌರವಿಸುತ್ತೇವೆ. ಏಕೆಂದರೆ ಕ್ರಿಕೆಟ್ ಜೆಂಟಲ್‌ಮನ್‌ಗಳ ಆಟ ಎಂದು ತಿಳಿಸಿದ್ದರು.

ಮೂರನೇ ದಿನ ಸಿರಾಜ್ ಬ್ಯಾಟಿಂಗ್‌ಗೆ ಬಂದಾಗ, ಹೆಡ್ ಮತ್ತು ಅವರ ನಡುವೆ ಸ್ವಲ್ಪ ಹೊತ್ತು ಮಾತುಕತೆ ನಡೆದಿತ್ತು. ಅವರಿಬ್ಬರೂ ವಿವಾದ ಇತ್ಯರ್ಥಪಡಿಸಿಕೊಂಡರು, ಇದನ್ನು ಇಲ್ಲಿಗೆ ಬಿಟ್ಟು ಮುಂದೆ ಹೋಗೋಣ ಅಂತ ಹೇಳಿದ್ದರು ಎನ್ನಲಾಗಿದೆ. ಪಂದ್ಯ ಮುಗಿದ ಬಳಿಕ ಇಬ್ಬರೂ ಪರಸ್ಪರ ಆಲಂಗಿಸಿಕೊಂಡ ಚಿತ್ರ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

# ಝಿಂಬಾಬ್ವೆ ಪರ ಕಣಕ್ಕಿಳಿಯಲಿದ್ದಾರೆ ಕರನ್ ಸಹೋದರ

ಇಂಗ್ಲೆಂಡ್ ತಂಡದ ಸ್ಟಾರ್ ಆಲ್‌ರೌಂಡರ್‌ಗಳಾದ ಸ್ಯಾಮ್ ಕರನ್ ಹಾಗೂ ಟಾಮ್ ಕರನ್ ಸಹೋದರ ಬೆನ್ ಕರನ್ ಝಿಂಬಾಬ್ವೆ ಪರ ಕಣಕ್ಕಿಳಿಯಲಿದ್ದಾರೆ. ಅಫ್ಘಾನಿಸ್ತಾನ್ ವಿರುದ್ಧದ ಏಕದಿನ ಸರಣಿಗೆ ಆಯ್ಕೆ ಮಾಡಲಾದ ಝಿಂಬಾಬ್ವೆ ತಂಡದಲ್ಲಿ ಬೆನ್ ಕರನ್ ಸ್ಥಾನ ಪಡೆದಿದ್ದಾರೆ.

ಇಂಗ್ಲೆಂಡ್‌ನಲ್ಲಿ ಕ್ರಿಕೆಟ್ ಕೆರಿಯರ್ ಆರಂಭಿಸಿದ್ದ ಬೆನ್ ಕರನ್ 45 ಪ್ರಥಮ ದರ್ಜೆ ಪಂದ್ಯಗಳನ್ನಾಡಿದ್ದಾರೆ. ಹಾಗೆಯೇ 36 ಲಿಸ್ಟ್ ಎ ಪಂದ್ಯಗಳಲ್ಲಿ ಕಾಣಿಸಿಕೊಂಡಿದ್ದಾರೆ. ಇದಾಗ್ಯೂ ಅವರಿಗೆ ಇಂಗ್ಲೆಂಡ್ ತಂಡದಲ್ಲಿ ಸ್ಥಾನ ಸಿಕ್ಕಿರಲಿಲ್ಲ. ಹೀಗಾಗಿ ಬೆನ್ ಝಿಂಬಾಬ್ವೆಯತ್ತ ಮುಖ ಮಾಡಿದ್ದಾರೆ.

ಕುತೂಹಲಕಾರಿ ವಿಷಯ ಎಂದರೆ, ಕರನ್ ಸಹೋದರರ ತಂದೆ ಕೆವಿನ್ ಕರನ್ ಝಿಂಬಾಬ್ವೆ ಮೂಲದವರು. ಅಲ್ಲದೆ 1983 ಮತ್ತು 1987ರ ನಡುವೆ ಕೆವಿನ್ ಝಿಂಬಾಬ್ವೆ ಪರ 11 ಏಕದಿನ ಪಂದ್ಯಗಳನ್ನಾಡಿದ್ದಾರೆ. ಇದಾದ ಬಳಿಕ ಇಂಗ್ಲೆಂಡ್‌ಗೆ ವಲಸೆ ಬಂದಿದ್ದ ಅವರು ಇಲ್ಲಿಯೇ ನೆಲೆ ಕಂಡುಕೊಂಡರು.




ಕೆವಿನ್ ಕರನ್ ಅವರು ಇಂಗ್ಲೆಂಡ್ ಪೌರತ್ವ ಹೊಂದಿದ್ದ ಕಾರಣ ಅವರ ಮಕ್ಕಳು ಸಹ ಆಂಗ್ಲ ತಂಡದ ಕಣಕ್ಕಿಳಿದ್ದಿದ್ದರು. ಆದರೀಗ ಬೆನ್ ಕರನ್ ಮಾತ್ರ ತಂದೆಯ ಹಾದಿಯಲ್ಲಿ ನಡೆದಿದ್ದಾರೆ. ಈ ಹಿಂದೆ ತಂದೆ ಪ್ರತಿನಿಧಿಸಿದ್ದ ರಾಷ್ಟ್ರದ ಪರ ಕಣಕ್ಕಿಳಿಯಲು ಸಜ್ಜಾಗಿದ್ದಾರೆ. ಅದರ ಮೊದಲ ಹೆಜ್ಜೆಯಾಗಿ ಇದೀಗ ಝಿಂಬಾಬ್ವೆ ಏಕದಿನ ತಂಡದಲ್ಲಿ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಝಿಂಬಾಬ್ವೆ ಏಕದಿನ ತಂಡ: ಕ್ರೇಗ್ ಎರ್ವಿನ್ (ನಾಯಕ), ಬ್ರಿಯಾನ್ ಬೆನೆಟ್, ಬೆನ್ ಕರನ್, ಜಾಯ್ಲಾರ್ಡ್ ಗುಂಬಿ, ಟ್ರೆವರ್ ಗ್ವಾಂಡು, ಟಿನೊಟೆಂಡಾ ಮಪೋಸಾ, ತಡಿವಾನಾಶೆ ಮರುಮಾನಿ, ವೆಲ್ಲಿಂಗ್ಟನ್ ಮಸಕಡ್ಜ್ಜ, ತಶಿಂಗಾ ಮುಸೆಕಿವಾ, ಬ್ಲೆಸ್ಸಿಂಗ್ ಮುಝರಬಾನಿ, ಡಿಯೋನ್ ಮೈಯರ್ಸ್, ರಿಚರ್ಡ್ ನ್ಗರವಾ, ನ್ಯೂಮನ್ ನ್ಯಾಮುರಿ, ಸಿಕಂದರ್ ರಾಝ, ವಿಕ್ಟರ್ ನ್ಯಾಯುಚಿ, ಸೀನ್ ವಿಲಿಯಮ್ಸ್.

ನ್ಯಾಯಾಂಗ ನಿಂದನೆ: ಮುಡಾ ಆಯುಕ್ತರಿಗೆ ದೂರುದಾರ

# ಸ್ನೇಹಮಯಿ ಕೃಷ್ಣ ಮತ್ತೊಂದು ಪತ್ರ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾಗಿರುವ ಹಗರಣ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉರುಳಾಗಿ ಪರಿಣಮಿಸಿದೆ. ಪ್ರಕರಣದ ತನಿಖೆಯನ್ನು ಮೈಸೂರು ಲೋಕಾಯುಕ್ತ ಮತ್ತು ಜಾರಿ ನಿರ್ದೇಶನಾಲಯ (ಇಡಿ) ನಡೆಸುತ್ತಿರುವ ನಡುವೆಯೇ ಆರ್‌ಟಿಐ ಕಾರ್ಯಕರ್ತ, ದೂರುದಾರ ಸ್ನೇಹಮಯಿ ಕೃಷ್ಣ ಅವರು ಮುಡಾ ಆಯುಕ್ತರಿಗೆ ಮತ್ತೊಂದು ಪತ್ರ ಬರೆದಿದ್ದಾರೆ.

ಮುಡಾ ಪ್ರಕರಣ ಕೋರ್ಟ್‌ಗಳ ಆದೇಶಗಳು: ಸತ್ಯಾಸತ್ಯತೆ ಎಂಬ ಪುಸ್ತಕವನ್ನು ಜಾಗೃತ ವಕೀಲರ ವೇದಿಕೆ ಪ್ರಕಟಿಸಿದೆ. ಇದಕ್ಕೆ ಸ್ನೇಹಮಯಿ ಕೃಷ್ಣ ಅವರು ಆಕ್ಷೇಪ ವ್ಯಕ್ತಪಡಿಸಿದ್ದು, ಸತ್ಯಾಂಶವನ್ನು ಜನರಿಗೆ ತಿಳಿಸುವಂತೆ ಮುಡಾ ಆಯುಕ್ತರಿಗೆ 6 ಪುಟಗಳ ಪತ್ರದ ಮೂಲಕ ಮನವಿ ಮಾಡಿದ್ದಾರೆ.

ಕೆಸರೆ ಗ್ರಾಮದ ಸರ್ವೆ ನಂ.464 ರ ಸಂಬಂಧ ನಿಮ್ಮ ಅಧಿಕಾರಿ ಮತ್ತು ಕಾನೂನು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ದಾಖಲೆಗಳೊಂದಿಗೆ ಕೂಡಲೇ ಪತ್ರಿಕಾ ಹೇಳಿಕೆಯ ಮೂಲಕ ಸತ್ಯವನ್ನು ರಾಜ್ಯದ ಜನತೆಗೆ ತಿಳಿಸಲು ಹಾಗೂ ನ್ಯಾಯಾಂಗ ನಿಂದನೆ ಆಗುವುದನ್ನು ಮತ್ತು ಸಮಾಜದ ಸ್ವಾಸ್ಥ್ಯ ಹಾಳಾಗುವುದನ್ನು ತಪ್ಪಿಸಲು ಮನವಿ ಮಾಡಿದ್ದಾರೆ.





**ಪತ್ರದಲ್ಲಿ ಏನಿದೆ?:** ‘‘ಮುಡಾ ಹಗರಣದ ತನಿಖೆ ಮತ್ತು ವಿಚಾರಣೆ ನಡೆಯುತ್ತಿದೆ ಎಂಬ ಕಾರಣಗಳನ್ನು ನೀಡಿ, ಪತ್ರಿಕಾ ಹೇಳಿಕೆಯ ಮೂಲಕ ಸ್ಪಷ್ಟಿಕರಣ ಕೊಡುವುದಿಲ್ಲ, ಸತ್ಯವನ್ನು ತಿಳಿಸುವುದಿಲ್ಲ ಎಂದು ಹೇಳಬಾರದು. ಏಕೆಂದರೆ ತನಿಖೆ ಮತ್ತು ವಿಚಾರಣೆ ನಡೆಯುತ್ತಿದೆ ಎಂಬ ಕಾರಣಕ್ಕೆ ರಾಜ್ಯದ ಜನರಿಗೆ ಸತ್ಯ ತಿಳಿಸಬಾರದು ಎಂಬ ನಿಯಮ ಇರುವುದಿಲ್ಲ. ನ್ಯಾಯಾಂಗ ನಿಂದನೆಯಂತಹ ಗಂಭೀರವಾದ ವಿಚಾರ ಇರುವುದರಿಂದ, ಸಮಾಜದ ಸ್ವಾಸ್ಥ್ಯ ಹಾಳಾಗುತ್ತಿರುವುದರಿಂದ ಸದುದ್ದೇಶದಿಂದ ಜನತೆಗೆ ಸತ್ಯವನ್ನು ತಿಳಿಸಿ, ಮುಂದಿನ ದಿನಗಳಲ್ಲಿ ನ್ಯಾಯಾಂಗ ನಿಂದನೆ ಆಗುವುದನ್ನು ತಡೆಯಬೇಕೆಂದು’’ ಮನವಿ ಮಾಡಿದ್ದಾರೆ.

‘‘ಸಮಾಜದ ಸ್ವಾಸ್ಥ್ಯ ಹಾಳಾಗುವುದನ್ನು ತಡೆಯುವುದು ನಿಮ್ಮಂತಹ ಜವಾಬ್ದಾರಿಯುತ ಅಧಿಕಾರಿಗಳ ಆದ್ಯ ಕರ್ತವ್ಯವಾಗಿದೆ. ಈ ಬಗ್ಗೆ ನಿಮ್ಮ ಕಾನೂನು ಅಧಿಕಾರಿಯಿಂದ ಕಾನೂನು ಅಭಿಪ್ರಾಯ ಪಡೆಯಬಹುದಾಗಿದೆ. ನೀವು ಈ ಮನವಿ ಪತ್ರ ಸ್ವೀಕರಿಸಿದ ಮೂರು ದಿನಗಳಲ್ಲಿ ಮೇಲ್ಕಂಡ ನನ್ನ ಮನವಿಯಂತೆ ರಾಜ್ಯದ ಜನತೆಗೆ ಸತ್ಯವನ್ನು ತಿಳಿಸದಿದ್ದಲ್ಲಿ ನ್ಯಾಯಾಂಗ ನಿಂದನೆಯಂತಹ ಕೃತ್ಯಕ್ಕೆ ಪರೋಕ್ಷವಾಗಿ ಪ್ರಚೋದನೆ ನೀಡುತ್ತಿದ್ದೀರ ಎಂದು ಪರಿಗಣಿಸಿ. ನಿಮ್ಮ ವಿರುದ್ಧ ಕ್ರಮ ತೆಗೆದುಕೊಳ್ಳಲು ಮಾನ್ಯ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸುವುದು ಅನಿವಾರ್ಯವಾಗುತ್ತದೆ’’ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

# ಅರಣ್ಯ ಭೂಮಿ ಒತ್ತುವರಿ ತೆರವಿಗೆ ಪ್ರತಿಭಟನೆ

## ರೈತ ಸಂಘದ ಸದಸ್ಯರ ಮೇಲೆ ಕೈ ಮುಖಂಡರಿಂದ ಹಲ್ಲೆ

**ಕೋಲಾರ:** ಜಿಲ್ಲೆಯಲ್ಲಿ ಅರಣ್ಯ ಭೂಮಿ ಒತ್ತುವರಿ ತೆರವಿಗೆ ನಡೆಸಿದ್ದ ಪ್ರತಿಭಟನಾ ನಿರತ ರೈತ ಸಂಘದ ಮುಖಂಡರ ಮೇಲೆ ಕಾಂಗ್ರೆಸ್ ಮುಖಂಡರು ಹಲ್ಲೆ ನಡೆಸಿದ್ದಾರೆ.

ಕೋಲಾರ ಜಿಲ್ಲೆಯ ಶ್ರೀನಿವಾಸಪುರದ ತಾಲ್ಲೂಕು ಕಚೇರಿ ಎದುರಿಗೆ ನಿನ್ನೆ ರೈತ ಸಂಘದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಮಾಜಿ ಸ್ಪೀಕರ್ ರಮೇಶ್ ಕುಮಾರ್ ಬೆಂಬಲಿಗರು ಹಾಗೂ ರೈತ ಸಂಘದ ಮುಖಂಡರ ಮೇಲೆ ಗಲಾಟೆ ನಡೆದಿದೆ.

ಕೆಲಕಾಲ ತಳ್ಳಾಟ ನೂಕಾಟ ನಡೆಸಿದ್ದು, ರೈತ ಮುಖಂಡ ನಾರಾಯಣಗೌಡ, ಮಂಜುನಾಥ್ ಸೇರಿದಂತೆ ಹಲವರ ಮೇಲೆ ಹಲ್ಲೆ ನಡೆಸಿದ್ದಾರೆ. ಪೊಲೀಸರ ಸಮ್ಮುಖದಲ್ಲಿಯೇ ಕಾಂಗ್ರೆಸ್ ಮುಖಂಡರು ಹಲ್ಲೆ ಮಾಡಿದ್ದಾರೆ. ಶ್ರೀನಿವಾಸಪುರ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.



**ಪ್ರತಿಭಟನೆ ಯಾಕೆ?:** ಕೋಲಾರ ಜಿಲ್ಲೆಯ ಶ್ರೀನಿವಾಸಪುರದ ತಾಲೂಕಿನ ಜಿನಗಲಕುಂಟೆ ಗ್ರಾಮದ ಬಳಿಯಿರುವ ಸರ್ವೆ ನಂ.1 ಮತ್ತು 2ರಲ್ಲಿ 122 ಎಕರೆಯನ್ನು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಅರಣ್ಯ ಭೂಮಿ ಒತ್ತುವರಿ ಮಾಡಿದ್ದಾರೆ ಎಂದು ಆರೋಪಿಸಿದ್ದರು. ಏಳು ಜನ ಒತ್ತುವರಿದಾರರಲ್ಲಿ ರಮೇಶ್ ಕುಮಾರ್‌ಗೆ 61 ಎಕರೆ ಅರಣ್ಯ ಭೂಮಿ ಸೇರಿತ್ತು. ಈ ಹಿನ್ನೆಲೆ ನ.6ರಂದು ಕಂದಾಯ ಹಾಗೂ ಅರಣ್ಯ ಇಲಾಖೆಯಿಂದ ಸರ್ವೇ ನಡೆಸಲು ಸುಪ್ರೀಂ ಕೋರ್ಟ್ ಸೂಚನೆ ನೀಡಿತ್ತು. ಜೊತೆಗೆ ಸರ್ವೆ ಮಾಡಿ ವರದಿ ಸಲ್ಲಿಸುವಂತೆ ತಿಳಿಸಿತ್ತು. ಆದರೆ ಕಾರಣಾಂತರಗಳಿಂದ ಸರ್ವೆ ಕಾರ್ಯ ನಡೆದಿರಲಿಲ್ಲ. ಈ ಹಿನ್ನೆಲೆ ರೈತ ಸಂಘದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com